ಸಂಪುಟ: ೦೬/ ಸಂಚಿಕೆ: ೨೪೪/ಮಂಗಳವಾರ ದಿನಾಂಕ: ೨೬-೧೧-೨೦೨೪/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 244/ TUESDAY Date : 26-11-2024/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

### ॥ ಸಪ್ತಮುಷಿವಾಣಿ ॥

ಬದುಕಿನಲ್ಲಿ ನಾವು ಇನ್ನೊಬ್ಬರ ವಿಷಯವನ್ನು ಇಣುಕಿ ನೋಡುವುದನ್ನು ಬಿಟ್ಟಾಗಲೇ! ನಮ್ಮ ಜೀವನ ನಮಗೆ ಸುಂದರವಾಗಿ ಕಾಣಲು ಸಾಧ್ಯ.

ಧಾರ್ಮಿಕ ಮಾರ್ಗದರ್ಶಕ
ಸಂತೋಷ ಆಚಾರ್ಯ, ಉಡುಪಿ

## ರಾಜ್ಯಕ್ಕೆ ૩ನೇ ಶಕ್ತಿ ಬೇಕಾಗಿದೆ ಮಾಜಿ ಸಚಿವ ಸಿ ಎಂ ಇಬ್ರಾಹಿಂ



ಮೈಸೂರು : ನಾವು ಜೆಡಿ–ಎಸ್ ಬಿಡುವುದಿಲ್ಲ, ಜೆಡಿಎಸ್ ನಮ್ಮದು. ರಾಜ್ಯಕ್ಕೆ 3ನೇ ಶಕ್ತಿ ಬೇಕಾಗಿದೆ. ಹಾಗಾಗಿ ಜಿ. ಟಿ ದೇವೇಗೌಡರ ಜತೆ ಮಾತನಾಡಿ ನಮ್ಮ ಸಂಪರ್ಕದಲ್ಲಿರುವ ಶಾಸಕರ ತೀರ್ಮಾನದಂತೆ ಚರ್ಚಿಸಿ ಮುಂದುವರೆಯುತ್ತೇನೆ ಎಂದು ಮಾಜಿ ಸಚಿವ ಸಿ. ಎಂ ಇಬ್ರಾಹಿಂ ಹೇಳಿದ್ದಾರೆ.

ಜೆಡಿಎಸ್ ಶಾಸಕ ಜಿ. ಟಿ ದೇವೇಗೌಡ ಅವರಿಗೆ ಹುಟ್ಟುಹಬ್ಬದ ಶುಭಾಶಯ ಹೇಳಲು ಮೈಸೂರಿಗೆ ಆಗಮಿಸಿ, ನಂತರ ಮಾಧ್ಯಮದವರೊಂದಿಗೆ ಅವರು ಮಾತನಾಡಿದರು. ರಾಜ್ಯದಲ್ಲಿ ಹಾಗೂ ಮೈಸೂರು ಜಿಲ್ಲೆಯಲ್ಲಿ ಶಾಸಕ ಜಿ. ಟಿ ದೇವೇಗೌಡರಿಗೆ ಅವರದ್ದೇ ಆದ ಶಕ್ತಿಯಿದೆ. ಅವರ ಜತೆ ಫೋನ್‌ನಲ್ಲಿ ಮಾತನಾಡಿದ್ದೆ. ಈಗ ನೇರವಾಗಿ ಅವರಿಗೆ ಹುಟ್ಟುಹಬ್ಬದ ಶುಭಾಶಯ ಹೇಳಿ ಮಾತನಾಡಲು ಬಂದಿದ್ದೇನೆ ಎಂದಿದ್ದಾರೆ.

ನಾವು ಜೆಡಿಎಸ್ ಬಿಡುವುದಿಲ್ಲ, ಜೆಡಿಎಸ್ ನಮ್ಮದೇ. ನಾವೇ ಅದರ ನೇತೃತ್ವ ತೆಗೆದುಕೊಳ್ಳುತ್ತೇವೆ. ರಾಜ್ಯಕ್ಕೆ ಮೂರನೇ ಶಕ್ತಿ ಬೇಕಾಗಿದೆ. ಹಾಗಾಗಿ ನಾವೆಲ್ಲಾ ಜಿ. ಟಿ ದೇವೇಗೌಡರ ಜತೆ ಮಾತನಾಡುತ್ತೇವೆ. ನಮ್ಮ ಸಂಪರ್ಕದಲ್ಲಿರುವ ಶಾಸಕರುಗಳ ತೀರ್ಮಾನದಂತೆ ಮುಂದಿನ ತೀರ್ಮಾನ ಮಾಡುತ್ತೇವೆ ಎಂದು ಹೇಳಿದ್ದಾರೆ.

# ಕಾಲುವೆಗಳಿಂದ ಅಕ್ರಮವಾಗಿ ನೀರು ಎತ್ತದಂತೆ ತಡೆಯಲು ಟಾಸ್ಕ್ ಫೋರ್ಸ್ : ಡಿ.ಕೆ.ಶಿವಕುಮಾರ್

ಬೆಂಗಳೂರು : ಕಾಲುವೆಗಳಿಂದ ಅಕ್ರಮವಾಗಿ ನೀರನ್ನು ಎತ್ತುವುದನ್ನು ತಡೆಯಲು ನೀರಾವರಿ ಇಲಾಖೆ ಅಧಿಕಾರಿಗಳ ಜತೆಗೆ ಪಂಪ್ ಸೆಟ್‌ಗಳಿಗೆ ವಿದ್ಯುತ್ ಪೂರೈಸುವ ಇಂಧನ ಇಲಾಖೆ ಅಧಿಕಾರಿಗಳನ್ನು ಒಳಗೊಂಡಂತೆ ಟಾಸ್ಕ್ ಫೋರ್ಸ್ ರಚಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಸೋಮವಾರ ವಿಕಾಸಸೌಧದಲ್ಲಿ ಏರ್ಪಡಿಸಲಾಗಿದ್ದ ಕರ್ನಾಟಕ ನೀರಾವರಿ(ತಿದ್ದುಪಡಿ) ಅಧಿನಿಯಮ ಕುರಿತ ಅಧಿಕಾ–ರಿಗಳು ಹಾಗೂ ಇಂಜಿನಿಯರ್ ಗಳ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನೀರು ಬಳಕೆದಾರರ ಸಹಕಾರ ಸಂಘಕ್ಕೆ ಶಕ್ತಿ ತುಂಬಬೇಕು. ಇದಕ್ಕೆ ಶಕ್ತಿ ತುಂಬಿ ಕಾಲುವೆಗಳಿಂದ ಅಕ್ರಮವಾಗಿ ನೀರು ಎತ್ತದಂತೆ ರೈತರಲ್ಲಿ ಅರಿವು ಮೂಡಿಸಬೇಕು. ಹಂತಹಂತವಾಗಿ ಕರ್ನಾಟಕ ನೀರಾವರಿ(ತಿದ್ದುಪಡಿ) ಅಧಿನಿಯಮ 2024 ಅನ್ನು ಜಾ–ರಿಗೊಳಿಸಿ ಎಂದು ಎಂದು ಡಿ.ಕೆ.ಶಿವಕುಮಾರ್ ಅಧಿಕಾರಿಗಳಿಗೆ ಹೇಳಿದರು.

ಸಚಿವ ಎಚ್.ಕೆ ಪಾಟೀಲ್ ಅವರು ನೀರು ಬಳಕೆದಾರರ ಸಹಕಾರ ಸಂಘ ಆರಂಭಿಸಿದ್ದು, ಅದು ಸರಿಯಾದ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿಲ್ಲ. ಅದನ್ನು ಬಲಪಡಿಸಬೇಕಿದೆ ಎಂದು ಡಿ.ಕೆ.ಶಿವಕುಮಾರ್ ತಿಳಿಸಿದರು.

ಮುಂದಿನ ದಿನಗಳಲ್ಲಿ ಚರ್ಚಿಸಿ ಬಜೆಟ್‌ನಲ್ಲಿ ಹಣ ಮೀಸಲಿಟ್ಟು, ವಾಲ್ಮಿ



(ಜಲ ಮತ್ತು ನೆಲ ನಿರ್ವಹಣೆ ಸಂಸ್ಥೆ) ನೇತೃತ್ವದಲ್ಲಿ ಈ ಸಹಕಾರ ಸಂಘಗಳಿಗೆ ಜವಾಬ್ದಾರಿ ನೀಡಲಾಗುವುದು. ಈ ಸಂಘಗಳ ಸ್ವರೂಪದ ಜವಾಬ್ದಾರಿ ನಿಮಗೆ ನೀಡುತ್ತಿದ್ದೇವೆ. ಕೆರೆ ತುಂಬಿಸುವ ಯೋಜನೆಗಳಿಗೆ ಬಹಳಷ್ಟು ವೆಚ್ಚ ಮಾಡಲಾಗಿದೆ. ಕುಡಿಯುವ ಉದ್ದೇಶಕ್ಕೆ ತುಂಬಿಸುವ ನೀರನ್ನು ನೀರಾವರಿಗೆ ಬಳಸಿದರೆ ಈ ಯೋಜನೆ ಉದ್ದೇಶವೇನು? ಈ ಬಗ್ಗೆಯೂ ವ್ಯಾಪಕ ಚರ್ಚೆಯಾಗಬೇಕು ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

ನೀರು ಬಳಕೆದಾರರ ಫೆಡರೇಷನ್ ಸ್ಥಾಪಿಸಬೇಕು. ಮುಂದಿನ ಎರಡ್ಮೂರು ತಿಂಗಳಲ್ಲಿ ಇದರ ಬಗ್ಗೆ ನೀವು ಅವಲೋಕನ ಮಾಡಬೇಕು. ರೈತ–ರಿಗೆ ನೀಡುವ ಉಚಿತ ವಿದ್ಯುತ್‌ಗೆ 13 ಸಾವಿರ ಕೋಟಿ ವೆಚ್ಚ ಮಾಡಲಾಗುತ್ತಿದೆ. ಇದು ಸರಿಯಾದ ರೀತಿಯಲ್ಲಿ ಬಳಕೆಯಾಗಬೇಕು ಎಂದು ಡಿ.ಕೆ.ಶಿವಕುಮಾರ್ ತಿಳಿಸಿದರು.

ಕರ್ನಾಟಕ ನೀರಾವರಿ(ತಿದ್ದುಪಡಿ) ಅಧಿನಿಯಮ 2024ರಲ್ಲಿ ಬಹಳ ಮಹತ್ತರ ತಿದ್ದುಪಡಿ ತರಲಾಗಿದೆ. ಈ ಕುರಿತು ಇನ್ನಷ್ಟು ಚರ್ಚೆ ನಡೆಯಲಿದ್ದು, ಜನರನ್ನು ಎತ್ತಿಕಟ್ಟುವ ಪ್ರಯತ್ನ ನಡೆಯಲಿದೆ. ರೈತರನ್ನು ಉಳಿಸುವುದು ನಮ್ಮ ಉದ್ದೇಶ. ಒಬ್ಬ–ರಿಗೆ ಒಂದು ಕಾನೂನು ಮತ್ತೊಬ್ಬ–ರಿಗೆ ಬೇರೆ ಕಾನೂನು ಮಾಡಲು ಸಾಧ್ಯವಿಲ್ಲ. ಈ ತಿದ್ದುಪಡಿ ಮೂಲಕ ಉಪ ಆಯುಕ್ತರ ಅಧಿಕಾರವನ್ನು ಸೂಪರಿಂಡೆಂಟೆಡ್ ಇಂಜಿನಿಯರ್ ಗೆ ನೀಡಿದ್ದೇವೆ. ಈ ವಿಚಾರವನ್ನು ನೀವು ಗಮನದಲ್ಲಿಟ್ಟುಕೊಳ್ಳಬೇಕು ಎಂದು ಡಿ.ಕೆ.ಶಿವಕುಮಾರ್ ತಿಳಿಸಿದರು.

ಎತ್ತಿನಹೊಳೆ ಯೋಜನೆಯನ್ನು ನಾವು 25 ಸಾವಿರ ಕೋಟಿವೆಚ್ಚ ಮಾಡಿದ್ದೇವೆ. ಇಷ್ಟು ಹಣ ಖರ್ಚು ಮಾಡಿ ಕೋಲಾರ, ಚಿಕ್ಕಬಳ್ಳಾಪುರಕ್ಕೆ ನೀರು ಒದಗಿಸದಿದ್ದರೆ ಹೇಗೆ. ಈ ಯೋಜನೆಯಲ್ಲಿ 3 ತಿಂಗಳಲ್ಲಿ ಸಿಗುವ ನೀರು ಕೇವಲ 24 ಟಿಎಂಸಿಯಷ್ಟು ಮಾತ್ರ. ಮುಂದಿನ ದಿನಗಳಲ್ಲಿ ಇದಕ್ಕೆ ಬೇರೆ ಯೋಜನೆ ಹಾಕಿ ವ್ಯರ್ಥವಾಗಿ ಹ–ರಿಯುತ್ತಿರುವ ನೀರನ್ನು ಬಳಸಿಕೊಳ್ಳುವ ಉದ್ದೇಶ ಹೊಂದಿದ್ದೇವೆ ಎಂದು ಡಿ.ಕೆ.ಶಿವಕುಮಾರ್ ತಿಳಿಸಿದರು.

ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಭಾಗದ ಜನರಿಗೆ ನೀರನ್ನು ಹೇಗೆ ಬಳಸಿಕೊಳ್ಳಬೇಕು ಎಂಬ ಅರಿವಿದೆ. ಕಾರಣ ಈ ಭಾಗದಲ್ಲಿ 2 ಸಾವಿರ ಅಡಿ ಕೊಳವೆ ಬಾವಿ ಕೊರೆಸಿ ನೀರು ತೆಗೆದು ತರಕಾರಿ, ರೇಷ್ಮೆ ಕೃಷಿ ಮಾಡುತ್ತಿದ್ದಾರೆ. ನೀರು ಹೆಚ್ಚಾಗಿ ಸಿಗುತ್ತಿರುವ ಭಾಗಗಳ ಜನರಿಗೆ ನೀರಿನ ಬಳಕೆ ಬಗ್ಗೆ ಹೆಚ್ಚು ಅರಿವಿಲ್ಲ. ಹೀಗಾಗಿ ಈ ತಿದ್ದುಪಡಿ ತರಲಾಗಿದೆ ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

ಈ ತಿದ್ದುಪಡಿ ಬಂದಿದೆ ಎಂದು ಏಕಾಏಕಿ ನೀವು ನುಗ್ಗಬೇಡಿ. ಕಾನೂನು ಇದೆ ಎಂದು ರೈತರಿಗೆ ಕಿರುಕುಳ ನೀಡಬೇಡಿ. ಹಂತಹಂತವಾಗಿ ಜಾ–ರಿಗೊಳಿಸಿ. ಅಕ್ರಮವಾಗಿ ಕಾಲುವೆಗಳಲ್ಲಿ ಮೋಟರ್ ಇಟ್ಟಿರುವ ರೈತರಿಗೆ ತಮ್ಮ ತಪ್ಪಿನ ಬಗ್ಗೆ ಈಗಿನಿಂದಲೇ ಜಾಗೃತಿ ಮೂಡಿಸಿ. ಈ ವಿಚಾರದಲ್ಲಿ ರೈತರ ಸಹಕಾರ ಬಹಳ ಮುಖ್ಯ ಎಂದು ಶಿವಕುಮಾರ್ ಹೇಳಿದರು.

ಎತ್ತಿನಹೊಳೆ ಯೋಜನೆ ನೀರು ಕೋಲಾರಕ್ಕೆ ಇನ್ನು ಹೋಗಿಲ್ಲ, ಈಗಾಗಲೇ ಶಾಸಕರುಗಳು 100, 150 ಕೋಟಿ ಮೊತ್ತದ ಯೋಜನೆಗಳನ್ನು ತರುತ್ತಿದ್ದಾರೆ. ಎಲ್ಲಾ ಅಣೆಕಟ್ಟುಗಳ ಗೇಟ್‌ಗಳ ದುರಸ್ಥಿಗೆ ನಾವು ಮುಂದಾಗಿದ್ದೇವೆ. ಇದಕ್ಕಾಗಿ ಸಮಿತಿ ರಚಿಸಿ, ವರದಿ ಪಡೆಯಲಾಗಿದೆ ಎಂದು ಶಿವಕುಮಾರ್ ತಿಳಿಸಿದರು.

***

### ಎಲೆಕ್ಟ್ರಾನಿಕ್ ಟ್ಯಾಬ್‌ನಲ್ಲಿ ಡಿಜಿಟಲ್ ಪೆನ್ ಬಳಸಿ ಸಹಿ

## ಲೋಕಸಭಾ ಸದಸ್ಯರ ಹಾಜರಾತಿಗೆ ಡಿಜಿಟಲ್ ಟಚ್



ದೆಹಲಿ: ಇತ್ತೀಚೆಗಿನ ದಿನಗಳಲ್ಲಿ ಪ್ರತಿಯೊಂದು ಕೆಲಸ ಕಾರ್ಯಕ್ಕೂ ತಂತ್ರಜ್ಞಾನವನ್ನೇ ಅವಲಂಬಿಸಿಕೊಂಡಿದ್ದಾರೆ. ಅದಲ್ಲದೇ, ಈ ಡಿಜಿಟಲ್ ಇಂಡಿಂ–ಯಾ ಎನ್ನುವುದು ಕೇಂದ್ರ ಸರಕಾರದ ಬಹು ದೊಡ್ಡ ಕನಸಾಗಿದ್ದು, ಈ ನಿಟ್ಟಿನಲ್ಲಿ ಭಾರತದಾದಂತ್ಯ ಎಲ್ಲಾ ಕೆಲಸ ಕಾರ್ಯಗಳು ಡಿಜಿಟಲ್ ಆಗಿಯೇ ನಡೆಯುತ್ತಿದೆ. ಆದರೆ ಸೋಮವಾರದಿಂದ ಆರಂಭವಾದ ಸಂಸತ್ತಿನ ಚಳಿಗಾಲದ ಅಧಿವೇಶನದಲ್ಲಿ ಸದಸ್ಯರು ಎಲೆಕ್ಟ್ರಾನಿಕ್ ಟ್ಯಾಬ್‌ಲ್ಲಿ ಡಿಜಿಟಲ್ ಆಗಿ ಸಹಿ ಹಾಕಿದ್ದಾರೆ. ಈ ಅಧಿವೇಶನ ಡಿಸೆಂಬರ್ 20ರವರೆಗೆ ನಡೆಯಲಿದ್ದು, ಮೊದಲ ದಿನವೇ ಲೋಕಸಭಾ ಸದಸ್ಯರು ಎಲೆಕ್ಟ್ರಾನಿಕ್ ಟ್ಯಾಬ್‌ನಲ್ಲಿ ಡಿಜಿಟಲ್ ಪೆನ್ ಬಳಸಿ ಡಿಜಿಟಲ್ ಹಾಜರಾತಿ ಹಾಕುವ ಮೂಲಕ ಅಧಿವೇಶನದಲ್ಲಿ ಡಿಜಿಟಲ್ ಟಚ್ ನೀಡಿದ್ದಾರೆ. ಸ್ಪೀಕರ್ ಓಂ ಬಿರ್ಲಾ ಅವರ ಸಂಸತ್ತನ್ನು ಪೇಪರ್‌ಲೆಸ್ ಮಾಡುವ ಉಪಕ್ರಮದ ಭಾಗವಾಗಿ ಲೋಕಸಭೆಯ ಸಭಾಂಗಣದ ಲಾಬಿಯಲ್ಲಿ ನಾಲ್ಕು ಕೌಂಟರ್‌ಗಳಲ್ಲಿ ಎಲೆಕ್ಟ್ರಾನಿಕ್ ಟ್ಯಾಬ್‌ಗಳು ಇರಿಸಲಾಗಿದೆ. ಈ ಡಿಜಿಟಲ್ ಹಾಜರಾತಿ ಮೂಲಕ ಲೋಕಸಭಾ ಸ್ಪೀಕರ್ ಅವರ ಈ ಉಪಕ್ರಮವನ್ನು ಸಂಸದರು ಖುಷಿಯಿಂದಲೇ ಸ್ವಾಗತಿಸಿದ್ದಾರೆ. ಅದಲ್ಲದೇ, ಈ ವ್ಯವಸ್ಥೆಯೂ ಸರಳ, ಅನುಕೂಲಕರ ಮತ್ತು ಸ್ನೇಹಪರ ಎಂದು ವಿವರಿಸಿದ್ದಾರೆ.

ಡಿಜಿಟಲ್ ಹಾಜರಾತಿಗಾಗಿ ಲೋಕಸಭೆಯ ಸಭಾಂಗಣದ ಲಾಬಿಯಲ್ಲಿ ನಾಲ್ಕು ಕೌಂಟರ್‌ಗಳಲ್ಲಿ ಎಲೆಕ್ಟ್ರಾನಿಕ್ ಟ್ಯಾಬ್‌ಗಳನ್ನು ಇರಿಸಲಾಗಿದೆ. ಡಿಜಿಟಲ್ ಹಾಜರಾತಿಯ ವೇಳೆ ತಾಂತ್ರಿಕ ಸಹಾಯಕ್ಕಾಗಿ ಪ್ರತಿ ಕೌಂಟರ್‌ನಲ್ಲಿ ರಾಷ್ಟ್ರೀಯ ಮಾಹಿತಿ ಕೇಂದ್ರದ ಇಂಜಿನಿಯರ್‌ಗಳ ತಂಡವನ್ನು ನಿಯೋಜಿಸಲಾಗಿದೆ. ಅದಲ್ಲದೇ, ದೈಹಿಕ ಹಾಜರಾತಿ ರಿಜಿಸ್ಟರ್‌ಗಳನ್ನು ಇಡಲಾಗಿದೆ.

## ಡಿ.15 ಕ್ಕೆ ತಾಲೂಕು ಕೃಷಿಕ ಸಮಾಜದ ಚುನಾವಣೆ

ಯರಗಟ್ಟಿ:ಸವದತ್ತಿ ಹಾಗೂ ಯರಗಟ್ಟಿ ತಾಲೂಕಿನ ಕರ್ನಾಟಕ ಪ್ರದೇಶ ಕೃಷಿಕ ಸಮಾಜದ 5 ವರ್ಷದ ಅವಧಿಗೆ ಕಾರ್ಯಕಾರಿ ಸಮಿತಿ ರಚನೆ ಹಾಗೂ ಪಧಾಧಿಕಾರಿಗಳ ಆಯ್ಕೆಗಾಗಿ ಡಿಸೆಂಬರ್ 15 ರಂದು ತಾಲೂಕು ಮಟ್ಟದ ಕೃಷಿಕ ಸಮಾಜದ ಚುನಾವಣೆ ನಡೆಯಲಿದೆ.

ಆಜೀವ ಸದಸ್ಯರ ಪಟ್ಟಿ ತಾಲೂಕಾವಾರು ಸವದತ್ತಿ ಸಹಾಯಕ ಕೃಷಿ ನಿರ್ದೇಶಕರ ಕಛೇರಿ ಹಾಗೂ ರೈತ ಸಂಪರ್ಕ ಕೇಂದ್ರ, ಯರಗಟ್ಟಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ.

ನವೆಂಬರ್ 30 ರಿಂದ ನಾಮಪತ್ರ ವಿತರಣೆ ಪ್ರಾರಂಭವಾಗಲಿದೆ. ಡಿ.15 ರ ಬೆಳಗ್ಗೆ 8 ರಿಂದ 3 ಘಂಟೆಯ ಚವರೆಗೆ ಚುನಾವಣೆ ನಡೆಯಲಿದೆ. ಮಾಹಿತಿಗಾಗಿ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗೆ ಸಂಪರ್ಕಿಸಲು ಸಹಾಯಕ ಕೃಷಿ ನಿರ್ದೇಶಕರು, ಶಿವಪ್ರಕಾಶ ಪಾಟೀಲ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

### ಸರಕಾರದ ಗಮನಸೆಳೆದ ಮಾದರಿ ಯೋಜನೆ

# ಸಿಇಟಿ ಸಕ್ಷಮ್ ಕ್ಕೆ 10 ಲಕ್ಷ ರೂಪಾಯಿ ಅನುದಾನ

**ಬೆಳಗಾವಿ,** : ಸರ್ಕಾರಿ ಪದವಿ ಪೂರ್ವ ವಿದ್ಯಾಲಯಗಳಲ್ಲಿ ವಿಜ್ಞಾನ ವ್ಯಾಸಂಗ ಮಾಡುತ್ತಿರುವ ಜಿಲ್ಲೆಯ ಗ್ರಾಮೀಣ ಪ್ರದೇಶದ ಮತ್ತು ಆರ್ಥಿಕವಾಗಿ ದುರ್ಬಲರಾಗಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಉನ್ನತಿಗಾಗಿ ಬೆಳಗಾವಿ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸಲಾಗಿರುವ "ಸಿ.ಇ.ಟಿ.–ಸಕ್ಷಮ್" ಎಂಬ ವಿನೂತನ ಮತ್ತು ಸೃಜನಾತ್ಮಕ ಕಾರ್ಯಕ್ರಮಕ್ಕೆ ರಾಜ್ಯ ಸರಕಾರದ ಮೆಚ್ಚುಗೆ ಜತೆಗೆ ಚಾಲೆಂಜ್ ಫಂಡ್ ಯೋಜನೆಯಡಿ ಹತ್ತು ಲಕ್ಷ ರೂಪಾಯಿ ಅನುದಾನ ಕೂಡ ಲಭಿಸಿದೆ.

ಜಿಲ್ಲೆಯ ಎಲ್ಲ ಸರಕಾರಿ ವಿಜ್ಞಾನ ಪದವಿ ಪೂರ್ವ ಕಾಲೇಜುಗಳಲ್ಲಿ ಕಲಿಯುತ್ತಿರುವ ಬಡ ಕುಟುಂಬಗಳ ಹಾಗೂ ಗ್ರಾಮೀಣ ಪ್ರದೇಶಗಳ ಸಾವಿರಾರು ವಿದ್ಯಾರ್ಥಿಗಳನ್ನು ಸಿ.ಇ.ಟಿ ಎದುರಿಸಲು ಸಕ್ಷಮ ಗೊಳಿಸುವ ನಿಟ್ಟಿನಲ್ಲಿ ಹೊಸ ಪ್ರಯೋಗಾತ್ಮಕ ಕಾರ್ಯಕ್ರಮವನ್ನು ಬೆಳಗಾವಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಆರಂಭಿಸಿದ್ದಾರೆ.

ಜಿಲ್ಲಾ ಪಂಚಾಯತ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ಅಇಖಿ–ಖಚಿಞ–ಚಿಟ (ಸಿಇಟಿ–ಸಕ್ಷಮ) ವಿನೂತನ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಸರಕಾರಿ ವಿಜ್ಞಾನ ಪಿಯು ಕಾಲೇಜುಗಳ ಪ್ರಥಮ ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳು ಎರಡನೇ ಶನಿವಾರ ಹಾಗೂ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ನಾಲ್ಕನೇ ಶನಿವಾರ ಸಿದ್ಧತಾ ಪರೀಕ್ಷೆಗಳನ್ನು ನಡೆಸುವ ಮೂಲಕ ಸಿಇಟಿ–ನೀಟ್ ಪರೀಕ್ಷೆಗಳಿಗೆ ಅವರನ್ನು ಸಜ್ಜುಗೊಳಿಸುವುದು ಸಿಇಟಿ–ಸಕ್ಷಮ್ ಕಾರ್ಯಕ್ರಮವಾಗಿದೆ.

ಇಂತಹ ಪ್ರಯೋಗಾತ್ಮಕ ಮತ್ತು ಸೃಜನಾತ್ಮಕ



ಕಾರ್ಯಕ್ರಮದಲ್ಲಿ ಗುಣಮಟ್ಟದ ಗುರಿಗಳನ್ನು ಸಾಧಿಸಲು ಅನುಕೂಲವಾಗುವಂತೆ ಅಗತ್ಯ ಅನುದಾನವನ್ನು ಒದಗಿಸಲು ಸರಕಾರವು "ಚಾಲೆಂಜ್ ಫಂಡ್" ಸ್ಥಾಪಿಸಿರುತ್ತದೆ.

ಇದೀಗ ಸಿಇಟಿ–ಸಕ್ಷಮ್ ಪರಿಣಾಮಕಾರಿ ಜಾ–ರಿಗೊಳಿಸಲು ಈ "ಚಾಲೆಂಜ್ ಫಂಡ್" ಯೋಜನೆಯಡಿ ಸರಕಾರವು ಹತ್ತು ಲಕ್ಷ ರೂಪಾಯಿಅನುದಾನವನ್ನು ಬಿಡುಗಡೆಗೊಳಿಸಿರುತ್ತದೆ ಎಂದು ಬೆಳಗಾವಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ತಿಳಿಸಿದ್ದಾರೆ.

ತಮ್ಮ ಕನಸಿನ ಯೋಜನೆಯಾಗಿರುವ ಸಿಇಟಿ–ಸಕ್ಷಮ್ ಅನುಷ್ಠಾನಕ್ಕೆ ಸರಕಾರವು ಅನುದಾನ ನೀಡಿರುವುದಕ್ಕೆ ಸಂತಸ ವ್ಯಕ್ತಪಡಿಸಿರುವ ಅವರು, ಮುಂಬರುವ ದಿನಗಳಲ್ಲಿ ಸಿಇಟಿ–ಸಕ್ಷಮ್ ಸಮರ್ಪಕ ಅನುಷ್ಠಾನ, ವಿಶ್ಲೇಷಣೆ ಹಾಗೂ ದತ್ತಾಂಶ ಸಂಗ್ರಹಕ್ಕೆ ವಿಶೇಷ ಸಾಫ್ಟವೇರ್ ರೂಪಿಸಲಾಗುವುದು ಎಂದು ತಿಳಿಸಿದ್ದಾರೆ.

ಈ ಸಾಫ್ಟವೇರ್ ಮೂಲಕ ಪ್ರತಿಯೊಂದು ವಿದ್ಯಾರ್ಥಿಯ ಪರ್ಫಾಮೆನ್ಸ್ ಒಂದು ಕಡೆ ಸಂಗ್ರಹಿಸಿ ಅದನ್ನು ವಿಶ್ಲೇಷಣೆಗೊಳಪಡಿಸುವ ಯೋಚನೆ ಇದೆ ಎಂದು ರಾಹುಲ್ ಶಿಂಧೆ ವಿವರಿಸಿದರು.

ಜಿಲ್ಲಾ ಪಂಚಾಯತ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಧಿಕಾರಿಗಳು ಹಾಗೂ ಉಪನ್ಯಾಸಕರು ಸಿಇಟಿ–ಸಕ್ಷಮ್ ಕಾರ್ಯಕ್ರಮವನ್ನು ಅತ್ಯಂತ ಅಚ್ಚುಕಟ್ಟಾಗಿ ಜಾರಿಗೊಳಿಸುವ ಮೂಲಕ ಅದನ್ನು ಯಶಸ್ವಿಗೊಳಿಸುತ್ತಿದ್ದು, ಅವರಿಗೆ ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದು ಜಿಪಂ ಸಿಇಓ ರಾಹುಲ್ ಶಿಂಧೆ ತಿಳಿಸಿದರು.

ಸಿಇಟಿ–ಸಕ್ಷಮ್ ವಿನೂತನ ಕಾರ್ಯಕ್ರಮದ ಮೂಲಕ ನಡೆಸಲಾಗುವ ಸಿದ್ಧತಾ ಪರೀಕ್ಷೆಗಳು ವಿದ್ಯಾರ್ಥಿಗಳ ಅಇಖಿ/ಓಇಇಖಿ ಪರೀಕ್ಷೆಗಳನ್ನು ಎದುರಿಸಲು ಸಾಮಥ–ರ್ಯ ಬಲಪಡಿಸುವುದಲ್ಲದೇ, ಭವಿಷ್ಯದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಪರಿಣಿತಿಯನ್ನು ಮತ್ತು ಮಾನಸಿಕ ಸ್ಥೈರ್ಯವನ್ನು ಹೆಚ್ಚಿಸಲು ಸಹಕಾರಿಯಾಗಲಿವೆ.

ಶಿವಮೊಗ್ಗ, ವಿಜಯಪುರ ಸೇರಿದಂತೆ ಏಳೆಂಟು ಜಿಲ್ಲೆಗಳ ಅಧಿಕಾರಿಕಾರಿಗಳ ತಂಡಗಳು ಬೆಳಗಾವಿಗೆ ಭೇಟಿ ನೀಡಿ "ಸಿಇಟಿ–ಸಕ್ಷಮ್" ಮಾದರಿಯ ಬಗ್ಗೆ ಮಾಹಿತಿಯನ್ನು ಪಡೆದುಕೊಂಡಿರುತ್ತಾರೆ.

ಬೆಳಗಾವಿ ಜಿಲ್ಲೆಯಲ್ಲಿ ಅನುಷ್ಠಾನಗೊಂಡಿರುವ ಇಂತಹ ಪ್ರಯೋಗಾತ್ಮಕ ಹಾಗೂ ಸೃಜನಾತ್ಮಕ ಕಾರ್ಯಕ್ರಮವು ಇಡೀ ರಾಜ್ಯದ ಶೈಕ್ಷಣಿಕ ವಲಯದಲ್ಲಿ ಗಮನಸೆಳೆದಿರುವುದು ವಿಶೇಷವಾಗಿದೆ.

## ಪ್ರತಿಯೊಬ್ಬ ಕನ್ನಡಿಗನೂ ಎತ್ತಿ ಹಿಡಿಯುವ ಕೆಲಸ ಮಾಡಬೇಕು : ಪ್ರೊ.ಚಂದ್ರಶೇಖರ ಅಕ್ಕಿ ಒತ್ತಾಯ



ಮೂಡಲಗಿ : ಪ್ರೊ. ಕೆ.ಜಿ.ಕುಂದಣಗಾರ ಪ್ರಧಾನ ವೇದಿಕೆ : ತ್ರಿಭಾಷಾ ಸೂತ್ರವನ್ನು ಪ್ರತಿಯೊಬ್ಬ ಕನ್ನಡಿಗನೂ ಎತ್ತಿ ಹಿಡಿಯುವ ಕೆಲಸ ಮಾಡಬೇಕು ಎಂದು 16ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನಾಧ್ಯಕ್ಷ ಪ್ರೊ.ಚಂದ್ರಶೇಖರ ಅಕ್ಕಿ ಹೇಳಿದರು.

ಪಟ್ಟಣದ ಆರ್.ಡಿ.ಎಸ್ ಕಾಲೇಜು ಆವರಣದ ಪ್ರೊ. ಕೆ.ಜಿ.ಕುಂದಣಗಾರ ಪ್ರಧಾನ ವೇದಿಕೆಯಲ್ಲಿ ಭಾನುವಾರ ಸಂಜೆ ಜರುಗಿದ ಬೆಳಗಾವಿ ಜಿಲ್ಲಾ 16ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, 'ಜಿಲ್ಲಾ ಸಮ್ಮೇಳನಾಧ್ಯಕ್ಷನಾಗಿರುವುದು ನನ್ನ ಭಾಗ್ಯ. ಈ ಜೀವನದಿಂದಲೂ ಸಾಹಿತ್ಯ ಕ್ಷೇತ್ರದಲ್ಲಿದ್ದೇನೆ. 1998 ತಾಲೂಕಾಧ್ಯಕ್ಷರಾಗಿ 150 ರೂ. ಅನುದಾನದಲ್ಲಿ ಸಮ್ಮೇಳನ ಮಾಡಿ ಸಾಹಿತ್ಯ ಸೇವೆ ಸಲ್ಲಿಸಿದ ತೃಪ್ತಿ ನನಗಿದೆ," ಎಂದರು. ಕಸಾಪ ಜಿಲ್ಲಾಧ್ಯಕ್ಷೆ ಮಂಗಲಾ ಮೆಟಗುಡ್ಡ ಮಾತನಾಡಿ, ಮೂಡಲಗಿಯಲ್ಲಿರುವ ಜನತೆ ಸಾಹಿತ್ಯ ಸಮೇಳನಗಳಲ್ಲಿ ತೋರಿದ ಪ್ರೀತಿ ವಿಶ್ವಾಸ ಬಹಳ ಇಲ್ಲಿ ಅಂಬಲಿ ಮೇರವಣಿಗೆ,ರೊಟ್ಟಿಬುತ್ತಿ ಮೇರವಣಿಗೆ ಸಸಿಗಳ ಮೇರವಣಿಗೆ ಹಾಗೂ 87–88 ವಿದ್ಯಾರ್ಥಿಗಳು ಹಮ್ಮಿಕೊಂಡ ಕನ್ನಡಾಂಬೆಯ ತೊಟಿಲೋತ್ಸವ ಕಾರ್ಯಕ್ರಮ ಹಿಂದೆ ನಡೆದಿಲ್ಲಿ ಮುಂದೆ ನಡೆಯುವದಿಲ್ಲ ಎನಿಸುತ್ತಿದೆ ಇದನ್ನು ನಾನು ಮಂಡ್ಯದಲ್ಲಿ ಜರುಗುವ ಸಾಹಿತ್ಯ ಸಮೇಳನದಲ್ಲಿ ಕಾರ್ಯರೂಪಕ್ಕೆ ತರಲು ಬಯಸುತ್ತೇನೆ, ಇಲ್ಲಿಯ ಎಲ್ಲ ವಿಶೇಷಗಳನ್ನು ಪುಸ್ತಕ ರೂಪದಲ್ಲಿ ತರಲು ಆಶಿಸುತ್ತೆನೆ ಎಂದರು

ಕ್ಷೇತ್ರ ಶಿಕ್ಷಣಾಧಿಕಾರಿ ಅಜಿತ ಮನ್ನಿಕೇರಿ ಮಾತನಾಡಿ, "ಪಟ್ಟಣದ ಜನತೆ, ಸಾಹಿತ್ಯ ಪರಿಷತ್ ಸಹಕಾರದೊಂದಿಗೆ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಸಾಹಿತ್ಯ ಸಮ್ಮೇಳನಬೆಳಗಾವಿ ಜಿಲ್ಲಾ ಸಾಹಿತ್ಯ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡಿದ್ದ ಸರ್ವಾಧ್ಯಕ್ಷ ಚಂದ್ರಶೇಖರ ಅಕ್ಕಿ ಹಾಗೂ ಗಣ್ಯರು. ಯಶಸ್ವಿಯಾಗಿ ಆಯೋಜಿಸಿದ್ದಾರೆ," ಎಂದರು.

ವಿಧಾನ ಪರಿಷತ್ ಸದಸ್ಯ ಹಣಮಂತ ನಿರಾಣಿ ಮಾತನಾಡಿದರು,

ಈ ಸಂದರ್ಭದಲ್ಲಿ ಮುನ್ಯಾಳ– ಬಾಗೋಜಿಕೊಪ್ಪದ ಮುರುಘರಾಜೇಂದ್ರ ಶಿವಾಚಾರ್ಯ ಸ್ವಾಮೀಜಿ, ಮೂಡಲಗಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ವೆಂಕಟೇಶ ಸೋನವಾಲ್ಕರ, ನಿವೃತ್ತ ಪ್ರಾಚಾರ್ಯ ಎಸ್.ಎಂ. ಕಮದಾಳ, ಬಿ.ವೈ.ಶಿವಾಪೂರ, ವಿ.ಎಸ್.ಹಂಚಿನಾಳ, ಆರ್.ಟಿ.ಲಂಕೆಪ್ಪನವರ, ಆರ್.ಎಸ್. ಅಳಗುಂಡಿ, ಎಸ್.ಐ. ಭಾಗೋಜಿ, ಭಾರತಿ ಮದಬಾವಿ ಇತರರು ಇದ್ದರು.

**ಆರು ನಿರ್ಣಯ ಮಂಡನೆ**

16ನೇ ಬೆಳಗಾವಿ ಜಿಲ್ಲಾ ಸಮ್ಮೇಳನದ ಪ್ರೊ. ಕೆ.ಜಿ.ಕುಂದಣಗಾರ ಪ್ರಧಾನ ವೇದಿಕೆಯಲ್ಲಿ ಮೂಡಲಗಿ ತಾಲೂಕು ಕಸಾಪ ಗೌರವ ಕಾರ್ಯದರ್ಶಿ ಎ.ಎಚ್.ಒಂಟಗೋಡಿ ಆರು ನಿರ್ಣಯಗಳನ್ನು ಮಂಡಿಸಿದರು. ಅವು;

* **ಸರಕಾರಿ ಮಟ್ಟದಲ್ಲಿ ಕನ್ನಡ ಅಂಕಿಗಳ ಬಳಕೆಯಾಗಬೇಕು.**
* **ಸರಕಾರದ ಎಲ್ಲ ಕಾಗದ ಪತ್ರ ಕನ್ನಡ ಭಾಷೆಯಲ್ಲೇ ಇರಬೇಕು.**
* **ಕರ್ನಾಟಕದಲ್ಲಿ ಎಲ್ಲ ವೈದ್ಯರು ಕನ್ನಡ ಭಾಷೆಯಲ್ಲಿ ಔಷಧ ಚೀಟಿ ಬರೆಯಬೇಕು.**
* **ನ್ಯಾಯಾಲಯಗಳ ಆದೇಶ ಪತ್ರಗಳನ್ನು ಕನ್ನಡ ಭಾಷೆಯಲ್ಲೇ ಬರೆಯಬೇಕು.**
* **ಕರ್ನಾಟಕ ಸರಕಾರದ ಉದ್ಯೋಗಗಳಲ್ಲಿ ಶೇ.75ರಷ್ಟನ್ನು ಕನ್ನಡಿಗರಿಗೆ ಮೀಸಲಿಡಬೇಕು.**

ಶಾಸಕ, ಸಂಸದರ ಅನುದಾನದಲ್ಲಿ ಶೇ.5ರಷ್ಟನ್ನು ಕನ್ನಡದ ಕಾರ್ಯಕ್ರಮಗಳಿಗೆ ಮೀಸಲಿಡಬೇಕು.

### ಭಾರತದಲ್ಲಿ ಗುರುಪರಂಪರೆಗೆ ಮಹತ್ವ ಇದೆ

# ನಾಡೋಜ ಡಾ.ಚಂದ್ರಶೇಖರ್ ಕಂಬಾರ್ ಅಭಿಪ್ರಾಯ

**ಘಟಪ್ರಭಾ,** (ಗೋಕಾಕ) 24 ನಮ್ಮ ಭಾರತ ದೇಶದಲ್ಲಿ ಗುರುವಿನ ಮೇಲಿನ ಭಕ್ತಿ ಎಂದಿಗೂ ಕಡಿಮೆಯಾಗುವುದಿಲ್ಲ ನಮ್ಮ ಭಾರತದಲ್ಲಿ ಮಾತ್ರ ಗುರುಪರಂಪರೆಯನ್ನು ಗುರುತಿಸಿ, ಗೌರವಿಸುತ್ತಾರೆ ಎಂದು ಜ್ಞಾನಪೀಠ ಪುರಸ್ಕೃತ, ನಾಡೋಜ ಡಾ ಚಂದ್ರಶೇಖರ ಕಂಬಾರ ತಿಳಿಸಿದರು.

ಘಟಪ್ರಭಾ ಎಸ್ ಡಿ ಟಿ ಹೈಸ್ಕೂಲ್ ನ 95ರ ಹಳೇಯ ವಿದ್ಯಾರ್ಥಿಗಳು ಏರ್ಪಡಿಸಿದ್ದ ಗುರುವಂದನೆ ಹಾಗೂ ಹಳೆ ವಿದ್ಯಾರ್ಥಿಗಳ ಕ್ರೀಡಾ ಮತ್ತು ಸಾಂಸ್ಕೃತಿಕ ಸಂಘದ ಉದ್ಘಾಟನಾ ಸಮಾರಂಭಕ್ಕೆ ದೀಪ ಬೆಳಗಿಸಿವುದರ ಮೂಲಕ ಚಾಲನೆ ನೀಡಿ ಮಾತನಾಡಿದರು.

ಅನ್ನಕ್ಕೆ ದಾರಿ ದೀಪವಾದ ಗುರುಗಳನ್ನು ದೇವರೆಂದು ಭಾವಿಸುತ್ತೇವೆ. ದೇವ–ರಿಗೆ ಸಮನಾದ ಗುರುಗಳನ್ನು 30





ವರ್ಷಗಳ ನಂತರವೂ ತಾವೆಲ್ಲರೂ ಸೇರಿ ನೆನಪಿಸಿಕೊಂಡು ಗೌರವಿಸುತ್ತಿರುದೇ ಈ ನೆಲದ ನಾಡಿನ ಸಂಸ್ಕೃತಿ ಎತ್ತಿ ತೋರಿಸುತ್ತದೆ ಎಂದರು.

ಹಳೆಯ ವಿದ್ಯಾರ್ಥಿಗಳ ಸಂಘವನ್ನು ಉದ್ಘಾಟಿಸಿ ಮಾತನಾಡಿದ ಬೈಲಹೊಂಗಲ ಎ ಸಿ ಪ್ರಭಾವತಿ ಪಕೀರಪೂರ ಅವರು ನಡೆದು ಬಂದ ಹಾದಿ ಮರೆತು ನಡೆಯುವುದು ಆದರ್ಶವಲ್ಲ. ಹಳೇ ವಿದ್ಯಾರ್ಥಿಗಳಿಗೆ ಶಾಲೆ, ಗುರುಗಳ ಮೇಲಿರುವ ಪ್ರೀತಿ ನಿಜಕ್ಕೂ ಶ್ಲಾಘನೀಯ ಎಂದು ಅಭಿಪ್ರಾಯ ಪಟ್ಟರು.

30 ವರ್ಷಗಳ ನಂತರದಲ್ಲಿಯೂ ಕೂಡ ಹಳೆ ವಿದ್ಯಾರ್ಥಿಗಳು ನಮ್ಮ ಶಾಲೆ ಎಂದು ಬಂದು ಈ ಅಭೂತಪೂರ್ವ ಕಾರ್ಯಕ್ರಮ ಆಯೋಜಿಸಿದ್ದಕ್ಕೆ ವಿದ್ಯಾರ್ಥಿಗಳ ಸಂಘವನ್ನು ಅಭಿನಂದಿಸಿದ ಶ್ರೀ ಕ್ಷೇತ್ರ ಅರಭಾವಿ ಮಠದ ಶ್ರೀ ಗುರುಬಸವಲಿಂಗ ಮಹಾಸ್ವಾಮಿಗಳು ಸಾನಿಧ್ಯವಹಿಸಿ ಆಶೀರ್ವಚನ ನೀಡಿದರು. ಈ ಸಂಘದ ಮೂಲಕ ಬಡವರ ಮಕ್ಕಳ ವಿದ್ಯಾಭ್ಯಾಸಕ್ಕೆ ದಾರಿ ಸುಗಮವಾಗಲಿ ಎಂದು ಆಶೀರ್ವದಿಸಿದರು.

ಸಂಘದ ಅಧ್ಯಕ್ಷರಾದ ಶ್ರೀ ಕೆ ಎಸ್ ನಾಗರಾಜ್ ಮಾತನಾಡಿ ಸಂಘ ಮತ್ತು ಸಂಸ್ಥೆ ಮಠ ಹಾಗೂ ವಿದ್ಯಾರ್ಥಿಗಳ ಶಿಕ್ಷಣ ಆರೋಗ್ಯ ತರಭೇತಿ ಹೀಗೆ ಹಲವಾರು ಶಾಸ್ವತ ಅಭಿವೃದ್ಧಿ ಕಾರ್ಯಗಳನ್ನ ಹಮ್ಮಿಕೊಳ್ಳಲು ಯೋಜನೆ ರೂಪಿಸಲಾಗುತ್ತಿದೆ ಎಂದು ತಿಳಿಸದರು.

ಬೆಂಗಳೂರಿನಲ್ಲಿಯ ಕೆಎಸ್‌ಈಎಸ್ ಅಧಿಕಾರಿ ಅವರು ಸ್ಮರಣ ಸಂಚಿಕೆ ಬಿಡುಗಡೆಗೊಳಿಸಿದರು.

ಈ ಹೈಸ್ಕೂಲ್ ನಲ್ಲಿ ಕಲಿತು ಉನ್ನತ ಹುದ್ದೆಯಲ್ಲಿರುವ ವಿದ್ಯಾರ್ಥಿಗಳಾದ ಡಾ.ನಾಗರಾಜ್ ಚರಂತಿಮಠ, ಶ್ರೀ ವಿದ್ಯಾನಂದ ನಾಯಿಕ, ಶ್ರೀಮತಿ ಭಾಗ್ಯಶ್ರೀ ಪಡೆಪ್ಪಗೋಳ ರವರನ್ನು ನಮ್ಮ ಎಸ್ ಡಿ ಟಿ ಹೈಸ್ಕೂಲ್ ರತ್ನ ಎಂಬ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಅರ್ಜುನ ಸಂಪಗಾರ, ಗೀತಾ ಬೆನವಾಡಿ, ಶೇಖರ ಬೇಟಗೇರಿ, ಕುಮಾರಯ್ಯ ಕರ್ಪೂರಮಠ, ವಿಜಯಕುಮಾರ್ ಬಡಕುಂದ್ರಿ, ಸಂಜೀವ ನಾಯಿಕ, ಸೋಮಶೇಖರ ಜಿನರಾಳೆ, ಪ್ರಕಾಶ ಮಟಗಾರ, ಜಯಪ್ರಕಾಶ್ ಕಾಡದವರ, ಸುವರ್ಣ ಗಾಡಿವಡ್ಡರ ಮತ್ತು ನಿವೇದಿತಾ ಚರಂತಿಮಠ ಭಾಗವಹಿಸಿದ್ದರು. ಸಮಾರಂಭದ ಪ್ರಮುಖ ಘಟ್ಟವಾದ ಗುರುವಂದನೆಗೆ ಸುಮಾರು 30 ವರ್ಷಗಳಲ್ಲಿ ಪಾಠ ಮಾಡಿದ್ದ ನಿವೃತ್ತ ಶಿಕ್ಷಕರು, ಉಪನ್ಯಾಸಕರನ್ನು ಪ್ರೀತಿಯಿಂದ ಗೌರವಿಸಿ ಸನ್ಮಾನಿಸಲಾಯಿತು.

# ಪ್ರತಿಯೊಬ್ಬ ಕನ್ನಡಿಗರು ಭಾಷೆ -ಸಂಸ್ಕೃತಿ ಅಭಿಮಾನ ಹೊಂದಲಿ : ಶ್ರೀ ಗುರುಸಿದ್ದ ಸ್ವಾಮೀಜಿ



**ಬೆಳಗಾವಿ:** ಕರ್ನಾಟಕದಲ್ಲಿ ರಾಜ್ಯೋತ್ಸವ ಆಚರಿಸುವುದು ನಮ್ಮ ನಾಡಿನ ಪರಂಪರೆಯಾಗಿದೆ. ರಾಜ್ಯೋತ್ಸವ ಆಚ–ರಿಸುವ ಉದ್ದೇಶವೆಂದರೆ ಕರ್ನಾಟಕದಲ್ಲಿರುವ ಪ್ರತಿಯೊಬ್ಬ ಕನ್ನಡಿಗನು ಕೂಡ ಕನ್ನಡ ನಾಡು ನುಡಿ ನೆಲ ಭಾಷೆ ಸಂಸ್ಕೃತಿ ಬಗ್ಗೆ ಅಭಿಮಾನವನ್ನು ಹೊಂದಿರಬೇಕು ಎಂದು ಕಾರಂಜಿಮಠದ ಪೂಜ್ಯಶ್ರೀ ಮ ನಿ ಪ್ರ ಗುರುಸಿದ್ದ ಸ್ವಾಮೀಜಿ ಅವರು

ಇಲ್ಲಿನ ಹಿಂದುವಾಡಿ ಗೊಮ್ಮಟೇಶ್ ಹೈಸ್ಕೂಲ್ ಸೋಮವಾರ ಕ್ರಾಂತಿ ಮಹಿಳಾ ಮಂಡಲ ಉಮಾ ಸಂಗೀತ ಪ್ರತಿಷ್ಠಾನ ಹಿಂದುವಾಡಿ ಬೆಳಗಾವಿ ಹಾಗೂ ದಾನೇಶ್ವರಿ ಎಜುಕೇಶನ್ ಟ್ರಸ್ಟ್ ಮದರ್ಸ್ ಟಚ್ ಕಿಂ–ಡರ್ ಗಾರ್ಟನ್ ಸ್ಕೂಲ್ ಸಂಕೇಶ್ವರ್ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಕರ್ನಾಟಕ ರಾಜ್ಯೋತ್ಸವ ಹಾಗೂ ಪೂಜ್ಯಶ್ರೀ ಶ್ರೀ ಮ ನಿ ಪ್ರ ಗುರುಸಿದ್ಧ ಮಹಾಸ್ವಾಮಿಜಿಯವರ 75 ನೆಯ ಅಮೃತ ಮಹೋತ್ಸವವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು,

ಕನ್ನಡ ಅಭಿಮಾನ ಹೇಗಿರಬೇಕೆಂದರೆ ನಿತ್ಯವೂ ತಾಯಿ ಭುವನೇಶ್ವರಿ ತಾಯಿ ಆರಾಧನೆ ಜೊತೆಗೆ ಕನ್ನಡ ದಿನಪತ್ರಿಕೆಗಳನ್ನು ಓದುವ ಹವ್ಯಾಸವನ್ನು ಹೊಂದಬೇಕು. ಕನ್ನಡಿಗರು ಕನ್ನಡ ಭಾಷೆಗೆ ಪ್ರಾಧಾನತೆಯನ್ನು ನೀಡಿದರೆ ಮಾತ್ರ ನಾವು ಕನ್ನಡ ರಾಜ್ಯೋತ್ಸವವನ್ನು ಆಚರಿಸಿದ್ದು ಸಾರ್ಥಕವಾಗುತ್ತದೆ ಎಂದರು.

ಕನ್ನಡ ಭಾಷೆ ಸಾಹಿತ್ಯ ಸಂಸ್ಕೃತಿಯನ್ನು ಬೆಳೆಸುವುದು ಉಳಿಸಿಕೊಂಡು ಹೋಗುವುದು ನಮ್ಮೆಲ್ಲರ ಕನ್ನಡಿಗರ ಕರ್ತವ್ಯವಾಗಿದೆ ಮಕ್ಕಳಲ್ಲಿ ಪ್ರತಿಭೆಯನ್ನು ಗುರುತಿಸಲು ನಾವೆಲ್ಲರೂ ಪ್ರೋತ್ಸಾಹಿಸಬೇಕು ಅಂತ ಒಂದು ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸಿ ಗೌರವಿ ಸುವ ಕಾರ್ಯವನ್ನು ಕ್ರಾಂತಿ ಮಹಿಳಾ ಮಂಡಲ ಮಾಡುತ್ತಿರುವುದು ತುಂಬಾ ಹೆಮ್ಮೆಯ ವಿಷಯವಾಗಿದೆ ಎಷ್ಟು ವರ್ಷ ಬದುಕಿದೆವು ಎಂಬುದು ಮುಖ್ಯವಲ್ಲ ಸಮಾಜಕ್ಕಾಗಿ ಒಳ್ಳೆಯ ಕಾರ್ಯಗಳನ್ನು ಮಾಡಬೇಕು ಎಂದು ಹೇಳಿದರು.

ಮಾಜಿ ಯೋಧ ದಯಾನಂದ ಡಾಲಿ ಮಾತನಾಡಿ, ಪ್ರತಿ ತಿಂಗಳ ಕಾರ್ಯಕ್ರಮದಲ್ಲಿ ಮಾಜಿ ಯೋಧರನ್ನು ಸನ್ಮಾನಿಸುತ್ತಿರುವುದು ರಾಜ್ಯೋತ್ಸವ ಆಚರಣೆ ಹಾಗೂ ಮಕ್ಕಳ ಪ್ರತಿಭೆಯನ್ನು ಗುರುತಿಸುತ್ತಿರುವ ಕ್ರಾಂತಿ ಮಹಿಳಾ ಮಂಡಲ ಉಮಾ ಸಂಗೀತ ಪ್ರತಿಷ್ಠಾನ ಸಮಾಜಮುಖಿ ಕಾರ್ಯಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ದಾನೇಶ್ವರಿ ಎಜುಕೇಶನ್ ಟ್ರಸ್ಟ್ ನ ಕಾರ್ಯದರ್ಶಿ ಪ್ರಿಯಾಂಕಾ ಗಡ್ಕರ್ ಮತನಾಡಿ, ನಮ್ಮ ಸಂಸ್ಥೆಯ ಬಗ್ಗೆ ಹಾಗೂ ನಮ್ಮ ಸಮಾಜಮುಖಿ ಕಾರ್ಯಗಳ ಮೆಚ್ಚುಗೆಯನ್ನು ವ್ಯಕ್ತಪಡಿಸಿದರು.

ಸ್ವಾಮೀಜಿ ಚಿತ್ ಪ್ರಕಾಶನಂದ ಸರಸ್ವತಿ ಹರ್ಷ ಆಶ್ರಮದ ವತಿಯಿಂದ ಅಜ್ಜನವರಿಗೆ ಹುಟ್ಟು ಹಬ್ಬದ ಶುಭ ಕೋರಿ ಕೋರಿ ಫಲ ಪುಷ್ಪ ನೀಡಿ ಗೌರವಿಸಲಾಯಿತು.

ವಿಶಾರದ ನಾಟ್ಯ ಶಾಲೆಯ ಮುದ್ದು ಮಕ್ಕಳು ನೃತ್ಯವನ್ನು ಪ್ರದರ್ಶಿಸಿದರು ಎಲ್ಲ ಮುದ್ದು ಮಕ್ಕಳಿಗೆ ನಮ್ಮ ಎರಡು ಸಂಸ್ಥೆ ವತಿಯಿಂದ ಉಡುಗೊರೆ ನೀಡಲಾಯಿತು.

ಮಕ್ಕಳ ದಿನಾಚರಣೆ ಅಂಗವಾಗಿ ವಿಶೇಷ ಸಾಧಕಿ ಗೌರವ ಸನ್ಮಾನವನ್ನು ಬಸ್ಸಮ್ಮ ಗುರಯ್ಯ ಮಠದ ಮತ್ತು ಪ್ರತಿಭಾ ಪುರಸ್ಕಾರವನ್ನು ವೀವಾಂತ ಪುಷ್ಪದಂತೆ ಪಾಟಿಲ್ ಮತ್ತು ಸಮಂತಾ ಪಾಟೀಲ್ ಸನ್ಮಾನಿಸಲಾಯಿತು. ಅದೇ ರೀತಿ ಮಾಜಿ ಯೋಧ ದಯಾನಂದ ಡಾಲಿ ಹಾಗೂ ರೂಪ ಕಮತೆ ಇವರಿಗೆ ಸಂಸ್ಥೆಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಂಡಲದ ಅಧ್ಯಕ್ಷ ಮಂಗಲ್ ಮಠದವರು ಸ್ವಾಗತಿಸಿದರು. ಕಾರ್ಯದರ್ಶಿ ಭಾರತಿ ರತ್ನಪ್ ಗೋಳ ಪ್ರಾಸ್ತಾವಿಕವಾಗಿ ಮಾತನಾಡಿದರು. ಅನಿತಾ ಮತ್ತು ರತ್ನಶ್ರೀ ಪ್ರಾರ್ಥಿಸಿದರು. ಶೋಭಾ ಕಾಡನ್ನವರ್ ಅಕ್ಷತಾ ಅತಿಥಿಗಳ ಪರಿಚಯಿಸಿದರು.ಗೀತಾ ಎಮ್ಮಿ ನಿರೂಪಿಸಿದರು. ಪ್ರೇಮ ಬರಬರಿ ವಂದಿಸಿದರು.

# ಗ್ರಾಮೀಣ ಆಡು ಭಾಷೆಯಲ್ಲಿದೆ ಕನ್ನಡದ ಸಿರಿವಂತಿಕೆ



**ರಬಕವಿ–ಬನಹಟ್ಟಿ,** ಕನ್ನಡದ ನಿಜವಾದ ಸಿರಿವಂತಿಕೆ ಇರುವದು ಗ್ರಾಮೀಣ ಆಡು ಭಾಷೆಯಲ್ಲಿಯೆಂದು ಬಂಡಿಗಣಿ ಬಸವಗೋಪಾಲ ನೀಲಮಾಣಿಕ ಮಠದ ಅನ್ನದಾನೇಶ್ವರ ಶ್ರೀಗಳು ಹೇಳಿದರು.

ಬನಹಟ್ಟಿಯ ಎಸ್‌ಆರ್‌ಎ ಬೃಹತ್ ಮೈದಾನದಲ್ಲಿ ಕನ್ನಡ ಸಂಘದಿಂದ ಜರುಗಿದ 'ನೇಕಾರ ನಗರಿ ಕನ್ನಡ ಹಬ್ಬ' ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಉತ್ತರ ಕರ್ನಾಟಕದ ಭಾಷೆ ಒರಟು ಎನ್ನಲಾಗುತ್ತಿದೆ. ಆದರೀಗ ನಾಟಕ, ಕಿರುತೆರೆ ಹಾಗುಸಿನಿಮಾಗಳ ಮೂಲಕ ಉತ್ತರ ಕರ್ನಾಟಕ ಭಾಷೆ ವಿಶ್ವ ಪ್ರಸಿದ್ಧಿಯಾಗಿದೆ. ಇಲ್ಲಿನ ಭಾಷಾ ಸೊಗಡು ಅಂತರಾಳದ ಮನಸ್ಸು ತೋ–ರಿಸುವಷ್ಟು ವಿಶೇಷವಾದುದು. ಇದರ ನೈಜತೆಯನ್ನು ಕಾಯ್ದುಕೊಳ್ಳಬೇಕಿದೆ ಎಂದು ಅಭಿಪ್ರಾಯಪಟ್ಟರು.

ಅಧ್ಯಕ್ಷತೆ ವಹಿಸಿದ್ದ ಹಿರಿಯ ಸಾಹಿತಿ ಜಯವಂತ ಕಾಡದೇವರ ಮಾತನಾಡಿ, ಕನ್ನಡ ಭಾಷೆ, ನೆಲ, ಜಲಕ್ಕೆ ತಾಯಿಯಷ್ಟೇ ಗೌರವ ನೀಡಬೇಕೆಂದರು. ರಾಜಕೀಯ ಮುಖಂಡ ಸಿದ್ದು ಕೊಣ್ಣೂರ ಮಾತನಾಡಿ, ಕನ್ನಡ ಸಿರಿವಂತಿಕೆಗೆ ಇಂತಹ ದೊಡ್ಡ ಕಾರ್ಯಕ್ರಮವೇ ಮೂಕ ಸಾಕ್ಷಿಯಾಗಿದ್ದು, ಕುಂದಾ ನಗರಿ ಬೆಳಗಾವಿ ನಂತರ ನೇಕಾರ ನಗರಿ ರಬಕವಿ–ಬನಹಟ್ಟಿಯಲ್ಲಿ ಕನ್ನಡಾಂಭೆಯ ಬೃಹತ್ ಕಾರ್ಯಕ್ರಮ ನಡೆಯುತ್ತಿರುವದು ಹೆಮ್ಮೆಯಾಗಿದ್ದು, ಪ್ರತಿವರ್ಷ ನಿರಂತರ ಕಾರ್ಯಕ್ರಮ ಜರುಗಲೆಂದು ಹಾರೈಸಿದರು.

ಪ್ರಾಸ್ತಾವಿಕ ನುಡಿಗಳನ್ನಾಡಿದ ಕನ್ನಡ ಸಂಘದ ಸಂಸ್ಥಾಪಕ ಅಧ್ಯಕ್ಷ ಶಿವಲಿಂಗ ಗೊಂಬಿಗುಡ್ಡ, ನಾಡಿನಲ್ಲಿ ಜನಿಸಿದ ಪ್ರತಿಯೊಬ್ಬ ಕನ್ನಡಿಗ ಗೌರವದಿಂದ ರಾಜ್ಯೋತ್ಸವದ ಆಚರಣೆಯಲ್ಲಿ ಭಾಗಿಯಾಗಬೇಕು. ಬಡನೇಕಾರವೆಂಬ ಹಣೆಪಟ್ಟಿಯಲ್ಲಿರುವ ನೇಕಾ–ರಿಕೆ ನಗರದಲ್ಲಿಯೂ ಕನ್ನಡ ಕಂಪನ್ನು ಸಿರಿವಂತಿ–ಕೆಯೊಂದಿಗೆ ಕನ್ನಡದ ಚಿಂತನೆಗಳಿಗೆ ಅವಕಾಶ ಒದಗಿಸುವ ನಿಟ್ಟಿನಲ್ಲಿ ಇಂತಹ ಕಾರ್ಯಕ್ರಮ ಆಯೋಜಿಸಲಾಯಿತೆಂದರು.

ಇದೇ ಸಂದರ್ಭ ಸಂಘದ ಉದ್ಘಾಟನೆಯೊಂದಿಗೆ ಯುವ ಸಂಭ್ರಮ–2024 ಜರುಗಿತು. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ತಾಲೂಕಿನ ವಿಶೇಷ ಸಾಧಕ–ರಿಗೆ 'ಸಾಧಕ ರತ್ನ' ಪ್ರಶಸ್ತಿ ನೀಡಿ ಗೌರವಿಸಲಾಯಿತು.

ರಾಜ್ಯದ ಮೂಲೆ ಮೂಲೆಯಿಂದ ಆಗಮಿಸಿದ್ದ 20 ಕ್ಕೂ ಅಧಿಕ ಕಲಾವಿದರಿಂದ ಗುಂಪು ನೃತ್ಯ ಸ್ಪರ್ಧೆ ಏರ್ಪಡಿಸಲಾಗಿತ್ತು.

ಇದೇ ಸಂದರ್ಭ 'ಕೋರ' ಕನ್ನಡ ಚಲನಚಿತ್ರದ ಮೇಕಿಂಗ್ ವಿಡಿಯೋ ಮತ್ತು ಧ್ವನಿ ಸುರುಳಿ ಬಿಡುಗಡೆ ಸಮಾರಂಭ ಜರುಗಿತು.

ಸಾನಿಧ್ಯವನ್ನು ಹಿರೇಮಠದ ಶರಣಬಸವ ಶಿವಾಚಾರ್ಯರು ವಹಿಸಿದ್ದರು. ತಿಮ್ಮಾಪೂರ, ಪ್ರಕಾಶ ದೇಸಾಯಿ, ಶ್ರೀಶೈಲ ಭಜಂತ್ರಿ, ನೀಲೇಶ ದೇಸಾಯಿ, ಮಲ್ಲಿಕಾರ್ಜುನ ಬಾಣಕಾರ, ಧರೆಪ್ಪ ಸಾಂಗ್ಲಿಕರ, ರಮಜಾನ್ ದಿಗ್ಗೇವಾಡಿ, ಡಾ.ಎ.ಆರ್. ಬೆಳಗಲಿ, ಕೃಷ್ಣಾ ಲೆಂಡಿ, ಮಲ್ಲು ಭದ್ರನ್ನವರ, ಸಿದ್ಧನಗೌಡ ಪಾಟೀಲ, ಪ್ರಭು ತಂಬೂರಿ, ಸಿದ್ಧನಗೌಡ ಪಾಟೀಲ, ಹಣಮಂತ ಕೊಣ್ಣೂರ, ಸಂಜಯ ತೆಗ್ಗಿ, ಪ್ರಶಾಂತ ನಾಯಕ, ರಾಜು ಭದ್ರನ್ನವರ, ಶಿವು ಕಾಂಬಳೆ, ಆಕಾಶ ಪಾಲಭಾಂವಿ, ಪ್ರಶಾಂತ ಶೆಟ್ಟಿ, ರಾಕೇಶ ಸಿಂಗೆ ಸೇರಿದಂತೆ ಅನೇಕರಿದ್ದರು.


## ಮಹೇಶ ಕಾನೂನು ಸಲಹೆಗಾರ



ತೇರದಾಳ– ಮಕ್ಕಳ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಕಾನೂನು ಸಲಹೆಗಾರರಾಗಿ ಇಲ್ಲಿನ ನ್ಯಾಯವಾದಿ ಮಹೇಶ ಕೆಂಧೂಳಿ ನೇಮಕಗೊಂಡಿದ್ದಾರೆ.

ಮಕ್ಕಳ ಸಾಹಿತ್ಯ ಪರಿಷತ್ ರಾಜ್ಯ ಮಟ್ಟದ ಸಂಘಟನೆಯಾಗಿದ್ದು, ಮಕ್ಕಳಲ್ಲಿ ಸಾಹಿತ್ಯಾಭಿರುಚಿ, ಸೃಜನಶೀಲ ಬೆಳವಣಿಗೆ ಹಾಗೂ ಮಕ್ಕಳಲ್ಲಿ ದೇಶಾಭಿಮಾನ ಬೆಳೆಸುವ ಉದ್ದೇಶದಿಂದ ಸ್ಥಾಪಿತಗೊಂಡಿದೆ. ಆದ್ದರಿಂದ ನೀವು ನಿಸ್ವಾರ್ಥ ಸೇವೆಯಲ್ಲಿ ಗುರುತಿಸಿಕೊಂಡಿರುವುದ–ರಿಂದ ನಿಮ್ಮನ್ನು ಜಿಲ್ಲಾ ಮಟ್ಟದ ಕಾನೂನು ಸಲಹೆಗಾರರನ್ನಾಗಿ ನೇಮಕ ಮಾಡಲಾಗಿದೆ ಎಂದು ಪರಿಷತ್‌ನ ಜಿಲ್ಲಾಧ್ಯಕ್ಷ ಈರಣ್ಣ ಲಟ್ಟಿ ಆದೇಶದಲ್ಲಿ ತಿಳಿಸಿದ್ದಾರೆ.

## ಡಾ. ಶಿವಬಸವ ಮಹಾಸ್ವಾಮಿಗಳ 135 ನೇ ಜಯಂತಿ ಮಹೋತ್ಸವ



ನಾಡಿನ ಬಡ ಮಕ್ಕಳಿಗೆ ಅನ್ನ, ಆಶ್ರಯ ನೀಡುವುದರ ಮೂಲಕ ಕಾಯಕಯೋಗಿ, ಮಹಾಪ್ರಸಾದಿ ಎನಿಸಿದ್ದ ನಾಗನೂರು ರುದ್ರಾಕ್ಷಿ ಮಠದ ಡಾ. ಶಿವಬಸವ ಮಹಾಸ್ವಾಮಿಗಳವರ 135 ನೇ ಜಯಂತಿ ಮಹೋತ್ಸವ ಅಂಗವಾಗಿ ನವೆಂಬರ್ 26ರಿಂದ ಡಿಸೆಂಬರ್ 4 ರ ವರೆಗೆ ಸಂಜೆ 6 ಗಂಟೆಗೆ ಸಿದ್ಧರಾಮೇಶ್ವರ ಶಿಕ್ಷಣ ಸಂಸ್ಥೆಯ ಆರ್ ಎನ್ ಶೆಟ್ಟಿ ತಾಂತ್ರಿಕ ಮಹಾವಿದ್ಯಾಲಯದ ಆವರಣದಲ್ಲಿ ಮಣಕವಾಡದ ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳಿಂದ ಶರಣರ ಅನುಭವ ಕುರಿತು ಪ್ರವಚನ ನಡೆಯಲಿದೆ. ಮುಂದುವರೆದು ಶ್ರೀಗಳ ಜಯಂತಿ ಮಹೋತ್ಸವದ ಅಂಗವಾಗಿ ಡಿಸೆಂಬರ್ 5 ರಿಂದ ಡಿಸೆಂಬರ್ 8ರವರೆಗೆ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಇಲ್ಲಿ ಕನ್ನಡ ನುಡಿಶ್ರೀ, ಸೇವಾರತ್ನ, ಆತ್ಮಸ್ವಾಸ್ಥ್ಯ ಶ್ರೀ, ಪ್ರಸಾದಶ್ರೀ ಮುಂತಾದ ಪ್ರಶಸ್ತಿಗಳನ್ನು ನಾಡಿನ ಸಾಧಕರಿಗೆ ನೀಡಲಾಗುವುದು ಎಂದು ನಾಗನೂರು ರುದ್ರಾಕ್ಷಿ ಮಠದ ಡಾ. ಅಲ್ಲಮಪ್ರಭು ಮಹಾಸ್ವಾಮಿಗಳು ತಿಳಿಸಿದ್ದಾರೆ.

## ಪ್ರತಿಭಾ ಕಾರಂಜಿಯಲ್ಲಿ ಜಿಲ್ಲಾಮಟ್ಟಕ್ಕೆ ಆಯ್ಕೆ



**ತಾಳಿಕೋಟೆ,** ಪಟ್ಟಣದ ಸರ್ವಜ್ಞ ವಿದ್ಯಾಪೀಠ ಪ್ರಾಥಮಿಕ ಶಾಲೆಯ ವಿದ್ಯಾರ್ಥಿನಿ ಕುಮಾರಿ ದೀಪಿಕಾ ಬಾಲಾಜಿಸಿಂಗ ಹಜೇರಿ ಮುದ್ದೇಬಿಹಾಳದ ಬಸವ ಇಂಟ–ರ್ನ್ಯಾಷನಲ್ ಶಾಲೆಯಲ್ಲಿ ನಡೆದ ತಾಲೂಕ ಮಟ್ಟದ ಪ್ರತಿಭಾ ಕಾರಂಜಿ ಸ್ಪರ್ಧೆಯಲ್ಲಿ ಹಿಂದಿ ಕಂಠಪಾಠ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನವನ್ನು ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾಳೆ. ವಿದ್ಯಾರ್ಥಿನಿಯ ಸಾಧನೆಗೆ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಸಿದ್ದನಗೌಡ ಮಂಗಳೂರ, ಮುಖ್ಯೋಪಾಧ್ಯಾಯರಾದ ಸಂತೋಷ ಪವಾರ, ಶಿಕ್ಷಕರಾದ ರಾಜು ಜವಳಗೇರಿ, ಮತ್ತು ಸರ್ವ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

## ಕನಕದಾಸರ ಭಾವಚಿತ್ರ ಮೆರವಣಿಗೆ

# ಕನಕದಾಸರನ್ನು ಒಂದೆ ಜಾತಿಗೆ ಸೀಮಿತಗೊಳಿಸದಿರಿ– ಸಿದ್ದು ಕೊಣ್ಣೂರ



**ಮಹಾಲಿಂಗಪುರ :** ಕನಕದಾಸರು ಬರೀ ಒಂದೆ ಜಾತಿಗೆ ಸಮೀತರಾದವರಲ್ಲ ಅವರು ಎಲ್ಲ ಜನಾಂಗಕ್ಕೂ ಮಹಾನ್ ದಾಸರು ಎಂಉ ಕಾಂಗ್ರೆಸ್ ಮುಖಂಡ ಸಿದ್ದು ಕೊಣ್ಣೂರ ಹೇಳಿದರು.

ಸ್ಥಳೀಯ ಬುದ್ನಿ ಪಿಡಿ ಯಲ್ಲಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ಕನಕದಾಸರ ಭಾವಚಿತ್ರ ಮೆರವಣಿಗೆಗೆ ಚಾಲನೆ ನೀಡಿ ಅವರು ಮಾತನಾಡಿ, ಕನಕದಾಸರು ತಮಗೆ ಸಿಕ್ಕ ಬಂಗಾರದಿಂದ ಎಲ್ಲ ಮಂದಿರಗಳ ಅಭಿವೃದ್ದಿ ಮಾಡಿದ ಮಹಾನ್ ಪುರಷ. ಅವರ ಜಯಂತಿ ಕಾರ್ಯಕ್ರಮ ಬರೀ ಮೆರವಣಿಗೆಗೆ ಸಮೀತವಾಗದೆ ಅವರ ತತ್ವಾದರ್ಶ ಜೀವನದಲ್ಲಿ ಅಳವಡಿಸಿಕೊಳ್ಳುವುದು ಅಗತ್ಯ ಎಂದರು.

ಹಳಿಂಗಳಿ ಪೂಜ್ಯ ಮಹಾವೀರ ಪ್ರಭುಜಿ ಮಾತನಾಡಿ ಕನಕದಾಸರು ಕರ್ನಾಟಕ ಹರಿದಾಸ ಸಾಹಿತ್ಯದ ಅಶ್ವಿನಿ ದೇವತೆಗಳಲ್ಲೊಬ್ಬರು, ದಾಸ ಸಾಹಿತ್ಯದ ಸುವರ್ಣಯುಗದ ಪ್ರವರ್ತಕರು. ನಿರ್ಮೋಹಿಯಾಗಿ ಇಹದಲ್ಲಿ ಇದ್ದು, ಪರವನ್ನು ಗೆದ್ದ ಮಹಾನ ಸಂತ. ಅವರ ನಾಮ ಬಲವೇ ಎಲ್ಲರಿಗೂ ಸ್ಫೂರ್ತಿಯಾಗಿದೆ ಎಂದರು.

ಮೇರವಣಿಗೆ : ಬುದ್ನಿ ಪಿಡಿ ಯ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣರ ವೃತ್ತದಿಂದ ಸಿಂಗರಿಸಿದ ಬ್ರಹತ್ ವಾಹನದಲ್ಲಿ ಕನಕದಾಸರ ಭಾವಚಿತ್ರ ಮೆರವಣಿಗೆ ನಡೆಯಿತು. ನಾನಾ ವಾದ್ಯಮೇಳದೊಂದಿಗೆ ನಡೆದ ಮೆರವಣಿಗೆ ಚನ್ನಮ್ಮ ವೃತ್ತ, ಗಾಂಧಿ ವೃತ್ತ, ಜವಳಿ ಬಜಾರ, ನಡು ಚೌಕಿ, ಮಹಾಲಿಂಗೇಶ್ವರ ದೇವಸ್ಥಾನ, ಬನಶಂಕರಿ ದೇವಸ್ಥಾನ, ಕಾಳಿಕಾ ಮಂದಿರ, ಮಾರುತಿ ಮಂದಿರ, ಸಾವಿತ್ರಿ ಪುಲೆ ವೃತ್ತದ ಮೂಲಕ ಕರಿಸಿದ್ದೇಶ್ವರ ದೇವಸ್ಥಾನ ತಲುಪಿತು.

ಪೂಜ್ಯರಾದ ಶಿರೂರದ ಚಿನ್ಮಯಾನಂದ ಮಹಾಸ್ವಾಮಿಜಿ, ಹಂದಿಗುಂದದ ಶ್ರೀಮಂತ ಸಿದ್ದರು, ಪುರಸಭೆ ಅಧ್ಯಕ್ಷ ಯಲ್ಲಣ್ಣಗೌಡ ಪಾಟೀಲ, ಉಪಾಧ್ಯಕ್ಷ ಶೀಲಾ ಬಾವಿಕಟ್ಟಿ, ಮುಖಂಡರಾದ ಬಸನಗೌಡ ಪಾಟೀಲ, ಮಹಾಂತೇಶ ಹಿಟ್ಟಿನಮಠ, ಶಂಕರಗೌಡ ಪಾಟೀಲ, ಪ್ರಕಾಶ ಮಮದಾಪುರ, ಮುಸ್ತಾಕ ಚಿಕ್ಕೋಡಿ, ಮಹಾಲಿಂಗಪ್ಪ ಜಕ್ಕಣ್ಣವರ, ರಂಗಣ್ಣಗೌಡ ಪಾಟೀಲ, ರಾಜೇಶ ಬಾವಿಕಟ್ಟಿ, ಸಿದ್ದರಾಮ ಯರಗಟ್ಟಿ, ಮಲ್ಲಪ್ಪ ಸಿಂಗಾಡಿ, ಮಹಾಲಿಂಗ ಸನದಿ, ಬಂದೇನವಾಜ ಪಕಾಲೀ, ಮಹೇಶ ಇಟಕನ್ನವರ, ಗಂಗಾಧರ ಮೇಟಿ, ಭೀಮಪ್ಪ ಸಂಶಿ, ಚಂದ್ರಪ್ಪ ದೋಣಿ, ಡಾ.ಎಸ್ ಆರ್ ಹಿಡಕಲ್, ಜೊತೆಪ್ಪ ಕಪರಟ್ಟಿ, ಮಾನಿಂಗಪ್ಪ ಸನದಿ,ಕರೆಪ್ಪ ಮೇಟಿ, ಮಹಾಲಿಂಗ ಮಾಳಿ, ಸಿದ್ದರಾಮ ಯರಗಟ್ಟಿ, ಶ್ರೀಕಾಂತ ಗುಳಣ್ಣವರ,ವಿಠಲ ಸಂಶಿ, ಕರೆಪ್ಪ ಹುಣಶೀಕಟ್ಟಿ,ಬಸಪ್ಪ ಬಂಡಿ, ಪ್ರಭು ಹುಣಶೀಕಟ್ಟಿ (ಪೂಜಾರಿ), ಮಲ್ಲಪ್ಪ ಭಾವಿಕಟ್ಟಿ, ಸಂಜಯ ಜಮಖಂಡಿ, ಚೇತನ ಹಾದಿಮನಿ ಇದ್ದರು.

# ಶೀಘ್ರವೇ ಗೃಹಲಕ್ಷ್ಮೀ ಸಂಘಗಳ ಸ್ಥಾಪನೆ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಘೋಷಣೆ



**ಕನಕಪುರ:** ದೇಶದ ಆರ್ಥಿಕ ಬೆಳವಣಿಗೆಯಲ್ಲಿ ಸ್ತ್ರೀಯರ ಹಾಗೂ ಸ್ತ್ರೀ ಶಕ್ತಿ ಸಂಘಗಳ ಪಾತ್ರ ಬಹಳ ದೊಡ್ಡದಿದೆ. ಈ ಹಿನ್ನೆಲೆಯಲ್ಲಿ ಗೃಹಲಕ್ಷ್ಮೀ ಸಂಘಗಳನ್ನು ಸ್ಥಾಪಿಸುವ ಮಹತ್ವಾಕಾಂಕ್ಷೆಯನ್ನು ಹೊಂದಿದ್ದೇನೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಕನಕಾಂಬರಿ ಮಹಿಳಾ ಒಕ್ಕೂಟದ ವತಿಯಿಂದ ರೂರಲ್ ಕಾಲೇಜು ಮೈದಾನದಲ್ಲಿ ಭಾನುವಾರ ನಡೆದ ಮಹಿಳಾ ಜಾಗೃತಿ ಸಮಾವೇಶದಲ್ಲಿ ಮಾತನಾಡಿದ ಸಚಿವರು, ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಾಗಲೆಲ್ಲಾ ಮಹಿಳಾ ಪರ ಯೋಜನೆಗಳನ್ನು ಜಾರಿಗೆ ತರಲಾಗಿದೆ. ಈ ಹಿಂದೆ ಎಸ್. ಎಂ.ಕೃಷ್ಣ ಅವಧಿಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಮೋಟಮ್ಮ ಅವರು ಸ್ತ್ರೀ ಶಕ್ತಿ ಸ್ವಸಹಾಯ ಗುಂಪುಗಳನ್ನು ಆರಂಭಿಸಿ, ಆರ್ಥಿಕ ಶಕ್ತಿಯನ್ನು ತುಂಬಿದರು. ಇದೀಗ ಅದೇ ಇಲಾಖೆಯ ಮೂಲಕ ಗೃಹಲಕ್ಷ್ಮೀ ಯೋಜನೆಯನ್ನು ಜಾರಿಗೆ ತಂದಿರುವುದು ನನ್ನ ಪಾಲಿನ ಅದೃಷ್ಟ ಎಂದರು.

ಗೃಹಲಕ್ಷ್ಮೀ ಯೋಜನೆಯ ಮೂಲಕ ಮಹಿಳೆಯರನ್ನು ಸ್ವಾವಲಂಬಿಯನ್ನಾಗಿಸುವ ಉದ್ದೇಶ ನನ್ನದು. ಹಾಗಾಗಿ ಗೃಹಲಕ್ಷ್ಮೀ ಸಂಘಗಳ ಮೂಲಕ ಮಹಿಳೆಯರಿಗೆ ಮತ್ತಷ್ಟು ಶಕ್ತಿ ತುಂಬಲಾಗುವುದು ಎಂದು ತಿಳಿಸಿದರು.

ಬೆಲೆ ಏರಿಕೆಯಿಂದ ತತ್ತರಿಸಿದ್ದ ಜನ–ರಿಗೆ ಅನುಕೂಲಕರ ಮಾಡುವ ಸಲುವಾಗಿ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾ–ರಿಗೆ ತರಲಾಯಿತು. ಇದರ ಫಲವಾಗಿ ಇಂದು 1.24 ಕೋಟಿ ಮಹಿಳೆಯರಿಗೆ ಗೃಹಲಕ್ಷ್ಮೀ ಯೋಜನೆಯ ಹಣ ಸಂದಾಯ ಆಗುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ದೂರದೃಷ್ಟಿಯ ಫಲವಾಗಿ ಇಂದು ಕರ್ನಾಟಕದಲ್ಲಿ ಮಹಿಳೆಯರ ಸಬಲೀಕರಣ ಮಾಡಲಾಗುತ್ತಿದೆ. ಕನಕಪುರ ತಾಲೂಕಿನಲ್ಲಿ 70 ಸಾವಿರ ಮಹಿಳೆಯರಿಗೆ ಗೃಹಲಕ್ಷ್ಮೀ ಯೋಜನೆಯ ಹಣ ಸಂದಾಯ ಆಗುತ್ತಿದೆ ಎಂದರು.

**ಡಿ.ಕೆ.ಶಿವಕುಮಾರ ರಾಷ್ಟ ಮಟ್ಟದ ನಾಯಕ** ಕೆಪಿಸಿಸಿ ಅಧ್ಯಕ್ಷರು ಹಾಗೂ ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಕೇವಲ ಕರ್ನಾಟಕದ ನಾಯಕ ಅಲ್ಲ, ಅವರು ರಾಷ್ಟ ಮಟ್ಟದ ನಾಯಕ. ಅಭಿವೃದ್ಧಿಗೆ ಮತ್ತೊಂದು ಹೆಸರೇ ಡಿ.ಕೆ.ಶಿವಕುಮಾರ್. ಬೆಂಗಳೂರು ಮಾದರಿಯಲ್ಲಿ ಕನಕಪುರ ಕ್ಷೇತ್ರವನ್ನು ಅಭಿವೃದ್ಧಿ ಪಡಿಸಿದ್ದಾರೆ ಎಂದು ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಕೋವಿಡ್ ಸಮಯದಲ್ಲಿ ಕೆಪಿಸಿಸಿ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಡಿ.ಕೆ.ಶಿವಕುಮಾರ್ ಅವರು, ಕಷ್ಟದ ಕಾಲದಲ್ಲಿ ಕಾಂಗ್ರೆಸ್ ಪಕ್ಷವನ್ನು ಸಂಘಟಿಸಿ, 136 ಜನ ಶಾಸಕರು ಆಯ್ಕೆಯಾಗಲು ತುಂಬಾ ಶ್ರಮ ಪಟ್ಟಿದ್ದಾರೆ. ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿ ಇರಲು ಡಿ.ಕೆ.ಶಿವಕುಮಾರ್ ಅವರ ಪಾತ್ರ ದೊಡ್ಡದು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.


ಅಭಿವೃದ್ಧಿಗೆ ಇನ್ನೊಂದು ಹೆಸರೇ ಡಿ.ಕೆ.ಶಿವಕುಮಾರ್ ಅವರು. ತಮ್ಮ ಸಹೋದರ, ಮಾಜಿ ಸಂಸದರೂ ಆದ ಡಿ.ಕೆ.ಸುರೇಶ್ ಜೊತೆಗೂಡಿ ಕನಕಪುರವನ್ನು ಬೆಂಗಳೂರು ನಗರ ಮಾದರಿಯಲ್ಲಿ ಅಭಿವೃದ್ಧಿ ಪಡಿಸಿದ್ದಾರೆ ಎಂದು ಶ್ಲಾಘಿಸಿದರು.

**ಶ್ರೀಕಂಠು ಅವರ ಹುಟ್ಟುಹಬ್ಬದ ಆಚರಣೆ**

ಮಹಿಳಾ ಪರ ಯೋಜನೆಗಳನ್ನು ಜಾ–ರಿಗೆ ತರುವ ಮೂಲಕ ಕನಕಾಂಬರಿ ಒಕ್ಕೂಟದ ಅಧ್ಯಕ್ಷರಾದ ಶ್ರೀಕಂಠು ಅವರು ಪ್ರತಿ ವರ್ಷ ತಮ್ಮ ಹುಟ್ಟುಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸುತ್ತಾರೆ. ಶ್ರೀಕಂಠು ಅವರು ಸಮಾಜಕ್ಕೆ ತಮ್ಮನ್ನು ತಾವೇ ತೊಡಗಿಸಿಕೊಂಡಿದ್ದಾರೆ ಎಂದು ಲಕ್ಷ್ಮೀ ಹೆಬ್ಬಾಳಕರ್ ಶ್ಲಾಘಿಸಿದರು.

ಈ ವೇಳೆ ನಂಜನಗೂಡು ಶಾಸಕ ದರ್ಶನ್ ದ್ರುವನಾರಾಯಣ್, ವಿಧಾನ ಪರಿಷತ್ ಸದಸ್ಯರಾದ ಎಸ್.ರವಿ, ಮುಖಂಡರಾದ ಡಿ. ಎಂ.ವಿಶ್ವನಾಥ್, ಯೋಜನಾ ಪ್ರಾಧಿಕಾರದ ಅಧ್ಯಕ್ಷ ಕೃಷ್ಣಮೂರ್ತಿ, ಯೋಜನಾ ಅನುಷ್ಠಾನಗಳ ಅಧ್ಯಕ್ಷ ದಿಲೀಪ್, ಬಿಡಿಸಿಸಿ ಬ್ಯಾಂಕ್ ಅಧ್ಯಕ್ಷ ವಿಜಯ್ ದೇವ್, ನಗರಸಭೆ ಅಧ್ಯಕ್ಷ ಲಕ್ಷ್ಮೀ ದೇವಮ್ಮ, ರೂರಲ್ ಸಂಸ್ಥೆಯ ಉಪಾಧ್ಯಕ್ಷ ಲಕ್ಷ್ಮಣ್ ಮೊದಲಾದವರಿದ್ದರು.

# ಡಾ.ಎನ್.ಎನ್. ವಾಳ್ವೇಕರ ಅವರಿಗೆಗುರು-ದ್ರೋಣಾಚಾರ್ಯ ಸಾಧಕರತ್ನ ಪ್ರಶಸ್ತಿ




**ರಾಮದುರ್ಗ :** ಇತ್ತಿಚೆಗೆಧಾರವಾಡದ ಕೆಸಿಡಿ ಕ್ಯಾಂಪಸ್‌ನಲ್ಲಿರುವ ಸೃಜನಾ ಸಭಾ ಭವನದಲ್ಲಿ ಅಖಿಲ ಕರ್ನಾಟಕ ಸಾಂಸ್ಕೃತಿಕ ಪರಿಷತ್ ಬೆಂಗಳೂರ ಅವರ ನೇತೃತ್ವದಲ್ಲಿಏರ್ಪಡಿಸಿದ ರಾಜ್ಯಮಟ್ಟದಕನ್ನಡರಾಜ್ಯೋತ್ಸವ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿರಾಮದುರ್ಗದ ವಿದ್ಯಾ ಪ್ರಸಾರಕ ಸಮಿತಿಯ ಶಿಕ್ಷಣ ಮಹಾವಿದ್ಯಾಲಯಉಪನ್ಯಾಸಕಡಾ.ಎನ್. ಎನ್. ವಾಳ್ವೇಕರ ಅವರಿಗೆಕರ್ನಾಟಕದಗುರು–ದ್ರೋಣಾಚಾರ್ಯ ಸಾಧಕರತ್ನ ಪ್ರಶಸ್ತಿ ನೀಡಿಗೌರವಿಸಲಾಗಿದೆ.

ಸಮ್ಮೇಳನದ ಸರ್ವಾಧ್ಯಕ್ಷಮಲ್ಲಿಕಾರ್ಜುನ ಭೃಂಗಿಮಠ, ಟಿಬೆಟಿಯನ್ನಕ್ಯಾಂಪನ್‌ಗುರೂಜಿಜಾಂಪಾಲಾಮಾ, ಕ್ಲಾಸಿಕ್ ಸಮೂಹ ಸಂಸ್ಥೆಯಅಧ್ಯಕ್ಷ ಲಕ್ಷ್ಮಣಉಪ್ಪಾರ, ಬೆಳಗಾವಿಯ ಕನ್ನಡಮತ್ತು ಸಂಸ್ಕೃತಿಇಲಾಖೆಯಜಂಟಿ ನಿರ್ದೇಶಕಕೆ.ಎಚ್. ಚನ್ನೂರ, ಕರ್ನಾಟಕರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತಆರ್.ಬಿ. ನಾಯಕ, ಭಾರತೀಯ ಸೇವಾ ದಳದ ನಿರ್ದೇಶಕ ಸುರೇಶ ಬಣವಿ ಸೇರಿದಂತೆಕಾರ್ಯಕ್ರಮದಆಯೋಜ–ಕರುಹಾಗೂಇತರರಿದ್ದರು.




ರಾಜ್ಯಮಟ್ಟದ ಜಿಮ್ನಾಸ್ಟಿಕ್ ಸ್ಪರ್ಧೆಯಲ್ಲಿ ರಬಕವಿಯ ಎಂ.ವಿ.ಪಟ್ಟಣ ಪಿ.ಯೂ.ಕಾಲೇಜು ವಿದ್ಯಾರ್ಥಿನಿ ಲಕ್ಷ್ಮೀ ಲೋಕಾಪುರ ಪ್ರಥಮ ಸ್ಥಾನ ಗಳಿಸಿ ರಾಷ್ಟ್ರ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾಳೆ. ಸಾಧಕ ವಿದ್ಯಾರ್ಥಿನಿಯನ್ನು, ತರಬೇತುದಾರ ಮಹಾಂತೇಶ ಮುರಗೋಡರನ್ನು ಚೇರಮನ್ ಬಸವರಾಜ ಯಂಡಿಗೇರಿ,ನಿರ್ದೇಶಕ ಮಂಡಳಿ, ಪ್ರಾಚಾರ್ಯರು ಮತ್ತು ಸಿಬ್ಬಂದಿ ಬರ್ಗ ಅಭಿನಂದಿಸಿದ್ದಾರೆ.

# ಗುರು ಶಿವಪ್ಪಯ್ಯ ಶಿವಯೋಗಿಗಳ ಪಲ್ಲಕ್ಕಿ ಉತ್ಸವಕ್ಕೆ ಚಾಲನೆ



ಉಗರಗೋಳ : ತೃಪ್ತಿದಾಯಕ ಬದುಕಿಗೆ ಆಧ–್ಯಾತ್ಮವೇ ಮೂಲ. ಪ್ರತಿಯೊಬ್ಬರೂ ಒತ್ತಡದ ಬದುಕಿನ ಮಧ್ಯೆಯೂ ಆಧ್ಯಾತ್ಮ ಚಟುವಟಿಕೆಗಳತ್ತ ಒಲವು ಬೆಳೆಸಿಕೊಳ್ಳಬೇಕು ಎಂದು ಮಠದ ಆಡಳಿತ ಮಂಡಳಿ ಸಿಇಒ ಆಗಿರುವ ನಿವೃತ್ತ ಕೆಎಎಸ್ ಅಧಿಕಾರಿ ಎಂ.ಆರ್.ಹಿರೇಮಠ ಹೇಳಿದರು.

ಸವದತ್ತಿ ತಾಲೂಕಿನ ಉಗರಗೋಳ ಗ್ರಾಮದಲ್ಲಿ ಶ್ರೀಗುರು ಶಿವಪ್ಪಯ್ಯ ಶಿವಯೋಗಿಗಳ ಮಠದ ವಾರ್ಷಿಕ ಜಾತ್ರಾ ಮಹೋತ್ಸವ ಅಂಗವಾಗಿ ಸೋಮವಾರ ಹಮ್ಮಿಕೊಂಡಿದ್ದ ಗುರು ಶಿವಪ್ಪಯ್ಯ ಶಿವಯೋಗಿಗಳ ಪಲ್ಲಕ್ಕಿ ಉತ್ಸವಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ದಾಸೋಹದ ಮೂಲಕ ಸುಜ್ಞಾನವನ್ನು ಮನುಷ್ಯ ಕುಲಕ್ಕೆ ಉಣಬಡಿಸುವವರೇ ನಿಜವಾದ ದಾನಿಗಳು. ತಾಯಿಂದಿರು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿ ಜೀವನಮಟ್ಟ ಸುಧಾರಣೆ ಮಾಡಿಕೊಳ್ಳಬೇಕು ಎಂದರು.

ಗುರು ಶಿವಪ್ಪಯ್ಯ ಶಿವಯೋಗಿಗಳ ಭಾವಚಿತ್ರದ ಮೆರವಣಿಗೆ ಹಾಗೂ ಪಲ್ಲಕ್ಕಿ ಉತ್ಸವ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಗಿತು. ಜಿಲ್ಲೆಯ ವಿವಿಧೆಡೆಯಿಂದ ಬಂದಿದ್ದ ಕಲಾ ತಂಡಗಳು ಜನರನ್ನು ರಂಜಿಸಿದವು.

# ನ.29 ರಂದು ಶಾಲೆಗೊಂದು ಚುಟುಕು-ಮಾಸಿಕ ಕಾರ್ಯಕ್ರಮ

ರಾಮದುರ್ಗ : ತಾಲೂಕಿನ ಸರಕಾರಿ ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿಗಳ ಸಾಹಿತ್ಯಾಭಿರುಚಿಹೆಚ್ಚಿಸಲುರಾಮದುರ್ಗತಾಲೂಕಾಚುಟುಕ ು ಸಾಹಿತ್ಯ ಪರಿಷತ್ ನೇತೃತ್ವದಲ್ಲಿ ಶಾಲೆಗೊಂದು ಚುಟುಕು–ಮಾಸಿಕ ಕಾರ್ಯಕ್ರಮದಅಡಿಯಲ್ಲಿ ಕವಿಗೋಷ್ಠಿ, ಕರ್ನಾಟಕ–ಕನ್ನಡಜ್ಞಾನ ಸಂಪದ ಸ್ಪರ್ಧೆ–1, ಸಾಧಕರಿಗೆ ಸನ್ಮಾನಹಾಗೂ ನೈತಿ–ಕ ಬೋಧನಾಉಪನ್ಯಾಸ ಕಾರ್ಯಕ್ರಮಗಳನ್ನು ತಿಂಗಳಿಗೊಮ್ಮೆ ತಾಲೂಕಿನಒಂದು ಪ್ರೌಢಶಾಲೆಂ ುಲ್ಲಿಏರ್ಪಡಿಸಲಾಗುತ್ತಿದೆ ಚುಸಾಪ ತಾಲೂಕಾ ಕಾರ್ಯದರ್ಶಿ ಸೋಮಶೇಖರ ಸೊಗಲದ ತಿಳಿಸಿದ್ದಾರೆ.

ನವ್ಹಂಬರ–29 ಮಧ್ಯಾಹ್ನ 3 ಘಂಟೆಗೆಪಟ್ಟಣ ಪಟ್ಟಣದ ನೇತಾಜಿ ಸುಭಾಸಚಂದ್ರ ಬೋಸ್ ಸರಕಾರಿ ಪ್ರೌಢಶಾಲೆಯಲ್ಲಿಪ್ರಥಮವಾಗಿ ಸಮಾರಂಭದಉದ್ಘಾಟನೆ ನಡೆಯಲಿದೆ. ವಿದ್ಯಾರ್ಥಿಗಳಿಗೆಕರ್ನಾಟಕ–ಕನ್ನಡಜ್ಞಾನಸಂಪದ ಸ್ಪರ್ಧೆಯ ಪ್ರಯುಕ್ತ ಬಹುಆಯ್ಕೆ ಪ್ರಶ್ನೋತ್ತರಗಳುಳ್ಳ ಪರೀಕ್ಷೆ25 ಪ್ರಶ್ನೆಗಳನ್ನು ಹೊಂದಿದ ಪರೀಕ್ಷೆಹಮ್ಮಿಕೊಳ್ಳಲಾಗಿದ್ದು,ಇದೇ ಸಂದರ್ಭಧಲ್ಲಿಮುಕ್ತವಾಗಿ ಸ್ವರಚಿತಚುಟುಕು ಕವಿಗೋಷ್ಠಿ ಏರ್ಪಡಿಸಲಾಗಿದೆ.

ಕಾರ್ಯಕ್ರಮವನ್ನುಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಟಿ. ಬಳಿಗಾರ ಉದ್ಘಾಟಿಸುವರು. ಪ್ರೌಢಶಾಲೆಯಮುಖ್ಯೋಪಾಧ್ಯಾಯ ಪಿ.ಡಿ. ಕಾಲವಾಡಅಧ್ಯಕ್ಷತೆವಹಿಸುವರು. ಅತಿಥಿಗಳಾಗಿ ಸಾಹಿತಿವೆಂಕಟೇಶ ಹುನಸಿಕಟ್ಟಿ, ಸಮಾಜ ಸೇವಕ ದಂಪತಿಗಳಾದ ಶ್ವೇತಾ ವಿವೇಕಸ್ವಾಮಿ ಹಿರೇಮಠ, ಪತಂಜಲಿಯೋಗ ಪ್ರತಿಷ್ಠಾನದಅಧ್ಯಕ್ಷಡಾ.ಬಿ.ಎಲ್. ಸಂಕನಗೌಡ್ರ, ಚುಸಾಪ ಗೌರವಾಧ್ಯಕ್ಷಹಾಗೂಉ–ದ್ಯಮಿ ವಿಜಯಎನ್. ಶೆಟ್ಟಿ, ಚುಸಾಪ ಅಧ್ಯಕ್ಷ ಬಿ.ಬಿ. ಹಾಜಿ, ಉಪಾಧ್ಯಕ್ಷಡಾ.ಎಸ್.ಜಿ. ದೇವಾಂಗಮಠ, ಸಾಹಿತಿಗಳಾದ ಆರ್.ಎಸ್. ಪಾಟೀಲ, ಕೆ.ವೈ. ಹುಣಸಿಕಟ್ಟಿ, ಸುರೇಶ ಗೋ. ದೇಸಾಯಿ ಸೇರಿದಂತೆಇತರರು ಪಾಲ್ಗೊಳ್ಳಲಿದ್ದಾರೆ. ಮಾಹಿತಿಗಾಗಿ 6363308337, 8073603181 ಸಂಖ್ಯೆಗಳಿಗೆ ಸಂಪರ್ಕಿಸಬೇಕೆಂದು ಸಂಘಟಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅನ್ವೇಷಣೆಯಲ್ಲಿ 5 ಬಾವಿ ಹಾಗೂ 5 ಶಾಸನ ಸೇರಿದಂತೆ 600 ಕ್ಕೂ ಹೆಚ್ಚು ಪ್ರಾಚ್ಯಾವಶೇಷಗಳು ಲಭ್ಯ: ಸಚಿವ ಎಚ್.ಕೆ.ಪಾಟೀಲ



ಗದಗ : ಲಕ್ಕುಂಡಿಯಲ್ಲಿ ಜರುಗುತ್ತಿರುವ ಪ್ರಾಚ್ಯಾವ ಶೇಷಗಳ ಅನ್ವೇಷಣೆಯಲ್ಲಿ 5 ಬಾವಿ ಹಾಗೂ ಐದು ಶಾಸನಗಳು ಸೇರಿದಂತೆ 600ಕ್ಕೂ ಅಧಿಕ ಪ್ರಾಚಾವೇಶಗಳು ಲಭ್ಯವಾಗಿವೆ ಎಂದು ಸಚಿವ ಎಚ್ ಕೆ ಪಾಟೀಲ್ ಅವರು ಹೇಳಿದರು.

ಲಕ್ಕುಂಡಿ ಗ್ರಾಮದಲ್ಲಿ ಭಾನುವಾರ ಜರುಗಿದ ಪತ್ರಿಕಾಗೋಷ್ಠಿಯಲ್ಲಿ ಅವರು, ಲಕ್ಕುಂಡಿಯನ್ನು ರಾಷ್ಟ್ರಕೂಟರ ಕಾಲದಲ್ಲಿ ಕಟ್ಟಿದ್ದಾರೆ. ಕಲ್ಯಾಣ ಚಾಲುಕ್ಯರ ಕಾಲದಲ್ಲಿ ವಿಶೇಷ ಅಭಿವೃದ್ಧಿ ಹೊಂದಿ ಕಲಚುರ್ಯರು, ಹೊಯ್ಸಳ ರು, ಕೆಲವು ಕಾಲ ವಿಜಯನಗರದ ಅರಸರು ಆಳಿದ್ದಾರೆ. ಇಂದು ಪ್ರಾಚ್ಯಾವಶೇಷಗಳ ಅನ್ವೇಷಣೆ ಸಂಗ್ರಹಣೆ ಕೆಲಸವೂ ವಿಶೇಷ ಪ್ರಯತ್ನವಾಗಿದ್ದು ಸಾಂಸ್ಕೃತಿಕ, ಐತಿಹಾಸಿಕ, ಕಾಂತ್ರಿಕಾರಿಕ ಹಜ್ಜೆ ಎಂದರು.

ನವೆಂಬರ್ 22, 23 ಮತ್ತು24 ರಂದು ಪ್ರಾಚ್ಯಾವಶೇಷಗಳ ಅನ್ವೇಷಣೆ ಕೈಗೊಡು ಲಕ್ಕುಂಡಿಯಲ್ಲಿ ಈ ಹಿಂದೆ ಇದ್ದ 101 ದೇವಾಲಯಗಳಲ್ಲಿ ಇಂದು 50–60 ಲಭ್ಯವಾಗಿದೆ ಹಾಗೂ 8–10 ದೇವಾಲಯದ ಪಾಯಗಳು ದೊರಕಿವೆ. ಇನ್ನೂ ಉಳಿದ ದೇವಾಲಯಗಳು ಎಲ್ಲಲ್ಲಿ ಇದ್ದವು ಎಂದು ಗುರುತಿಸುವ ಬಹು ದೊಡ್ಡ ಕೆಲಸವಾಗಿದೆ ಹಾಗೂ ಹುದುಗಿಹೋದ ದೇವಾಲಯಗಳಲ್ಲಿ ಮರುಸೃಷ್ಟಿಸಬಹುದಾದ ದೇವಾಲಯ ಬಗ್ಗೆ ತಜ್ಞರು ಗಂಭೀರ ಆಲೋಚನೆ ಮಾಡುತ್ತಿದ್ದಾರೆ ಎಂದರು.

ಅನ್ವೇಷಣೆ ಸಂದರ್ಭದಲ್ಲಿ 5 ಹಳೆ ಬಾವಿಗಳು ಹಿಸದಾಗಿ ಸಿಕ್ಕಿದೆ, ಹಾಗೂ 5 ಶಾಸನ ಲಭ್ಯವಾಗಿದೆ ಅದರಲ್ಲಿ 3 ಶಾಸನಗಳು ಸಂಪೂರ್ಣ ಅಪ್ರಕಟಿತವಾಗಿದೆ. 2 ಅಪ್ರಕಟಿತವಾಗಿದೆ ಎಂದು ತಿಳಿಸಿದರು.

ಈ ಕಾರ್ಯ ಎಲ್ಲರನ್ನೂ ಹುಮ್ಮಸ್ಸುಗೊಳಿಸಿದೆ, ಸರ್ಕಾರ ಕೆಲಸದಿಂದ ಇತಿಹಾಸವಿರುವ ಗ್ರಾಮಗಳಲ್ಲಿ ಯಾವ ರೀತಿ ಕಾರ್ಯ ಕೈಗೊಳ್ಳಬಹುದು ಎನ್ನುವುದರ ಬಗ್ಗೆ ದಿಕ್ಸೂಚಿ ಆಗಿದೆ ಎಂದು ಹೇಳಿದರು.

ಇಂದು 13 ಗುಡಿಗಳನ್ನು ರಕ್ಷಿತ ಸ್ಮಾರಕ ಎಂದು ಘೋಷಿಸಲು ಸರ್ಕಾರ ನಿರ್ಣಾಯ ಮಾಡಿದೆ ಹಾಗೂ 1 ಮಠದಲ್ಲಿ ವಾಸಮಾಡುತ್ತಿರುವ ಮಾಲಿಕರು ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರಿಗೆ ಬಿಟ್ಟುಕೊಟ್ಟಿದ್ದಾರೆ. ಸ್ವ ಇಚ್ಛೆಯಿಂದ ಬಿಟ್ಟು ಕೊಟ್ಟ ಅವರಿಗೆ ಸರ್ಕಾರದಿಂದ ವಿಶೇಷ ಗೌರವ ನೀಡಲಾಗಿದೆ ಹಾಗೂ ಇನ್ನೂ 4 ಹತ್ತಿರ ವಾಸಮಾಡುತ್ತಿರುವ ಗುಡಿಗಳನ್ನು ಸರ್ಕಾರ ಪಡೆದುಕೊಳ್ಳುವುದಕ್ಕೆ ಮಾತುಕತೆ ನಡೆಸುತ್ತಿದೆ ಎಂದು ತಿಳಿಸಿದರು.

13 ಸ್ಮಾರಕಗಳ ಸಂರಕ್ಷಣಾ ಕೆಲಸ ಪ್ರಾರಂಭವಾಗಿದೆ. ಮೊದಲು ಭೂಮಿಯ ಮೇಲ್ಭಾಗದಲ್ಲಿ ಲಭ್ಯವಿರುವ ಸ್ಮಾರಕಗಳನ್ನು ಸಂಗ್ರಹಿಸುಲಾಗುತ್ತದೆ. ಆನಂತರ ಡಿಸೆಂಬರ್ ಅಂತ್ಯದ ಒಳಗೆ ಉತ್ಖನನ ಕೆಲಸ ಪ್ರಾರಂಭಿಸಲಾಗುತ್ತದೆ, ಹಾಗೂ ಕೋಟೆಯನ್ನು ಅಭಿವೃದ್ಧಿ ಪಡಿಸಿ ಲಕ್ಕುಂಡಿಯನ್ನು ಪ್ರವಾಸೋದ್ಯಮ ತಾಣವನ್ನಾಗಿಸಿ, ಇತಿಹಾಸವನ್ನು ತಿಳಿಯಲು ಬರುವವರಿಗೆ ಶ್ರೇಷ್ಠ ಕೇಂದ್ರವನ್ನಾಗಿಸಿ ಪ್ರಾಚ್ಯಾವಶೇಷಗಳ ಅನ್ವೇಷಣೆ ಕಾರ್ಯದಿಂದ ಲಕ್ಕುಂಡಿಂಯನ್ನು ಯುನೆಸ್ಕೋ ಪಟ್ಟಿಗೆ ಸೇರಿಸಲು ಹತ್ತಿರ ತೆಗೆದುಕೊಂಡು ಹೋಗುತ್ತೇವೆ ಎಂದು ತಿಳಿಸಿದರು. ಶಾಸಕರಾದ ಸಿ ಸಿ ಪಾಟೀಲ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಸಲಹಾ ಸಮಿತಿಯ ಸದಸ್ಯ,ಸಿದ್ಧಲಿಂಗೇಶ್ವರ ಎಚ್ ಪಾಟೀಲ, ಸೇರಿದಂತೆ ಉಳಿದ ಅಧಿಕಾರಿಗಳು ಹಾಜರಿದ್ದರು.

## ಕುಮಾರವ್ಯಾಸ ಇವರ ಹೆಸರಿನಲ್ಲಿ ವಿಶೇಷ "ಶಾಶ್ವತ ಚಿತ್ರ ರದ್ದತಿ" ಮುದ್ರೆಯ ಲೋಕಾರ್ಪಣೆ

ಗದಗ : ಭಾರತೀಯ ಅಂಚೆ ಇಲಾಖೆಯು ಕರ್ನಾಟಕ ಸಂಭ್ರಮ -50 ರ ಅಂಗವಾಗಿ,ಕರ್ನಾಟಕದ ಅಡಿಯಲ್ಲಿ ಪ್ರತಿ ಜಿಲ್ಲೆಗೆ ಒಂದು ಚಿತ್ರಾತ್ಮಕ ರದ್ದತಿಯನ್ನು ಮಾಡಲು ಪ್ರಸ್ತಾಪಿಸಲಾಯಿತು. ಈ ನಿಟ್ಟಿನಲ್ಲಿ ಸಕ್ಷಮ ಪ್ರಾಧಿಕಾರವು ನವೆಂಬರ್ 26 ರಂದು ಬೆ.10 ಗಂಟೆಗೆ ಮೇಘದೂತ ಆಡಿಟೂರಿಯಂ ಬೆಂಗಳೂರು ಜಿ.ಪಿ.ಓ.ನಲ್ಲಿ ಸಂವಿಧಾನ ದಿನದ ಸಂದರ್ಭದಲ್ಲಿ 12 ಶಾಶ್ವತ ಚಿತ್ರ ರದ್ದತಿ ಗಳನ್ನು ವಾಸ್ತವಿಕವಾಗಿ ಬಿಡುಗಡೆ ಮಾಡಲು ತಿಳಿಸಲಾಗಿದೆ.

ಎಲ್ಲಾ ಶಾಶ್ವತ ಚಿತ್ರಗಳನ್ನು ಕರ್ನಾಟಕ ವಲಯದ ಮುಖ್ಯ ಪೋಸ್ಟ್ ಮಾಸ್ಟರ್ ಜನರಲ್ ರಾಜೇಂದ್ರ ಕುಮಾರ ಎಸ್. ಇವರ ಅಮೃತ ಹಸ್ತದಿಂದ ನವೆಂಬರ್ 26 ರಂದು ಬಿಡುಗಡೆ ಮಾಡಲಾಗುವುದು. ತದನಂತರ ಗದಗ ಜಿಲ್ಲೆಯ ಕುಮಾರವ್ಯಾಸ ಇವರ ಹೆಸರಿನಲ್ಲಿ ವಿಶೇಷ ಶಾಶ್ವತ ಚಿತ್ರ ರದ್ದತಿ ಮುದ್ರೆಯ ಲೋಕಾರ್ಪಣೆಯನ್ನು ಜಯದೇವ.ಶಿ.ಕಡಗಿ ,ಅಂಚೆ ಅಧೀಕ್ಷಕರು ಗದಗ ವಿಭಾಗ ಗದಗ ಇವರ ಅಮೃತ ಹಸ್ತದಿಂದ ನವೆಂಬರ್ 26 ರಂದು ಬೆಳಿಗ್ಗೆ 10 ಗಂಟೆಗೆ ನಗರದ ವೀರನಾರಾಯಣ ದೇವಸ್ಥಾನದಲ್ಲಿ ನೆರವೇರಿಸಲಾಗುವುದು. ಈ ಸಮಾರಂಭದಲ್ಲಿ ಸಹಾಯಕ ಅಂಚೆ ಅಧೀಕ್ಷಕರು ಗದಗ ಉಪ ವಿಭಾಗ , ಅಂಚೆ ನಿರೀಕ್ಷಕರು – ರೋಣ, ಪ್ರಧಾನ ಅಂಚೆ ಪಾಲಕರು ಗದಗ ಹಾಗೂ ಸಮಸ್ತ ಗದಗ ಅಂಚೆ ವಿಭಾಗದ ಸಿಬ್ಬಂದಿ ವರ್ಗದವರು ಮತ್ತು ಶ್ರೀ ವೀರನಾರಾಯಣ ದೇವಸ್ಥಾನದ ಆಡಳಿತಾಧಿಕಾರಿಗಳು, ಭಕ್ತಾದಿಗಳು ಭಾಗವಹಿಸಲಿದ್ದಾರೆ ಎಂದು ಗದಗ ವಿಭಾಗದ ಅಂಚೆ ಅಧೀಕ್ಷಕರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

**ಚೂರು–ಪಾರು**

## ಸಾರ್ವಜನಿಕರ ಗಮನಕ್ಕೆ

ಗದಗ : ಪುರಸಭೆ ರೋಣ ಪ್ರತಿ ವರ್ಷ ಸ್ವಚ್ಛ ಸರ್ವೆಕ್ಷಣಯಲ್ಲಿ ಅತಿ ಉತ್ತಮ ಪ್ರಗತಿ ಸಾಧಿಸಿದ್ದು ಪ್ರಸುತ್ತ ಸಾಲಿನಲ್ಲಿ ರೋಣ ಪುರಸಭೆಯನ್ನು ತ್ಯಾಜ್ಯ ಮುಕ್ತಗೊಳಿಸುವಲ್ಲಿ (ಜಿ.ಎಫ್.ಸಿ) ಸಾರ್ವಜನಿಕರ ಸಹಕಾರ ಹಾಗೂ ಪಾಲ್ಗೋಳ್ಳುವಿಕೆಯಿಂದ ಯಶ್ವಸಿಯಾಗಿದೆ ರೋಣನಗರಕ್ಕೆ ಒಂದು ಸ್ಟಾರ್/ಮೂರು ಸ್ಟಾರ್ (ಸಿಂಗಲ್/ತ್ರೀಬಲ್ ಸ್ಟಾರ್) ನಗರವೆಂದು ಘೋಷಿಸಿಸುವ ಸಲುವಾಗಿ ತಮ್ಮ ಸಲಹೆ ಸೂಚನೆಗಳು ಇದ್ದಲ್ಲಿ ಪುರಸಭೆ ಕಾರ್ಯಾಲಯಕ್ಕೆ ಏಳು ದಿನಗಳ ಒಳಗಾಗಿ ತಿಳಿಸಬಹುದಾಗಿದೆ ಎಂದು ಪುರಸಭೆ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಕ್ಷೇಪಣೆ ಸಲ್ಲಿಸಲು ಅವಕಾಶ

ಕಾರವಾರ – ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ವಿವಿಧ ಹುದ್ದೆಗಳನ್ನು ಪಡೆಯಲು ಅರ್ಜಿ ಸಲ್ಲಿಸಿದ ಪಟ್ಟಿಯಿಂದ ತಾತ್ಕಾಲಿಕ ಮತ್ತು ಕಾಯ್ದಿರಿಸಿದ ಆಯ್ಕೆ ಪಟ್ಟಿಯನ್ನು ಆಕ್ಷೇಪಣೆಗೆ ಅವಕಾಶ ನೀಡಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ಸೂಚನಾ ಫಲಕ ಕಾರವಾರದಲ್ಲಿ ಪ್ರಕಟಿಸಲಾಗಿದ್ದು, ಆಕ್ಷೇಪಣೆಗಳಿದ್ದಲ್ಲಿ ನ.26 ರಂದು ಸಂಜೆ 5.30 ಗಂಟೆಯೊಳಗಾಗಿ ಸಲ್ಲಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕು.ಕ ಸೊಸೈಟಿಯ ಸದಸ್ಯ ಕಾರ್ಯದರ್ಶಿ ಹಾಗೂ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಸಂವಿಧಾನ ವಾಚನ ಕಾರ್ಯಕ್ರಮ

ಕೊಪ್ಪಳ : ಸಂವಿಧಾನ ದಿನ ಕಾರ್ಯಕ್ರಮ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಸಂವಿಧಾನ ಪೀಠಿಕೆ ವಾಚನ ಕಾರ್ಯಕ್ರಮವನ್ನು ನವೆಂಬರ್ 26ರಂದು ಬೆಳಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಆಡಿಟೋರಿಯಮ್ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಸರಕಾರದ ಆದೇಶದಂತೆ ನವೆಂಬರ 26ರಂದು ಸಂವಿಧಾನ ದಿನ ಪ್ರಯುಕ್ತ ಸಂವಿಧಾನ ಪಿಠೀಕೆಯನ್ನು ಸಾಮೂಹಿಕವಾಗಿ ಓದುವುದರ ಮೂಲಕ ಮತ್ತು ಸಂವಿಧಾನದ ಮೌಲ್ಯಗಳು, ಸಂವಿಧಾನ ಮೂಲ ಆಶಯಗಳ ಬಗ್ಗೆ ಚರ್ಚೆ, ರಸಪ್ರಶ್ನೆ, ಕಾರ್ಯಕ್ರಮಗಳನ್ನು ಮತ್ತು ವೆಬಿನಾರ್‌ಗಳನ್ನು ಆಯೋಜಿಸಿ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ಆಚರಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಿದ್ದು, ಕೊಪ್ಪಳ ಜಿಲ್ಲಾ ವ್ಯಾಪ್ತಿಯ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢಶಾಲೆಗಳು, ಪದವಿ ಪೂರ್ವ ಮತ್ತು ಪದವಿ ಕಾಲೇಜುಗಳು, ಮೊರಾರ್ಜಿ ದೇಸಾಯಿ, ಕಿತ್ತೂರ ರಾಣಿ ಚನ್ನಮ್ಮ ವಸತಿ ಶಾಲೆಗಳು ಮತ್ತು ವಿದ್ಯಾರ್ಥಿನಿಲಯಗಳಲ್ಲಿ ನ.26ರ ಸಂವಿಧಾನ ದಿನದಂದು ಸಾಮೂಹಿಕವಾಗಿ ಓದುವದರ ಮೂಲಕ ಮತ್ತು ಸಂವಿಧಾನದ ಮೌಲ್ಯಗಳು, ಮೂಲ ಆಶಯಗಳ ಬಗ್ಗೆ ಚರ್ಚೆ, ರಸಪ್ರಶ್ನೆ ಕಾರ್ಯಕ್ರಮಗಳನ್ನು ಮತ್ತು ವೆಬಿನಾರ್‌ಗಳನ್ನು ಆಯೋಜಿಸಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲು ಈ ಮೂಲಕ ಸೂಚಿಸಿದೆ.

ಈ ಕಾರ್ಯಕ್ರಮದಲ್ಲಿ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಕಡ್ಡಾಯವಾಗಿ ಹಾಜರಿದ್ದು ಕಾರ್ಯಕ್ರಮ ಯಶಸ್ವಿಗೊಳಿಸಬೇಕು. ಸಂವಿಧಾನ ಪೀಠಿಕೆ ವಾಚನ ಕಾರ್ಯಕ್ರಮಕ್ಕೆ ಗೈರು ಹಾಜರಾದ ಅಧಿಕಾರಿ, ಸಿಬ್ಬಂದಿಗಳ ಮೇಲೆ ಸೂಕ್ತ ಕ್ರಮ ಜರುಗಿಸಲಾಗುವುದು ಮತ್ತು ತಾಲ್ಲೂಕು ಮಟ್ಟದ ಕಛೇರಿಗಳಲ್ಲಿ ಸಹ ಈ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲು ಕೊಪ್ಪಳ ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನ.28ರಂದು ಕೊಪ್ಪಳದಲ್ಲಿ ಜಾಬ್ ಡ್ರೈವ್

ಕೊಪ್ಪಳ : ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಿಂದ ಜಾಬ್ ಡ್ರೈವ್ ಅನ್ನು ನವೆಂಬರ್ 28ರಂದು ಬೆಳಿಗ್ಗೆ 10 ರಿಂದ 1.30 ರವರೆಗೆ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಆಯೋಜಿಸಲಾಗಿದೆ.

ಈ ಜಾಬ್ ಡ್ರೈವ್‌ನಲ್ಲಿ ಖಾಸಗಿ ಸಂಸ್ಥೆಗಳು ಆಗಮಿಸಿ ತಮ್ಮಲ್ಲಿನ ಖಾಲಿ ಹುದ್ದೆಗಳಿಗೆ ಎಸ್.ಎಸ್.ಎಲ್.ಸಿ., ಪಿಯುಸಿ, ಯಾವುದೇ ಪದವಿ, ಬಿ.ಇ ಎಲೆಕ್ಟ್ರಿಕಲ್, ಎಂ.ಎಸ್ಸಿ ಮೆಥಮೆಟಿಕ್ಸ್, ಡಿಪ್ಲೊಮಾ ಟೂಲ್ ಅಂಡ ಡೈಯಮೇಕಿಂಗ್ ಮತ್ತು ಬಿ.ಇ. ಮೆಕ್ಯಾನಿಕಲ್ ಅಭ್ಯರ್ಥಿಗಳನ್ನು ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಭಾಗವಹಿಸಲು ಯಾವುದೇ ಶುಲ್ಕ ಇರುವುದಿಲ್ಲ ಎಲ್ಲರಿಗೂ ಉಚಿತ ಪ್ರವೇಶವಿರುತ್ತದೆ. ಈ ಜಾಬ್ ಡ್ರೈವ್‌ನಲ್ಲಿ ಭಾಗವಹಿಸುವ ಆಸಕ್ತಿಯುಳ್ಳ 18 ರಿಂದ 30 ವರ್ಷದ ವರೆಗಿನ ಯುವಕ ಮತ್ತು ಯುವತಿಯರಿಗೆ ಮಾತ್ರವಾಗಿದ್ದು, ಅರ್ಹ ವಿದ್ಯಾರ್ಹತೆ ಹೊಂದಿದ ನಿರುದ್ಯೋಗಿ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಎಲ್ಲಾ ಪ್ರಮಾಣ ಪತ್ರಗಳು ಮತ್ತು ಆಧಾರ ಕಾರ್ಡಿನ ಪ್ರತಿ, ಬಯೋಡಾಟಾ (ರೆಜುಮ್), ಹಾಗೂ ಪಾಸ್ ಪೋರ್ಟ ಅಳತೆಯ 02 ಭಾವಚಿತ್ರಗಳೊಂದಿಗೆ ಈ ಜಾಬ್ ಡ್ರೈವ್‌ನಲ್ಲಿ ಭಾಗವಹಿಸಿ, ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಮೊದಲನೇ ಮಹಡಿ, ಕೊಪ್ಪಳ ಇವರನ್ನು ಸಂಪರ್ಕಿಸಬಹುದಾಗಿದೆ. ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೇನಾ ನೇಮಕಾತಿ ರ್‍ಯಾಲಿ: ವಿಶೇಷ ಸಾರಿಗೆ ವ್ಯವಸ್ಥೆ

ಕೊಪ್ಪಳ : ಕೊಪ್ಪಳ ಜಿಲ್ಲೆಯಲ್ಲಿ ನವೆಂಬರ್ 26ರಿಂದ ಡಿಸೆಂಬರ್ 08ರವರೆಗೆ ನಡೆಯಲಿರುವ ಸೇನಾ ನೇಮಕಾತಿ ರ್‍ಯಾಲಿಯಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಅನುಕೂಲವಾಗಲು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಕೊಪ್ಪಳ ವಿಭಾಗದದಿಂದ ಕೊಪ್ಪಳದ ಕೇಂದ್ರ ಬಸ್ ನಿಲ್ದಾಣ ಹಾಗೂ ರೈಲ್ವೆ ನಿಲ್ದಾಣದಿಂದ ಜಿಲ್ಲಾ ಕ್ರೀಡಾಂಗಣಕ್ಕೆ ವಿಶೇಷ ಸಾರಿಗೆ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆ ತಿಳಿಸಿದ್ದಾರೆ.

## ಅಂತರಾಷ್ಟ್ರೀಯ ಪ್ರಜಾ ಪ್ರಭುತ್ವ ದಿನಾಚರಣೆ

# ಆನ್‌ಲೈನ ನೋಂದಣಿಯಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದ ಧಾರವಾಡ ಜಿಲ್ಲೆಗೆ ಪ್ರಶಸ್ತಿ ಪ್ರಕಟ



**ಧಾರವಾಡ :** ಕರ್ನಾಟಕ ಸರ್ಕಾರವು ಕಳೆದ ಸೆಪ್ಟಂಬರ್ 15, 2024 ರಂದು ಅಂತರಾಷ್ಟ್ರೀಯ ಪ್ರಜಾ ಪ್ರಭುತ್ವ ದಿನಾಚರಣೆಯ ಅಂಗವಾಗಿ ಪ್ರಜಾ ಪ್ರಭುತ್ವ ಜಾಗೃತಿ ಮೂಡಿಸಲು ಬೀದರ್‌ದಿಂದ ಚಾಮರಾಜನಗರ ಜಿಲ್ಲೆಯವರೆಗೆ ಮಾನವ ಸರಪಳಿ ನಿರ್ಮಾಣ ಹಾಗೂ ವಿವಿಧ ಕಾರ್ಯಕ್ರಮಗಳಿಗೆ ಧಾರವಾಡ ಜಿಲ್ಲೆಯಿಂದ ಅತೀ ಹೆಚ್ಚು ಜನರು ಆನ್ ಲೈನ್ ಮೂಲಕ ತಮ್ಮ ಹೆಸರು ನೋಂದಣಿ ಮಾಡಿಕೊಂಡಿದ್ದರಿಂದ ಧಾರವಾಡ ಜಿಲ್ಲೆಗೆ ರಾಜ್ಯ ಸರ್ಕಾರವು ಪ್ರಥಮ ಸ್ಥಾನ ಪ್ರಶಸ್ತಿ ಪ್ರಕಟಿಸಿದೆ.

ಈ ಕುರಿತು ಅಭಿನಂದನಾ ಪತ್ರ ನೀಡಿರುವ ಸರ್ಕಾರವು, ರಾಜ್ಯ ಸರ್ಕಾರದಿಂದ ಅಂತರ ರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಹಮ್ಮಿಕೊಳ್ಳುವುದರ ಮೂಲಕ, ಬೀದರ್‌ದಿಂದ ಚಾಮರಾಜನಗರ ಜಿಲ್ಲೆಯವರೆಗೆ ಮಾನವ ಸರಪಳಿ ನಿರ್ಮಿಸಿ ಒಂದು ವಿಶಿಷ್ಟ ದಾಖಲೆ ನಿರ್ಮಿಸಲಾಗಿದೆ. ಇದು ವರ್ಡ್ ಬುಕ್ ಆಫ್ ರಿಕಾರ್ಡ್ಸ ಸೇರ್ಪಡೆಗೊಂಡಿರುವುದು ನಮ್ಮೆಲ್ಲರಿಗೂ ಹೆಮ್ಮೆಯ ವಿಷಯವಾಗಿದೆ.

ಪ್ರಜಾ ಪ್ರಭುತ್ವ ದಿನಾಚರಣೆಯ ಮಾನವ ಸರಪಳಿ ನಿರ್ಮಾಣ ಹಾಗೂ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದ ಜಿಲ್ಲೆಗಳನ್ನು ಮಾನವ ಸರಪಳಿ ನಾವಿಣ್ಯತೆ, ಅತ್ಯಂತ ಉದ್ದದ ಮಾನವ ಸರಪಳಿ, ಅತಿ ಹೆಚ್ಚು ಗಿಡಗಳನ್ನು ನೆಡುವುದು, ಅತಿ ಹೆಚ್ಚು ಸ್ವಯಂ ಸೇವಾ ಸಂಘಗಳ ಭಾಗವಹಿಸುವಿಕೆ, ಅತಿ ಹೆಚ್ಚಾಗಿ ಖಾಸಗಿ ಕಂಪನಿಗಳ ಭಾಗವಹಿಸುವಿಕೆ ಮತ್ತು ಅತಿ ಹೆಚ್ಚು ಆನ್ಲೈನ್ ರಿಜಿಸ್ಟೇಷನ್ ಮಾಡಿರುವುದು. ಈ 6 ವಿಭಾಗಗಳಲ್ಲಿ ತಲಾ 3 ಪ್ರಶಸ್ತಿಗಳನ್ನು ನೀಡಲು ಸರ್ಕಾರ ತೀರ್ಮಾನಿಸಿದೆ.

ಈ ಪೈಕಿ ಧಾರವಾಡ ಜಿಲ್ಲೆಯು ಅತಿ ಹೆಚ್ಚು ಆನ್ಲೈನ್ ರಿಜಿಸ್ಟೇಷನ್ ಮಾಡಿರುವ ವಿಭಾಗದಲ್ಲಿ ಪ್ರಥಮ ಸ್ಥಾನವನ್ನು ಪಡೆದಿದೆ. ಆದ್ದರಿಂದ ನವೆಂಬರ್ 26, 2024 ರಂದು ಬೆಳಿಗ್ಗೆ 11 ಗಂಟೆಗೆ ಬೆಂಗಳೂರಿನ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಏರ್ಪಡಿಸಿರುವ ಸಂವಿಧಾನ ದಿನಾಚರಣೆಯ ಕಾರ್ಯಕ್ರಮದಲ್ಲಿ ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರಿಗೆ ಮುಖ್ಯಮಂತ್ರಿಗಳು ಪ್ರಶಸ್ತಿ ವಿತರಿಸಲಿದ್ದಾರೆ ಎಂದು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಕಾರ್ಯನಿರ್ವಾಹಕ ನಿರ್ದೇಶಕರು ತಿಳಿಸಿದ್ದಾರೆ.

## ಸೇನಾ ನೇಮಕಾತಿ ರ್‍ಯಾಲಿ: ಮಾಹಿತಿ ಕಾರ್ಯಕ್ರಮ



ಕೊಪ್ಪಳ : ಬೆಳಗಾವಿ ಸೇನಾ ನೇಮಕಾತಿ ಕಛೇರಿಯ ಸಹಯೋಗದೊಂದಿಗೆ "ಸೇನಾ ನೇಮಕಾತಿ ರ್‍ಯಾಲಿ" ಅಗ್ನಿಪಥ್ ಯೋಜನೆಯಲ್ಲಿ ಪ್ರೇರಕ ಉಪನ್ಯಾಸ (MOTIVATIONAL LECTURE ON AGNIPATH SCHEME) ಕುರಿತು ಕುಷ್ಟಗಿ ರಸ್ತೆಯ ಟಣಕನಕಲ್ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಶುಕ್ರವಾರದಂದು ಮಾಹಿತಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಬೆಳಗಾವಿ ಸೇನಾ ನೇಮಕಾತಿ ಅಧಿಕಾರಿ ಮೇಜರ್ ವಿಶ್ವನಾಥ, ಸುಬೆದಾರ ಮೇಜರ್ ಡಿ.ಆರ್.ಲೋಹಿಯಾ ಮತ್ತು ಸುಬೆದಾರ ಮಲಕೀತ್ ಸಿಂಗ್ ಅವರು ಭಾಗವಹಿಸಿ ನ.26 ರಿಂದ ಡಿಸೆಂಬರ್ 08 ರವರೆಗೆ ಕೊಪ್ಪಳದ ಜಿಲ್ಲಾ ಕ್ರಿಡಾಂಗಣದಲ್ಲಿ ನಡೆಯಲಿರುವ ಸೇನಾ ನೇಮಕಾತಿ ರ್‍ಯಾಲಿಯ ಬಗ್ಗೆ ಕೈಗಾರಿಕಾ ತರಬೇತಿ ಸಂಸ್ಥೆಯ ತರಬೇತಾರ್ಥಿಗಳೀಗೆ ಮಾಹಿತಿಯನ್ನು ನೀಡಿದರು. ಸಂಸ್ಥೆಯ ಪ್ರಾಚಾರ್ಯರಾದ ಗವಿಶಂಕರ ಕೆ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು. ಸ್ವಾಗತ ಹಾಗೂ ಕಾರ್ಯಕ್ರಮದ ನಿರೂಪಣೆಯನ್ನು ಪ್ರವೀಣ ಮತ್ತು ವಂದನಾರ್ಪಣೆಯನ್ನು ದೇವಪ್ಪ ಕುರಿ ಅವರು ನಡೆಸಿಕೊಟ್ಟರು.

## ಪ್ರಾಚ್ಯಾವಶೇಷಗಳ ಅನ್ವೇಷಣಾ ಕಾರ್ಯಕ್ರಮ

# ಲಕ್ಕುಂಡಿ ಐತಿಹಾಸಿಕ ವೈಭವ ಮರುಕಳಿಸುವಂತಾಗಲಿ

**ಗದಗ :** ಲಕ್ಕುಂಡಿಯ ಇತಿಹಾಸ, ಪರಂಪರೆ, ಸಂಸ್ಕೃತಿ ಶ್ರೀಮಂತಿಕೆ, ಶಿಲ್ಪಕಲೆಗಳು, ಶಾಸನಗಳ ಜಾಗೃತರಾಗಿ ಲಕ್ಕುಂಡಿಯ ಗತಕಾಲದ ವೈಭವವನ್ನು ಮರುಕಳಿಸಿ ಲಕ್ಕುಂಡಿಯ ಮಹತ್ವವನ್ನು ಜಗತ್ತಿಗೆ ತೋರಿಸಿ ಯುನೆಸ್ಕೋ ಪಟ್ಟಿಗೆ ಸೇರಿಸುವಂತೆ ಮಾಡಬೇಕು ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಗದಗ ತಾಲೂಕಿನ ಲಕ್ಕುಂಡಿಯ ಹಾಲಗುಂಡಿ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯಲ್ಲಿ ಪ್ರಾಚ್ಯಾವಶೇಷಗಳ ಅನ್ವೇಷಣೆ ಕಾರ್ಯಕ್ರಮಕ್ಕೆ ಭಾನುವಾರ ಚಾಲನೆ ನೀಡಿ ಅವರು ಮಾತನಾಡಿದರು.

ಲಕ್ಕುಂಡಿ, ಲೊಕ್ಕಿಗುಂಡಿ ಎಂಬ ಹೆಸರಿನಿಂದ ರಾಮಾಯಣ, ಮಹಾಭಾರತದ ಕಾಲದಿಂದಲೂ ಪ್ರಸಿದ್ಧಿ ಹೊಂದಿದೆ. ಇಲ್ಲಿಯವರೆಗೆ ಲಕ್ಕುಂಡಿಯ ಇತಿಹಾಸ, ಶಿಲ್ಪಕಲೆಗಳು, ಶಾಸನಗಳನ್ನು ನಿರ್ಲಕ್ಷ್ಯ ಮಾಡಿದ್ದೇವು. ಇಂದು ಜಾಗೃತರಾಗಿ ನಮ್ಮ ಇತಿಹಾಸ, ಪರಂಪರೆ, ಸಂಸ್ಕೃತಿ ಹಾಗೂ ಶ್ರೀಮಂತಿಕೆಯನ್ನು ಜಗತ್ತಿಗೆ ಪರಿಚಯಿಸಿ ಲಕ್ಕುಂಡಿಯು ಜಾಗತಿಕ, ಪಾರಂಪರಿಕ ಪಟ್ಟಿಯಲ್ಲಿ ಸೇರುವುದು ಸನ್ನಿಹಿತವಾಗಿದೆ. ಯುನೆಸ್ಕೋ ಆ ಸ್ಥಾನಮಾನ ಕೊಡುವುದಕ್ಕೆ ಬಹಳ ದಿನ ಬೇಕಾಗಿಲ್ಲ ಎಂದರು.

101 ಬಾವಿ, 101 ದೇವಸ್ಥಾನಗಳ ಇತಿಹಾಸ ಹೊಂದಿರುವ ಲಕ್ಕುಂಡಿಂಯಲ್ಲಿ ಪ್ರಾಚ್ಯಾಶೇಷಗಳ ಸಂಗ್ರಹಣೆ ಮೂಲಕ ಹುದುಗಿ ಹೋಗಿರುವ ದೇವಸ್ಥಾನ ಹಾಗೂ ಬಾವಿಗಳ ಅನ್ವೇಷಣೆ ಹಾಗೂ ಮರುಸೃಷ್ಟಿ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಲಕ್ಕುಂಡಿಯಲ್ಲಿರುವ ಶಾಸನಗಳು ಹಾಗೂ ಶಿಲ್ಪಕಲೆಗಳನ್ನು ಕೆಲವರು ಮನೆಗಳನ್ನಾಗಿ ಮಾಡಿಕೊಂಡಿದ್ದಾರೆ, ಕೆಲವರು ಕುರಿ, ಆಕಳು ಕಟ್ಟಿದ್ದಾರೆ. ಅವುಗಳ ಮಹತ್ವ ತಿಳಿಸಿ ಅವುಗಳನ್ನು ಒಂದೆಡೆ ಸಂಗ್ರಹಿಸಿ, ಸಂರಕಗಷಿಸೋಣ ಎಂದರು.

ಲಕ್ಕುಂಡಿಯಲ್ಲಿ ಕೈಗೊಂಡಿರುವ ಪ್ರಾಚ್ಯಾವಶೇಷಗಳ ಅನ್ವೇಷಣೆ ರಾಜ್ಯಕ್ಕೆ ದಿಕ್ಸೂಚಿ ಯಾಗಬೇಕು. ಇದರ ಪ್ರೇರಣೆ ಕರ್ನಾಟಕದ ತುಂಬೆಲ್ಲ ಹರಡಬೇಕು. ಜೀರ್ಣೋದ್ಧಾರ ಆಗಬೇಕು ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನರಗುಂದ ಶಾಸಕ ಸಿ.ಸಿ. ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಈ ರೀತಿಯ ಪ್ರಾಚ್ಯಾವಶೇಷಗಳ ಅನ್ವೇಷಣೆ ಕಾರ್ಯಕ್ರಮ ನಡೆಯುತ್ತಿರುವುದು ಪ್ರಥಮ ಬಾರಿಗೆ ಆಗಿದೆ. ನರಗುಂದ ವಿಧಾನ ಸಭಾ ಕ್ಷೇತ್ರದ ದಾನದ ಚಿಂತಾಮಣಿ ಅತ್ತಿಮಬ್ಬೆಯ ಕರ್ಮಭೂಮಿ ಲಕ್ಕುಂಡಿ ಗ್ರಾಮದಲ್ಲಿ ನಡೆಯುತ್ತಿದ್ದು ತುಂಬಾ ಸಂತೋಷ ತಂದಿದೆ ಎಂದರು.



ಪ್ರಚ್ಯಾವಶೇಷಗಳನ್ನು ಸಂಗ್ರಹಣೆ ಮಾಡಿ ಕೊಂಡು ಸೂಕ್ತ ಗೌರವಾನಿತ ಸ್ಥಳದಲ್ಲಿ ಇಟ್ಟು ಮುಂದಿನ ಪೀಳಿಗೆಗೆ ಹಿಂದಿನ ಕಾಲದ ವೈಭವದ ಕುರುಹುಗಳನ್ನು ನೆನೆಪಿಸುವ ಕಾರ್ಯಕ್ರಮ ಆಗಿದೆ ಮುಂದಿನ ದಿನಗಳಲ್ಲಿ ಇಂದಿನ ಪ್ರಚ್ಯಾವಶೇಷಗಳ ಅನ್ವೇಷಣೆ ಕಾರ್ಯವು ಮಾದರಿಯಾಗಿ ದೇಶದಲ್ಲಿರುವ ಅನೇಕ ಗ್ರಾಮಗಳಲ್ಲಿರುವ ಪ್ರಾಚ್ಯಾವಶೇಷಗಳ ಅನ್ವೇಷಣೆ ನಡೆಯುತ್ತದೆ ಎಂದು ವಿಶ್ವಾಸ ವ್ಯಕ್ತ ಪಡೆಸಿದರು.

ವಿಶೇಷವಾಗಿ ಯುವಕರು ಆಸಕ್ತಿವಹಿಸಿ ಸಂಗ್ರಹಮಾಡಿರುವ ವಿಗ್ರಹ ಶಿಲಾಕೃತಿಗಳ ಅಧ್ಯಯನ ಮಾಡಿ ಅದರ ಹಿಂದಿರುವ ತತ್ವ ಆದರ್ಶವನ್ನು ತಿಳಿದು ಲಕ್ಕುಂಡಿಯ ವೈಭವವನ್ನು ಇನ್ನಷ್ಟೂ ಎತ್ತರಕ್ಕೆ ತೆಗೆದುಕೊಂಡು ಹೋಗಬೇಕು ಎಂದು ನುಡಿದರು.

ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ, ಮಾಜಿ ಶಾಸಕ ಡಿ ಆರ್ ಪಾಟೀಲ, ಲಕ್ಕುಂಡಿ ಗ್ರಾಮಪಂಚಾಯತಿ ಅಧ್ಯಕ್ಷರಾದ ಕೆಂಚಪ್ಪ ಎಸ್ ಪೂಜಾರ್, ಲಕ್ಕುಂಡಿ ಗ್ರಾಮ ಪಂಚಾಯತಿ ಉಪಾಧ್ಯಕ್ಷೆ ಪುಷ್ಪಾ ಎಸ್. ಪಾಟೀಲ, ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ವಾಸಣ್ಣ ಕುರಡಗಿ, ಪ್ರವಾಸೋದ್ಯಮ ಇಲಾಖೆ ಕಾರ್ಯದರ್ಶಿಗಳಾದ ಸಲ್ಮಾ ಫಾಹಿಮ್, ಪ್ರವಾಸೋದ್ಯಮ ಇಲಾಖೆ ನಿರ್ದೇಶಕ ಡಾ.ಕೆ.ವಿ. ರಾಜೇಂದ್ರ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಮೈಸೂರಿನ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಆಯುಕ್ತ ದೇವರಾಜು.ಎ, ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ ಬಿ ಅಸೂಟಿ, ಗ್ರಾಮೀಣಾಭಿವೃದ್ಧಿ ವಿವಿ ಕುಲಪತಿ ಪ್ರೊ. ಸುರೇಶ ನಾಡಗೌಡರ, ಜಾನಪದ ವಿವಿ ಕುಲಪತಿ ಟಿ.ಎಂ. ಬಾಸ್ಕರ್, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಸಮಿತಿ ಸದಸ್ಯರುಗಳಾದ ಸಿದ್ಧಲಿಂಗೇಶ್ವರ ಎಚ್ ಪಾಟೀಲ, ರಾವ್, ಅ.ಧ.ಕಟ್ಟಿಮನಿ, ಉಮೇಶಗೌಡ ಪಾಟೀಲ ಹನುಮಾಕ್ಷಿ ಬೋಗಿ, ಹಂಪಿ ವಿಶ್ವವಿದ್ಯಾಲಯ ಕುಲಪತಿಗಳಾದ ಡಿ ವಿ ಪರಮಶಿವ ಮೂರ್ತಿ, ದೇವರಕೊಂಡ ರೆಡ್ಡಿ, ಲಕ್ಕುಂಡಿ ಗ್ರಾಮ ಪಂಚಾಯತಿಯ ಸರ್ವ ಸದ್ಯಸರು ಹಾಜರಿದ್ದರು.

## ಉಸ್ತುವಾರಿ ಕಾರ್ಯದರ್ಶಿಗಳಿಂದ ಸಭೆ

# ಹಾನಿಯಾದ ಮನೆ ಬೆಳೆಗಳಿಗೆ ತ್ವರಿತವಾಗಿ ಪರಿಹಾರ ನೀಡಿ: ಕೆ.ಪಿ. ಮೋಹನ್ ರಾಜ್

**ಕೊಪ್ಪಳ :** ಮಳೆಯಿಂದಾಗಿ ಹಾನಿಯಾದ ಮನೆ ಮತ್ತು ಬೆಳೆಗಳಿಗೆ ತ್ವರಿತವಾಗಿ ಪರಿಹಾರ ನೀಡಿ, ಯಾವುದೇ ಪ್ರಕರಣಗಳನ್ನು ಬಾಕಿ ಉಳಿಯದಂತೆ ಸಂಬಂಧಪಟ್ಟ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಕೃಷ್ಣ ಭಾಗ್ಯ ಜಲ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಕೆ.ಪಿ. ಮೋಹನ್ ರಾಜ್ ಸೂಚನೆ ನೀಡಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಹಮ್ಮಿಕೊಂಡಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷ ವಹಿಸಿ ಮಾತನಾಡಿದರು.

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಬಿತ್ತನೆಯಾದ ಬೆಳೆಗಳಿಗೆ ಬೇಕಾಗುವ ರಸಗೊಬ್ಬರವನ್ನು ರೈತರ ಬೇಡಿಕೆಯಂತೆ ಪೂರೈಕೆ ಮಾಡಲು ಕ್ರಮ ಕೈಗೊಳ್ಳಬೇಕು. ಬೆಳೆಗಳಲ್ಲಿ ಕಂಡುಬರುವ ರೋಗಗಳ ನಿಯಂತ್ರಣ, ಹತೋಟಿ ಕ್ರಮಗಳ ಕುರಿತು ಜಿಲ್ಲೆಯ ಎಲ್ಲಾ ರೈತ ಸಂಪರ್ಕ ಕೇಂದ್ರಗಳ ಮೂಲಕ ರೈತರಿಗೆ ಸೂಕ್ತ ಜಾಗೃತಿ ಮೂಡಿಸಬೇಕು. ಇದಲ್ಲದೆ ಜಾನುವಾರುಗಳಲ್ಲಿ ಕಂಡುಬರುವ ಕಾಲು–ಬಾಯಿ ರೋಗ ಹಾಗೂ ಇತರೆ ಕಾಯಿಲೆಗಳ ಮುಂಜಾಗ್ರತಾ ಕ್ರಮವಾಗಿ ಜಿಲ್ಲೆಯ ಕುರಿ, ಮೇಕೆ, ದನಕರುಗಳಿಗೆ ಲಸಿಕೆ ನೀಡಲು ಕ್ರಮ ಕೈಗೊಳ್ಳಬೇಕು. ಲಸಿಕೆಯ ಬಗ್ಗೆ ರೈತರಿಗೆ ಅರಿವು ಮೂಡಿಸಬೇಕು ಎಂದು ಕೃಷಿ ಹಾಗೂ ಪಶುಪಾಲನಾ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಸಕಾಲ ಮತ್ತು ಐಪಿಜಿಆರ್‌ಎಸ್ ಅರ್ಜಿಗಳನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು. ಸರ್ಕಾರದ ಯೋಜನೆಗಳನ್ನು ಪಡೆಯಲು ಅರ್ಜಿ ಸಲ್ಲಿಸುವ ಸಾರ್ವಜನಿಕರಿಗೆ ಅವಶ್ಯಕ ದಾಖಲೆಗಳ ಮಾಹಿತಿಯನ್ನು ಮೊದಲೇ ತಿಳಿಸಬೇಕು. ಸಕಾಲ ನಿರ್ವಹಣೆಗಾಗಿಯೇ ಒಬ್ಬ ಅಧೀನ ಅಧಿಕಾರಿ ಅಥವಾ ಸಿಬ್ಬಂದಿಯನ್ನು ನಿಯೋಜಿಸಬೇಕು. ಕಂದಾಯ, ಜಿಲ್ಲಾ ಪಂಚಾಯತ್ ಅಡಿ ಬರುವ ಎಲ್ಲ ಇಲಾಖೆಗಳು ಅರ್ಜಿಯನ್ನು ಕಡ್ಡಾಯವಾಗಿ ಸ್ವೀಕರಿಸಬೇಕು. ನಿಗದಿತ ಅವಧಿಯೊಳಗೆ ವಿಲೇವಾರಿ ಮಾಡಬೇಕು. ಯಾವುದೇ ಸೂಕ್ತ ಕಾರಣಗಳಿಲ್ಲದೆ ಅರ್ಜಿ ತಿರಸ್ಕಾರ ಮಾಡುವಂತಿಲ್ಲ. ಸಕಾಲದಲ್ಲಿ ಕೇವಲ ಅರ್ಜಿ ವಿಲೇವಾರಿಗಳಷ್ಟೇ ಅಲ್ಲ, ಬಾಕಿ ಉಳಿದ, ತಿರಸ್ಕರಿಸಿದ ಅರ್ಜಿಗಳ ಸಂಖ್ಯೆಯನ್ನು ಸಹ ಪರಿಗಣಿಸಲಾಗುವುದರಿಂದ ಜಿಲ್ಲೆಯ ಸೂಚ್ಯಂಕದಲ್ಲಿ ಇದು ಋಣಾತ್ಮಕ ಅಂಶವನ್ನು ತೋರಿಸುತ್ತದೆ. ಆದ್ದರಿಂದ ಸಕಾಲ ಅರ್ಜಿಗಳ ವಿಲೇವಾರಿಗೆ ಎಲ್ಲಾ ಇಲಾಖೆಗಳ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಅವರು ತಿಳಿಸಿದರು. ಜಿಲ್ಲೆಯ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಅವಶ್ಯವಿರುವ ಬೆಡ್‌ಗಳ ವ್ಯವಸ್ಥೆ ಮಾಡಬೇಕು. ಬಿಪಿಎಲ್ ನಿಂದ್ ಎಪಿಎಲ್ ಹಾಗೂ ಆದಾಯ ತೆರೆಗಿ ಪಾವತಿದಾರರ ಕಾರ್ಡ್‌ಗಳು ರದ್ದಾಗಿದ್ದು, ಈ ಬಗ್ಗೆ ಪರಿಶೀಲಿಸಬೇಕು. ರದ್ದಾದ ಪಟ್ಟಿಯಲ್ಲಿ ಕೊಪ್ಪಳ ಜಿಲ್ಲೆಯ ಯಾವುದೇ ಅರ್ಹ ಫಲಾನುಭವಿಗಳ ಪಡಿತರ ಚೀಟಿ ಸೇರಿದ್ದರೆ ಅವರಿಗೆ ಮತ್ತೆ ಬಿಪಿಎಲ್ ಕಾರ್ಡ್ ನೀಡಲು ನಿಯಮಾನುಸಾರ ಕ್ರಮ ಕೈಗೊಳ್ಳಿ. ಗೃಹಲಕ್ಷ್ಮಿ ಯೋಜನೆಯಡಿ ಸೌಲಭ್ಯ ಪಡೆಯದೆ ಬಾಕಿ ಉಳಿದ ಪ್ರಕರಣಗಳ ಸಮಸ್ಯೆಗಳನ್ನು ಬಗೆಹರಿಸಬೇಕು. ಸರ್ಕಾರದ ವಿವಿಧ ಯೋಜನೆಗಳ ಲಾಭವು ಜನತೆಗೆ ತಲುಪುವ ನಿಟ್ಟಿನಲ್ಲಿ ನಾನಾ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವಲ್ಲಿ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಕ್ರಿಯಾಶೀಲರಾಗಿ ಕೆಲಸ ನಿರ್ವಹಿಸಬೇಕು ಎಂದು ಹೇಳಿದರು. ಸಭೆಯಲ್ಲಿ ಜಿಲ್ಲಾಧಿಕಾರಿ ನಲಿನ್ ಅತುಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್ ಅರಸಿದ್ದಿ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಪ್ರಕಾಶ ವಡ್ಡರ, ಜಂಟಿ ಕೃಷಿ ನಿರ್ದೇಶಕ ಟಿ.ಎಸ್.ರುದ್ರೇಶಪ್ಪ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತಿತರರಿದ್ದರು.

# ಹಳ್ಳಿಯನ್ನೆ ಹೈಟೆಕ್ ಸಿಟಿ ಮಾಡಲು ಹೊರಟ ಡಿಸ್ಕೊ



ಕನಸು ಕಾಣುವುದು ಸುಲಭ ಅದನ್ನು ಸಾಕಾರಗೊಳಿಸುವುದು ಸಾಧನೆ. ಹೀಗೆ ಕನಸು ಕಾಣುವ ಹಳ್ಳಿಹುಡುಗನ ಕಥೆಯನ್ನಿಟ್ಟುಕೊಂಡು 'ಡಿಸ್ಕೊ' ಚಿತ್ರ ಮಾಡಲುಹೊರಟಿದ್ದಾರೆ ನಿರ್ದೇಶಕ ಹರಿಸಂತು. ಈ ಚಿತ್ರಕ್ಕೆ ಕಥೆ ಬರೆದುಕೊಂಡು ನಾಯಕರಾಗಿದ್ದಾರೆ ವಿಕ್ಕಿವರುಣ್.

ಇತ್ತೀಚೆಗೆ ಚಿತ್ರದ ಟೈಟಲ್ ಅನಾವರಣ ಕಾರ್ಯಕ್ರಮ ನಡೆಯಿತು. ಕೆ.ವಿ.ಎನ್ ಪ್ರೊಡಕ್ಷನ್ಸ್ ಮುಖ್ಯಸ್ಥರಾದ ವೆಂಕಟ್ ನಾರಾಯಣ್ ಹಾಗೂ ರವಿಕುಮಾರ್ ಪೋಸ್ಟರ್ ಅನಾವರಣ ಮಾಡುವ ಮೂಲಕ ನೂತನ ಚಿತ್ರಗಳಿಗೆ ಚಾಲನೆ ನೀಡಿದರು. ಡಿ.ಎಸ್ ಮ್ಯಾಕ್ಸ್ ನ ದಯಾನಂದ್ ಸೇರಿದಂತೆ ಹಲವು ಗಣ್ಯರು ಸಮಾರಂಭಕ್ಕೆ ಆಗಮಿಸಿ ಚಿತ್ರತಂಡಕ್ಕೆ ಶುಭ ಕೋರಿದರು.

ಡಿಸ್ಕೋ ಇದು ನಾಯಕನ ಅಡ್ಡ ಹೆಸರು ಎಂದು ಮಾತು ಆರಂಭಿಸಿದ ನಿರ್ದೇಶಕ ಹರಿ ಸಂತೋಷ್, ವಿಕ್ಕಿ ವರುಣ್ ಈ ಚಿತ್ರದ ನಾಯಕ. ನನ್ನ ಹಾಗೂ ವಿಕ್ಕಿ ವರಣ್ ಕಾಂಬಿನೇಶನ್ ನಲ್ಲಿ ಕಾಲೇಜ್ ಕುಮಾರ ಚಿತ್ರದ ನಂತರ ಈ ಚಿತ್ರ ಮೂಡಿಬರುತ್ತಿದೆ. ಇದೊಂದು ಹಳ್ಳಿಯಲ್ಲಿ ನಡೆಯುವ ಕಥೆ. ನಮ್ಮ ಪೆನ್ ಎನ್ ಪೇಪರ್ ಸ್ಟುಡಿಯೋಸ್ ಹಾಗೂ ಕಲ್ಲೂರ್ ಸಿನಿಮಾಸ್ ಬ್ಯನಾರ್ ನಲ್ಲಿ ಈ ಚಿತ್ರ ಮೂಡಿ ಬರುತ್ತಿದೆ. ಪ್ರಶಾಂತ್ ಕಲ್ಲೂರ್ ಹಾಗೂ ಹರೀಶ್ ರೆಡ್ಡಿ(ಸಹ ನಿರ್ಮಾಪಕ)ಅವರು ನಿರ್ಮಾಣಕ್ಕೆ ಸಾಥ್ ನೀಡಿದ್ದಾರೆ. ಧ್ರುವ್ ಸಂಗೀತ ನೀಡಲಿದ್ದಾರೆ. ಇಂದು ಚಿತ್ರಕ್ಕೆ ಚಾಲನೆ ನೀಡಿದ ಗಣ್ಯರಿಗೆ ಧನ್ಯವಾದ. ಚಿತ್ರದ ಕುರಿತು ಹೆಚ್ಚಿನ ಮಾಹಿತಿಯನ್ನು ಮುಂದಿನ ದಿನಗಳಲ್ಲಿ ನೀಡುವುದಾಗಿ ಹೇಳಿದರು.

ಇದು ನಾನು ನಾಯಕನಾಗಿ ನಟಿಸುತ್ತಿರುವ ನಾಲ್ಕನೇ ಚಿತ್ರ. ಹಿಂದಿನ ಮೂರು ಚಿತ್ರಗಳೆ ಬೇರೆ ತರಹ. ಇದೇ ಬೇರೆ ತರಹ. ನಾನು ಹೇಗೆ ಇದ್ದಿನೊ ಅದೇ ತರಹ ಪಾತ್ರ ಎನ್ನಬಹುದು. ಚಿತ್ರಕ್ಕೆ ನಾನೇ ಕಥೆ ಬರೆದಿದ್ದೇನೆ. ಇದು ಹಳ್ಳಿಯಿಂದ ಸಿಟಿಗೆ ಬಂದ ಹುಡುಗನ ಕಥೆ ಅಲ್ಲ. ಹಳ್ಳಿಯನ್ನೇ ಸಿಟಿ ಮಾಡಲು ಹೊರಟ ಹುಡುಗನ ಕಥೆ. ಹರಿ ಸಂತೋಷ್ ಈ ಚಿತ್ರಕ್ಕೆ ಚಿತ್ರಕಥೆ ಬರೆದು ನಿರ್ದೇಶಿಸುತ್ತಿದ್ದಾರೆ ಎಂದರು ನಾಯಕ ವಿಕ್ಕಿ ವರುಣ್.

ಸಹ ನಿರ್ಮಾಪಕರಾದ ಪ್ರಶಾಂತ್ ಕಲ್ಲೂರ್, ಸಹ ನಿರ್ಮಾಪಕ ಹರೀಶ್ ರೆಡ್ಡಿ ಹಾಗೂ ಸಂಗೀತ ನಿರ್ದೇಶಕ ಧ್ರುವ್ "ಡಿಸ್ಕೊ" ಚಿತ್ರದ ಬಗ್ಗೆ ಮಾತನಾಡಿದರು.

**ಯುವ ಮನಸ್ಸುಗಳ ಕಂಗ್ರಾಜುಲೇಶನ್ ಬ್ರದರ್**

ನಿರ್ದೇಶಕ ಹರಿಸಂತು ಸಾರಥ್ಯದಲ್ಲಿ ಗಂಧರ್ವ ನಿರ್ದೇಶನದಲ್ಲಿ ಯುವ ಪ್ರತಿಭೆಗಳನ್ನಿಟ್ಟುಕೊಂಡು `congratulations ಬ್ರದರ್' ಚಿತ್ರ ಸೆಟ್ಟೇರಿದೆ.

ಇತ್ತೀಚೆಗೆ ಚಿತ್ರದ ಟೈಟಲ್ ಅನಾವರಣ ಕಾರ್ಯಕ್ರಮ ನಡೆಯಿತು.ಕೆ.ವಿ.ಎನ್ ಪ್ರೊಡಕ್ಷನ್ಸ್ ಮುಖ್ಯಸ್ಥರಾದ ವೆಂಕಟ್ ನಾರಾಯಣ್ ಹಾಗೂ ರವಿಕುಮಾರ್ ಪೋಸ್ಟರ್ ಅನಾವರಣ ಮಾಡುವ ಮೂಲಕ ನೂತನ ಚಿತ್ರಗಳಿಗೆ ಚಾಲನೆ ನೀಡಿದರು. ಡಿ.ಎಸ್ ಮ್ಯಾಕ್ಸ್ ನ ದಯಾನಂದ್ ಸೇರಿದಂತೆ ಹಲವು ಗಣ್ಯರು ಸಮಾರಂಭಕ್ಕೆ ಆಗಮಿಸಿ ಚಿತ್ರತಂಡಕ್ಕೆ ಶುಭ ಕೋರಿದರು.

ಎರಡು ವರ್ಷಗಳಿಂದ ನಾವು ಹನ್ನೆರಡು ಜನ ಸ್ನೇಹಿತರು ಸೇರಿ 'ಪೆನ್ ಎನ್ ಪೇಪರ್' ಸಂಸ್ಥೆ ಆರಂಭಿಸಿದ್ದೆವು. ಈ ಮೂಲಕ ಹಲವು ವೆಬ್ ಸಿರೀಸ್ ಗಳಿಗೆ ಹಾಗೂ ಕೆಲವು ಪ್ರೊಡಕ್ಷನ್ ಹೌಸ್ ಗಳಿಗೆ ಕಥೆ ಒದಗಿಸಿಕೊಟ್ಟಿದ್ದೇವೆ. ಈಗ ಇದೇ ತಂಡದಿಂದ ಮೊದಲ ಸಿನಿಮಾ ಮಾಡುತ್ತಿದ್ದೇವೆ. ಅದೇ ಶೀರ್ಷಿಕೆಯಿಂದಲೇ ಗಮನ ಸೆಳೆದಿರುವ `congratulations ಬ್ರದರ್'. ಈ ಚಿತ್ರದ ಕಥೆ ಬರೆಯಲು ಒಂದು ವರ್ಷವಾಯಿತು. ಮಾರ್ನಿಂಗ್ ಶೋ ಆಡಿಯನ್ಸ್ ನ ತಲೆಯಲ್ಲಿಟ್ಟಿಕೊಂಡು ಕಥೆ ಮಾಡಿದ್ದೇವೆ. ನನ್ನ ತಂಡದಲ್ಲಿರುವ ಪ್ರತಾಪ್ ಗಂಧರ್ವ ಈ ಚಿತ್ರವನ್ನು ನಿರ್ದೇಶನ ಮಾಡುತ್ತಿದ್ದಾರೆ. ರಕ್ಷಿತ್ ನಾಯಕನಾಗಿ ಅಭಿನಯಿಸುತ್ತಿದ್ದಾರೆ. ಪ್ರಶಾಂತ್ ಕಲ್ಲೂರ್ , ಹರೀಶ್ ರೆಡ್ಡಿ(ಸಹ ನಿರ್ಮಾಪಕ) ನಿರ್ಮಾಣಕ್ಕೆ ಜೊತೆಯಾಗಿದ್ದಾರೆ. ಸಂಜನಾ ಈ ಚಿತ್ರದ ನಾಯಕಿ. ಅನುಷಾ ಎಂಬ ಹೊಸ ಹುಡುಗಿಯನ್ನು ಈ ಚಿತ್ರದ ಮೂಲಕ ಪರಿಚಯಿಸುತ್ತಿದ್ದೇವೆ. ರೊಮ್ಯಾಂಟಿಕ್ ಜಾನರ್ ನ ಈ ಚಿತ್ರಕ್ಕೆ ನಾನೇ ಕಥೆ ಬರೆದಿದ್ದೇನೆ. ಪ್ರತಾಪ್, ರಕ್ಷಿತ್ ಮುಂತಾದವರು ಚಿತ್ರಕಥೆ ರಚಿಸಿದ್ದಾರೆ ಎಂದು ಕಥೆಗಾರ ಹಾಗೂ ಕ್ರಿಯೇಟಿವ್ ಹೆಡ್ ಹರಿ ಸಂತೋಷ್ ತಿಳಿಸಿದರು.

ಹಲವು ಧಾರಾವಾಹಿಗಳಿಗೆ ಕೆಲಸ ಮಾಡಿರುವ ನನಗೆ ನಿರ್ದೇಶಕನಾಗಿ ಇದು ಮೊದಲ ಚಿತ್ರ. ನಮ್ಮ ತಂಡದ ಅನೇಕರಿಗೆ ಇದು ಹೊಸ ಹೆಜ್ಜೆ. ಸಾಮಾನ್ಯವಾಗಿ ಹೊಸ ಹೆಜ್ಜೆ ಅಷ್ಟು ಸುಲಭವಾಗಿರುವುದಿಲ್ಲ. ಅದನ್ನು ನಮಗೆ ಹರಿ ಸಂತೋಷ್ ಸುಲಭ ಮಾಡಿಕೊಟ್ಟಿದ್ದಾರೆ. ಹರಿ ಸಂತೋಷ್ ಅವರು ಹೇಳಿದ ಹಾಗೆ ಈ ಚಿತ್ರದ ಕಥೆ, ಚಿತ್ರಕಥೆ ರಚನೆಗೆ ವರ್ಷದ ಸಮಯ ಹಿಡಿಸಿದೆ. ನಮ್ಮ ಕಥೆ ಪೇಪರ್ ನಲ್ಲಿ ಈಗಾಗಲೇ ಗೆದ್ದಿದೆ. ಪ್ರೇಕ್ಷಕರು ಗೆಲ್ಲಿಸುತ್ತಾರೆಂಬ ನಂಬಿಕೆ ಇದೆ. ನಾಳೆಯಿಂದಲೇ ಬೆಂಗಳೂರಿನಲ್ಲಿ ಚಿತ್ರೀಕರಣ ಆರಂಭವಾಗಲಿದೆ ಎಂದು ನಿರ್ದೇಶಕ ಪ್ರತಾಪ್ ಗಂಧರ್ವ ತಿಳಿಸಿದರು.

ಕಿರುತೆರೆ ಹಾಗೂ ನಾಟಕಗಳಲ್ಲಿ ನಟಿಸಿರುವ ನನಗೆ ಹಿರಿತೆರೆಯಲ್ಲಿ ನಾಯಕನಾಗಿ ಮೊದಲ ಚಿತ್ರ ಎಂದರು ನಾಯಕ ರಕ್ಷಿತ್ ನಾಗ್. ನಾಯಕಿ ಸಂಜನಾ, ನಟಿ ಅನೂಷ, ಸಂಗೀತ ನಿರ್ದೇಶಕ ಸೂರಜ್ ಜೋಯಿಸ್, ಛಾಯಾಗ್ರಾಹಕ ಗುರು, ಕಾರ್ಯಕಾರಿ ನಿರ್ಮಾಪಕ ಶ್ರೀಕಾಂತ್ ಮುಂತಾದವರು ಚಿತ್ರದ ಬಗ್ಗೆ ಮಾತನಾಡಿದರು. ನಿರ್ಮಾಪಕರಾದ ಪ್ರಶಾಂತ್ ಕಲ್ಲೂರ್ ಹಾಗೂ ಸಹ ನಿರ್ಮಾಪಕ ಹರೀಶ್ ರೆಡ್ಡಿ ಚಿತ್ರಕ್ಕೆ ಪ್ರೋತ್ಸಾಹ ನೀಡುವಂತೆ ಮನವಿ ಮಾಡಿದರು.



# ಹಣ್ಣಾಗಿರುವ ಮತ್ತು ಸಿಹಿಯಾಗಿರುವ ಅನಾನಸ್ ಹಣ್ಣನ್ನು ಗುರುತಿಸುವುದು ಹೇಗೆ?



ಮಾರುಕಟ್ಟೆಗೆ ಹೋಗಿ ಯಾವುದೇ ಹಣ್ಣನ್ನು ತರಬೇಕಾದರೆ, ಅದು ಸರಿಯಾಗಿ ಹಣ್ಣಾಗಿದೆಯಾ ಎಂದು ತಿಳಿಯುವುದು ಅತೀ ಅಗತ್ಯ. ಕೆಲವೊಮ್ಮೆ ಅಲ್ಲಿ ಆಯ್ಕೆ ಮಾಡಿದಂತಹ ಹಣ್ಣುಗಳು ಮನೆಗೆ ಬಂದ ಬಳಿಕ ತುಂಬಾ ಹುಳಿಯಾಗಿ, ಪಕ್ವವಾಗದೆ ಇರಬಹುದು. ಅದರಲ್ಲೂ ಅನಾನಸು ಹಣ್ಣು ಮಾಗಿದೆಯಾ ಎಂದು ತಿಳಿಯುವ ವಿಧಾನಗಳು ಇಲ್ಲಿವೆ.

ಹಣ್ಣುಗಳು ಹಲವಾರು ಪೋಷಕಾಂಶಗಳನ್ನು ಹೊಂದಿದ್ದು, ಇದು ದೇಹಾರೋಗ್ಯ ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸುವುದು. ಎಲ್ಲಾ ಹಣ್ಣುಗಳಲ್ಲಿ ಒಂದಲ್ಲಾ ಒಂದು ಬಗೆಯ ಪೋಷಕಾಂಶ ಇದ್ದೇ ಇರುವುದು. ಮುಖ್ಯವಾಗಿ ಕೆಲವು ಹಣ್ಣುಗಳು ಹಲವು ಬಗೆಯ ಪೋಷಕಾಂಶಗಳನ್ನು ಹೊಂದಿರುವುದು. ವರ್ಷದ ಎಲ್ಲಾ ಸಮಯದಲ್ಲಿ ಎಲ್ಲಾ ಬಗೆಯ ಹಣ್ಣುಗಳು ಸಿಗುವುದು ಎಂದು ಹೇಳಲು ಆಗದು. ಋತುಚಕ್ರಕ್ಕೆ ಅನುಗುಣವಾಗಿ ಕೆಲವು ಹಣ್ಣುಗಳು ಸಿಕ್ಕರೆ. ಇನ್ನುಳಿದವು ವರ್ಷ ಪೂರ್ತಿ ಸಿಗುವುದು.

ಇಂತಹ ಹಣ್ಣುಗಳಲ್ಲಿ ಅನಾನಸು ಕೂಡ ಸೇರುವುದು. ಆದರೆ ಮಾರುಕಟ್ಟೆಯಲ್ಲಿ ಅನಾನಸು ಖರೀದಿ ಮಾಡಲು ಹೋಗುವ ವೇಳೆ ತುಂಬಾ ಎಚ್ಚರಿಕೆ ವಹಿಸಬೇಕು. ಯಾಕೆಂದರೆ ಕೆಲವೊಮ್ಮೆ ಇದು ತುಂಬಾ ಹುಳಿಯಾಗಿರುದು. ಇದಕ್ಕೆ ಕಾರಣ ಅದು ಸರಿಯಾಗಿ ಹಣ್ಣಾಗದೆ ಇರುವುದು. ಇದಕ್ಕಾಗಿ ಸೂಕ್ತ ರೀತಿಯಿಂದ ಹಣ್ಣಾಗಿರುವ ಅನಾನಸನ್ನು ಆಯ್ಕೆ ಮಾಡುವುದು ಹೇಗೆ ಎಂದು ತಿಳಿದುಕೊಳ್ಳುವುದು ಅತೀ ಅಗತ್ಯ. ಇದಕ್ಕಾಗಿ ಈ ಲೇಖನವನ್ನು ಓದಲೇಬೇಕು. ಅನಾನಸಿನಲ್ಲಿ ಉತ್ತಮ ಪ್ರಮಾಣದ ವಿಟಮಿನ್ ಸಿ ಅಂಶವು ಉತ್ತಮ ಪ್ರಮಾಣದಲ್ಲಿದ್ದು, ಉರಿಯೂತ ಶಮನಕಾರಿ ಗುಣ ಕೂಡ ಹೊಂದಿದೆ. ಹಾಗಾದರೆ ಇನ್ನು ತಡಮಾಡದೆ ಬಲಿತಿರುವ ಮತ್ತು ಸಿಹಿಯಾಗಿರುವ ಅನಾನಸು ಆಯ್ಕೆ ಮಾಡೋಣ.

**ಬಣ್ಣವನ್ನು ಗಮನಿಸಿ**

ಅನಾನಸಿನ ಬಣ್ಣವನ್ನು ನೋಡಿದರೆ, ಆಗ ಅದು ಮಾಗಿದೆಯಾ ಅಥವಾ ಇನ್ನೂ ಹಣ್ಣಾಗಿಲ್ಲವಾ ಎಂದು ತಿಳಿಯಬಹುದು. ಅನಾನಸು ತಾಜಾ ಮತ್ತು ಹಣ್ಣಾದರೆ, ಆಗ ಅದರ ಬಣ್ಣವು ಹೊರಗಿನಿಂದ ಬಂಗಾರದಂತೆ ಕಾಣುವುದು. ಹಸಿರು ತುಂಬಾ ಕಡಿಮೆ ಇರುವುದು. ಕೆಲವು ಹಸಿರು ಎಲೆಗಳು ಕೂಡ ಇದರಲ್ಲಿ ಇರಬಹುದು. ಆದರೆ ಹೆಚ್ಚು ಹಸಿರು ಎಲೆಗಳು ಇರುವುದನ್ನು ಖರೀದಿ ಮಾಡಬೇಡಿ.

ಹಿಸುಕಿ ನೋಡಿದರೆ, ಆಗ ಅದು ಸಂಪೂರ್ಣವಾಗಿ ಹಣ್ಣಾಗಿದೆಯಾ ಇಲ್ಲಾ ಎನ್ನುವುದು ತಿಳಿದುಬರುವುದು. ಸಂಪೂರ್ಣವಾಗಿ ಹಣ್ಣಾಗಿರುವ ಅನಾನಸು ಗಡುಸಾದ ಹೊರಪದರ ಹೊಂದಿರುವುದು ಮತ್ತು ಹಿಸುಕಿದಾಗ ಮೆತ್ತಗೆ ಇರುವುದು. ಹಿಸುಕಿದಾಗ ತುಂಬಾ ಗಟ್ಟಿಯಾಗಿದ್ದರೆ, ಆಗ ಅದು ಹಣ್ಣಾಗಿಲ್ಲ ಎಂದು ತಿಳಿಯಿರಿ.

**ಅನಾನಸಿನ ಸುವಾಸನೆ ನೋಡಿ**

ಅನಾನಸು ಹಣ್ಣಾಗಿದೆಯಾ ಎಂದು ನೋಡಲು ಇನ್ನೊಂದು ವಿಧಾನ ವೆಂದರೆ, ಅದರ ಸುವಾಸನೆಯು ಹೊರಗೆ ಬರುತ್ತಿರುವುದು. ಹಣ್ಣಾಗಿರುವ ಅನಾನಸು ಅದರ ಮೂಲದಲ್ಲಿ ತುಂಬಾ ಒಳ್ಳೆಯ ಸುವಾಸನೆ ಬೀರುತ್ತಿರು ವುದು. ಕಹಿ ಅಥವಾ ಬೇರೆ ಸುವಾಸನೆ ಬರುತ್ತಲಿದ್ದರೆ, ಆಗ ಅನಾನಸು ಹಣ್ಣಾಗಿಲ್ಲವೆಂದು ತಿಳಿಯಿರಿ.

**ಅನಾನಸಿನ ಸುವಾಸನೆ ನೋಡಿ**

ಅನಾನಸು ಹಣ್ಣಾಗಿದೆಯಾ ಎಂದು ನೋಡಲು ಇನ್ನೊಂದು ವಿಧಾನ ವೆಂದರೆ, ಅದರ ಸುವಾಸನೆಯು ಹೊರಗೆ ಬರುತ್ತಿರುವುದು. ಹಣ್ಣಾಗಿರುವ ಅನಾನಸು ಅದರ ಮೂಲದಲ್ಲಿ ತುಂಬಾ ಒಳ್ಳೆಯ ಸುವಾಸನೆ ಬೀರುತ್ತಿರುವುದು. ಕಹಿ ಅಥವಾ ಬೇರೆ ಸುವಾಸನೆ ಬರುತ್ತಲಿದ್ದರೆ, ಆಗ ಅನಾನಸು ಹಣ್ಣಾಗಿಲ್ಲವೆಂದು ತಿಳಿಯಿರಿ.

**ತೂಕ ಗಮನಿಸಿ**





ಅನಾನಸಿನ ತೂಕವನ್ನು ಗಮನಿಸುವ ಮೂಲಕವೂ ಅದು ಹಣ್ಣಾಗಿದೆಯಾ ಅಥವಾ ಇಲ್ಲವಾ ಎನ್ನುವುದನ್ನು ತಿಳಿಯಬಹುದು. ಒಂದೇ ಗಾತ್ರದ ಎರಡು ಅನಾನಸುಗಳನ್ನು ಹಿಡಿದುಕೊಂಡು ಅದು ಒಂದೇ ರೀತಿಯ ತೂಕ ಹೊಂದಿದೆಯಾ ಎಂದು ತಿಳಿಯಿರಿ. ಭಾರ ಇರುವುದು ಹಣ್ಣಾಗಿರುವುದು ಮತ್ತು ಹೆಚ್ಚು ರಸವನ್ನು ಹೊಂದಿರುವುದು.

**ಎಲೆಯನ್ನು ತೆಗೆಯಿರಿ**

ಅನಾನಸಿನ ಒಂದು ಎಲೆಯನ್ನು ತೆಗೆದು ನೋಡಿ. ಯಾವುದೇ ಶ್ರಮವಿಲ್ಲದೆ ಎಲೆ ಬಂದರೆ ಆಗ ಇದು ಹಣ್ಣಾಗಿರುವ ಲಕ್ಷಣವಾಗಿದೆ. ಎಲೆಯನ್ನು ತೆಗೆಯಲು ಕಷ್ಟವಾಗುತ್ತಲಿದ್ದರೆ, ಆಗ ಅದು ಸಂಪೂರ್ಣವಾಗಿ ಹಣ್ಣಾಗಲು ಇನ್ನೂ ಸಮಯ ಬೇಕಾಗಿದೆ ಎಂದು ತಿಳಿಯಿರಿ.

**ಅನಾನಸನ್ನು ಕತ್ತರಿಸುವುದು ಹೇಗೆ?**

ಅನಾನಸನ್ನು ಕತ್ತರಿಸುವುದು ತುಂಬಾ ಕಠಿಣ ಕೆಲಸ. ಆದರೆ ಸುಲಭ ವಿಧಾನದಿಂದ ಇದನ್ನು ಕತ್ತರಿಸಬಹುದು. ಇದನ್ನು ನೇರವಾಗಿ ಅಥವಾ ಅಡ್ಡವಾಗಿ ಸಿಪ್ಪೆ ತೆಗೆಯುವ ಬದಲು. ಕರ್ಣೀಯ ಸುರುಳಿಯಾಕಾರದಲ್ಲಿ ಸಿಪ್ಪೆ ತೆಗೆಯಬೇಕು. ನಯವಾದ ಮೇಲ್ಮೈಯಲ್ಲಿ ಇರುವಾಗ ಅನಾನಸಿನ ಮೇಲಿನ ಮತ್ತು ಕೆಳಗಿನ ಭಾಗವನ್ನು ಮೊದಲಿಗೆ ಕತ್ತರಿಸಿಕೊಳ್ಳಬೇಕು. ಇದರ ಬಳಿಕ ಉದ್ದವಾಗಿ ಅದನ್ನು ಸರಿಪಡಿಸಿ ಮತ್ತು ಹೆಚ್ಚಿನ ಸಿಪ್ಪೆ ತೆಗೆಯಬೇಕು.

**ಅನಾನಸನ್ನು ಯಾವ ರೀತಿ ಶೇಖರಣೆ ಮಾಡಬಹುದು?**

ಅನಾನಸು ಹಣ್ಣಾಗಿದ್ದರೆ ಆಗ ಇದನ್ನು ಫ್ರಿಡ್ಜ್ ನಲ್ಲಿ ಇಡಬಹುದು. ಒಂದು ಪ್ಲಾಸ್ಟಿಕ್ ಬ್ಯಾಗ್ ನ್ನು ಸುತ್ತಿಕೊಂಡು ಅದನ್ನು ಇಟ್ಟುಬಿಡಿ. ಇದರಿಂದ ಎರಡರಿಂದ ಮೂರು ದಿನಗಳ ಕಾಲ ಅದು ತಾಜಾವಾಗಿರುವುದು. ಅನಾನಸು ಹಣ್ಣಾಗದೆ ಇದ್ದರೆ ಆಗ ಇದನ್ನು ತಂಪಾದ ಜಾಗದಲ್ಲಿ ಇಟ್ಟುಬಿಡಿ. ಬಿಸಿಲಿನಿಂದ ಇದನ್ನು ದೂರವಿಡಿ. ಕತ್ತರಿಸಿರುವ ಅನಾನಸನ್ನು ಗಾಳಿಯಾಡದೆ ಇರುವ ಡಬ್ಬದಲ್ಲಿ ಹಾಕಿಟ್ಟುಕೊಂಡು ಫ್ರಿಡ್ಜ್ ನಲ್ಲಿ ಇಡಬೇಕು.

# ನಿಮ್ಮ ಕೂದಲು ಸೊಂಪಾಗಿ ಬೆಳೆಯಬೇಕಾ? ಈ ಪುಟ್ಟ ಬೀಜ ಸೇವಿಸಿ ನೋಡಿ

ಕೂದಲ ಆರೈಕೆಗೆ ಎಷ್ಟೇ ಪ್ರಾಮುಖ್ಯತೆ ನೀಡಿದರೂ ಸಾಕಾಗುವುದಿಲ್ಲ, ಕೆಲವೊಮ್ಮೆ ವಿಪರೀತ ಕೂದಲು ಉದುರುತ್ತದೆ ಹಾಗೇ ಇದು ನಮ್ಮನ್ನು ಚಿಂತಿಗೀಡಾಗಿಸುತ್ತದೆ. ನಾವು ಸೇವಿಸುವ ಆಹಾರವೂ ನಮ್ಮ ಕೂದಲ ಬೆಳವಣಿಗೆಯ ಮೇಲೆ ಪರಿಣಾಮ ಬೀರುತ್ತದೆ. ಆದ್ದರಿಂದ ನಮ್ಮ ದಿನನಿತ್ಯದ ಆಹಾರದಲ್ಲಿ ಏನನ್ನು ಸೇರಿಸಬೇಕು ಎಂಬುದು ನಮಗೆ ತಿಳಿದಿರಬೇಕು.

ನಮ್ಮ ಚರ್ಮ ಮತ್ತು ಕೂದಲಿನ ಆರೈಕೆಗೆ ನಮ್ಮ ಆಹಾರದಲ್ಲಿ ಯಾವುದನ್ನು ಸೇರಿಸಿದರೆ ಉತ್ತಮ ಎಂಬುದರ ಕನಿಷ್ಠ ಜ್ಞಾನ ನಮಲ್ಲಿದ್ದರೆ ಅನೇಕ ಆರೋಗ್ಯ ಸಮಸ್ಯೆಗಳಿಂದ ದೂರವಿರಬಹುದು.ಇನ್ನು ಚಿಯಾ ಬೀಜಗಳು ಕೂದಲ ಬೆಳವಣಿಗೆಯ ಮೇಲೆ ತುಂಬಾ ಪ್ರಯೋಜನಕಾರಿಯಾಗಿದೆ.ಇದನ್ನು ಹೇಗೆ ಸೇವಿಸಬೇಕು ಏನೆಲ್ಲಾ ಲಾಭವಿದೆ ಎಂಬುದರ ಬಗ್ಗೆ ಇಲ್ಲಿದೆ ಮಾಹಿತಿ.

ಪ್ರತಿದಿನ ಚಿಯಾ ಬೀಜ ಸೇರಿಸಿದ ನೀರನ್ನು ಕುಡಿಯುವುದರಿಂದ ಕೂದಲು ಉದುರುವ ಸಮಸ್ಯೆ ತಡೆಯಬಹುದಂತೆ. ಮ್ಯಾಕ್ಸಿಲೋಫೇಷಿಯಲ್ ಸ್ಪೆಷಲಿಸ್ಟ್ ಡಾ.ಕೃತಿಕಾ ಮೋಹನ್ ತಮ್ಮ ಇನ್ಸ್ಟಾಗ್ರಾಮ್ ನಲ್ಲಿ ಚಿಯಾ ಬೀಜ ಸೇವನೆಯಿಂದ ಆರೋಗ್ಯಕರ ಕೂದಲು ಪಡೆಯಬಹುದು ಎಂದು ತಿಳಿಸಿದ್ದಾರೆ. ನಾನು ನನ್ನ ದಿನಚರಿಯಲ್ಲಿ ಚಿಂ–ಯಾ ಬೀಜಗಳನ್ನು ಸೇರಿಸಿದೆ. ಇದು ನನ್ನ ಕೂದಲು ಉದುರುವಿಕೆಯನ್ನು ಕಡಿಮೆ ಮಾಡಲು ಮತ್ತು ಕೂದಲ ಬೆಳವಣಿಗೆಯನ್ನು ಹೆಚ್ಚಿಸಲು ಸಹಾಯ ಮಾಡಿವೆ ಎಂದು ಹೇಳಿಕೊಂಡಿದ್ದಾರೆ.

**ಚಿಯಾ ಬೀಜದ ಪೋಷಕಾಂಶಗಳು**

ಒಮೆಗಾ –3 ಕೊಬ್ಬಿನಾಮ್ಲಗಳು: ನೆತ್ತಿಯ ಉರಿಯೂತವನ್ನು ಕಡಿಮೆ ಮಾಡುತ್ತದೆ ಮತ್ತು ಆರ್ದ್ರತೆಯನ್ನು ಸುಧಾರಿಸುತ್ತದೆ, ಆರೋಗ್ಯಕರ ನೆತ್ತಿಯ ವಾತಾವರಣವನ್ನು ಉತ್ತೇಜಿಸುತ್ತದೆ.

ಪ್ರೋಟೀನ್: ಕೂದಲಿನ ಎಳೆಗಳನ್ನು ಬಲಪಡಿಸುತ್ತದೆ ಮತ್ತು ಒಡೆಯುವುದನ್ನು ತಡೆಯುತ್ತದೆ.

ಸತು: ಹಾನಿಗೊಳಗಾದ ಕೂದಲಿನ ಕಿರುಚೀಲಗಳನ್ನು ಸರಿಪಡಿಸುತ್ತದೆ ಮತ್ತು ಆರೋಗ್ಯಕರ ತೈಲ ಉತ್ಪಾದನೆಗೆ ಸಹಕಾರಿ.?





ಕಬ್ಬಿಣ: ನೆತ್ತಿಯ ರಕ್ತ ಪರಿಚಲನೆಯನ್ನು ಹೆಚ್ಚಿಸುತ್ತದೆ, ಕೂದಲಿನ ಬೇರುಗಳಿಗೆ ಪೋಷಕಾಂಶಗಳನ್ನು ತಲುಪಿಸುತ್ತದೆ.

**ಚಿಯಾ ಬೀಜದ ಪ್ರಯೋಜನ**

ಚಿಯಾ ಬೀಜಗಳು ಒಮೆಗಾ –3 ಕೊಬ್ಬಿನಾಮ್ಲಗಳಿಂದ ತುಂಬಿರುತ್ತವೆ, ಇದು ನೆತ್ತಿಯಲ್ಲಿ ಉರಿಯೂತವನ್ನು ಪರಿಹರಿಸಲು ಸಹಾಯ ಮಾಡುತ್ತದೆ ಮತ್ತು ಕೂದಲು ಉದುರುವ ಸಮಸ್ಯೆಗಳನ್ನು ನಿರ್ವಹಿಸುತ್ತದೆ ಎಂದು ಡಾ.ಕೃತಿಕಾ ವಿವರಿಸಿದ್ದಾರೆ.

ಚಿಯಾ ಬೀಜಗಳನ್ನು ತೆಗೆದುಕೊಳ್ಳಲು ಉತ್ತಮ ಸಮಯವೆಂದರೆ ಬೆಳಿಗ್ಗೆ ಅವುಗಳನ್ನು ನಿಮ್ಮ ಸ್ಮೂಥಿ, ಮೊಸರು, ಓಟ್ ಮೀಲ್ ಅಥವಾ ಸಾದಾ ನೀರಿನಲ್ಲಿ ಬೆರೆಸಿ ಸೇವಿಸಬಹುದು.


ರಾತ್ರಿಯಿಡೀ ನೆನೆಸಿಟ್ಟ ಬೀಜಗಳನ್ನು ಬೆಳಗ್ಗಿನ ನಿಮ್ಮ ಆಹಾರದಲ್ಲಿ ಸೇರಿಸಿಕೊಳ್ಳಬಹುದು. ಕೇವಲ ಚಿಂ–ಯಾ ಬೀಜಗಳನ್ನು ಸೇರಿಸುವುದರಿಂದ ಕೂದಲು ಉದುರುವಿಕೆ ಸಮಸ್ಯೆ ಪರಿಹಾರವಾಗುವುದಿಲ್ಲ. ಕೂದಲು ಉದುರುವಿಕೆಗೆ ನಿಜವಾದ ಕಾರಣ ಏನೆಂಬುದನ್ನು ಕಂಡುಹಿಡಿಯುವುದು ಮುಖ್ಯ ಎಂದು ತಿಳಿಸಿದ್ದಾರೆ.

**ಕೂದಲಿನ ಬೆಳವಣಿಗೆಗೆ ಚಿಯಾ ಹೇಗೆ ಸಹಾಯಕಾರಿ?**

ಚಿಯಾ ಬೀಜಗಳನ್ನು ನಿಮ್ಮ ಆಹಾರದಲ್ಲಿ ಸೇರಿಸಿ, ಒಮೆಗಾ –3 ಕೊಬ್ಬಿನಾಮ್ಲಗಳು, ಪ್ರೋಟೀನ್ ಮತ್ತು ಸತು ಮತ್ತು ಕಬ್ಬಿಣದಂತಹ ಅಗತ್ಯ ಖನಿಜಗಳಿಂದ ತುಂಬಿರುವ ಚಿಯಾ ಬೀಜಗಳು ಆರೋಗ್ಯಕರ ಕೂದಲಿಗೆ ಸಹಕಾರಿ ಎಂದು ಮುಂಬೈ ಸೆಂಟ್ರಲ್ ನ ವೊಕ್ಹಾರ್ಟ್ ಆಸ್ಪತ್ರೆಯ ಸೌಂದರ್ಯ, ಪ್ಲಾಸ್ಟಿಕ್ ಸರ್ಜನ್ ಡಾ.ಶ್ರದ್ಧಾ ದೇಶಪಾಂಡೆ ತಿಳಿಸಿದ್ದಾರೆ.

**ದೈನಂದಿನ ಆಹಾರದಲ್ಲಿ ಚಿಯಾ ಬೀಜಗಳನ್ನು ಸೇರಿಸುವುದು ಹೇಗೆ?**

ಚಿಯಾ ಬೀಜಗಳನ್ನು ಸ್ಮೂಥಿಗಳಲ್ಲಿ ಬೆರೆಸಿ, ಮೊಸರಿನ ಮೇಲೆ ಸಿಂಪಡಿಸಿ, ರಾತ್ರಿಯಿಡೀ ನೆನೆಸಿಟ್ಟು ಪೌಷ್ಟಿಕ ಚಿಂ–ಯಾ ಪುಡ್ಡಿಂಗ್ ತಯಾರಿಸಿ, ಅಥವಾ ನೀವು ಸೇವಿಸುವ ಸಲಾಡ್ ನಲ್ಲಿ ಮಿಶ್ರಣ ಮಾಡಿ. ಇದು ದೇಹವನ್ನು ತಂಪು ಮಾಡುತ್ತದೆ ಮತ್ತು ಬೇಸಿಗೆ ಕಾಲದಲ್ಲಿ ಅತ್ಯುತ್ತಮ ಪಾನೀಯ. ಇದು ನಿಮ್ಮ ಚರ್ಮದಲ್ಲಿ ತೇವಾಂಶವನ್ನು ಕಾಪಾಡುತ್ತದೆ. ನಿಯಮಿತ ಸೇವನೆಯು ಕೂದಲು ಉದುರುವಿಕೆಯನ್ನು ಕಡಿಮೆ ಮಾಡುವುದು ಮಾತ್ರವಲ್ಲದೆ ಕೂದಲಿಗೆ ಹೊಳಪು ನೀಡುತ್ತದೆ. ಈ ಸರಳ ಮತ್ತು ಪರಿಣಾಮಕಾರಿ ಆಹಾರ ಬದಲಾವಣೆಯೊಂದಿಗೆ ಆರೋಗ್ಯಕರ ಕೂದಲನ್ನು ಪಡೆಯಿರಿ ಎಂದು ಡಾ.ಶ್ರದ್ಧಾ ದೇಶಪಾಂಡೆ ತಿಳಿಸಿದ್ದಾರೆ.



# ಪಿತ್ತದ ಗಂಧಿಗೆ ಮನೆಮದ್ದು

1. ದೊಡ್ಡಪತ್ರೆ ಗಿಡದ ಎಲೆಯ ರಸವನ್ನು ಸೇವಿಸಿ, ಹಾಗೂ ಎಲೆಯ ಕಲ್ಕವನ್ನು ಗಂಧೆಯ ಮೇಲೆ ಲೇಪಿಸಿ. ಇದರಿಂದ ಗಂಧೆ ಹಾಗೂ ಅದರಿಂದ ಉಂಟಾಗುವ ನವೆ ಎರಡೂ ಕಡಿಮೆ ಆಗುತ್ತದೆ.

2. ಕಡಲೆಕಾಯಿ ಜಾಸ್ತಿ ತಿಂದಾಗ ಅಥವಾ ಪಿತ್ತದ ಅಂಶ ಶರೀರದಲ್ಲಿ ಜಾಸ್ತಿ ಆದಾಗ ಏಳುವ ಕೆಂಪು ಗಂಧೆಗಳಿಗೆ ಹಾಗಲಕಾಯಿ ಎಲೆಯ ರಸವನ್ನು ಲೇಪಿಸುವುದರಿಂದ ಬೇಗ ಗುಣಮುಖವಾಗುತ್ತದೆ.ಅದೇ ಸಮಯದಲ್ಲಿ ರಸವನ್ನು ಹೊಟ್ಟೆಗೂ ಸೇವಿಸುವುದರಿಂದ ಶೀಘ್ರವಾಗಿ ಗುಣಮುಖರಾಗಬಹುದು.

3. ಬಿಲ್ವಪತ್ರೆಯ ರಸವನ್ನು ಜೇನ್ನುತುಪ್ಪ ಸೇರಿಸಿ ಸೇವಿಸಿ. ದಿನಕ್ಕೆ 2 ಬಾರಿ (3 ದಿನಗಳು).

4.ಕಬ್ಬಿನಗಿಡದ ಬೇರನ್ನು ಸುಟ್ಟುಭಸ್ಮಮಾಡಿ ಆ ಬೂದಿಯನ್ನು ಜರಡಿ ಹಿಡಿದು ನುಣುಪಾದ ಪುಡಿ ಮಾಡಿಟ್ಟುಕೊಂಡು ಇದನ್ನು ಕೊಬ್ಬರಿ ಎಣ್ಣೆಯಲ್ಲಿ ಕಲಸಿ ಪಿತ್ತದ ಗಂಧೆಗಳ ಮೇಲೆ ಲೇಪನವನ್ನು ಮಾಡಿ.

5. ಗರಿಕೆಯ ರಸವನ್ನು ನೊರೆ ಹಾಲಿನೊಡನೆ ಖಾಲಿಹೊಟ್ಟೆಯಲ್ಲಿ ನೆಕ್ಕಿದರೆ ಪಿತ್ತದ ಗಂಧೆ ಕಡಿಮೆಯಾಗುತ್ತದೆ.

6. ಗುಲಾಬಿ ಹೂವಿನ ರೇಕುಗಳನ್ನು ನುಣ್ಣಗೆ ರುಬ್ಬಿಕೊಂಡು ಇದನ್ನು ಪಿತ್ತದ ಗಂಧೆಗಳ ಮೇಲೆ ಲೇಪಿಸುವುದರಿಂದ ಗುಣವಾಗುತ್ತದೆ.

7. ಸಾಸಿವೆ ಎಣ್ಣೆ ಹಾಗೂ ಬೇವಿನ ಎಣ್ಣೆಯನ್ನು ಮಿಶ್ರ ಮಾಡಿ ಹಗುರವಾಗಿ ಮಾಲೀಷ್ ಮಾಡುವುದರಿಂದ ಪಿತ್ತದ ಗಂಧೆ ಕ್ರಮೇಣ ಗುಣವಾಗುತ್ತದೆ.






8. ಹಸಿ ಶುಂಠಿರಸ 2 ಚಮಚ, ನಿಂಬೆರಸ 2 ಚಮಚ ,1 ಚಮಚ ಜೇನುತುಪ್ಪಮೂರುನ್ನು ಮಿಶ್ರ ಮಾಡಿಟ್ಟುಕೊಂಡು 2 ಗಂಟೆಗೊಮ್ಮೆ 1 ಚಮಚದಂತೆ ಕೆಲವು ಬಾರಿ ಸೇವಿಸುವುದರಿಂದ ಪಿತ್ತದ ಗಂಧೆ ಕ್ರಮೇಣ ಕಡಿಮೆಯಾಗುತ್ತದೆ.

9.ಅರಳೀ ಎಲೆಯನ್ನು ಸುಟ್ಟುಭಸ್ಮಮಾಡಿ ಆ ಭಸ್ಮವನ್ನು ಬೇವಿನ ಎಣ್ಣೆ ಅಥವಾ ಕೊಬ್ಬರಿಎಣ್ಣೆಯಲ್ಲಿಕಲಸಿ ಹಚ್ಚುವುದರಿಂದ ಪಿತ್ತದ ಗಂಧೆ ಗುಣವಾಗುತ್ತದೆ.

# ಆದಾಯ ತೆರಿಗೆ ಇಲಾಖೆ ಉಪ ಆಯುಕ್ತ ಲಖನ ಹಣಮನ್ನವರ ಸನ್ಮಾನ



ಘಟಪ್ರಭಾ: 24 ರಂದು "ಕನ್ನಡ ರಕ್ಷಣಾ ವೇದಿಕೆ" ಸಂಘಟನೆ ವತಿಯಿಂದ, ಜಾಗನೂರು ಗ್ರಾಮದ ಲಖನ ಉ ಹಣಮನ್ನವರ, ಇವರು ಮೈಸೂರಿನಲ್ಲಿ ಐ ಆರ್ ಎಸ್ ಸೇವೆ ಸಲ್ಲಿಸಿ, ಈಗ ಬೆಂಗಳೂರು ಆದಾಯ ತೆರಿಗೆ ಇಲಾಖೆ ಉಪ ಆಯುಕ್ತರಾಗಿ ವರ್ಗಾವಣೆಗೊಂಡು ಸೇವೆ ಸಲ್ಲಿಸುತ್ತಿರುವ ಇವರನ್ನು ಸತ್ಕರಿಸಿ ಸನ್ಮಾನಿಸಲಾಯಿತು, ಈ ಸಂದರ್ಭದಲ್ಲಿ ಕನ್ನಡ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷರಾದ ಡಾ. ಕೆಂಪಣ್ಣ ಚೌಕಶಿ, ಕನ್ನಡ ರಕ್ಷಣಾ ವೇದಿಕೆ ಜಿಲ್ಲಾ ಉಪಾಧ್ಯಕ್ಷರಾದ ಮಾರುತಿ ಚೌಕಶಿ, ಕನ್ನಡ ರಕ್ಷಣಾ ವೇದಿಕೆ ಜಿಲ್ಲಾ ಯುವ ಘಟಕದ ಅಧ್ಯಕ್ಷರಾದ ಶಶಿಧರ್ ಚೌಕಶಿ, ಸಂಘಟನೆ ಮುಖಂಡರುಗಳಾದ ಸಿದ್ರಾಮ ಚೌಕಶಿ, ಸದಾಶಿವ ಪರಿಟ್, ಮಲ್ಲಪ್ಪ ಅಟ್ಟಿಮಿಟ್ಟಿ ,ಲಕ್ಷ್ಮಣ ಮುಸುಗುಪ್ಪಿ, ಶಾಂಬಪ್ಪ ಮಸುಗುಪ್ಪಿ ,ರಾಯಪ್ಪ ಹನುಮಣ್ಣವರ, ಯಲ್ಲಾಲಿಂಗ ಚೌಕಶಿ,ಬೀಮಶಿ ಚೌಕಶಿ, ಹಾಗೂ ಕಾರ್ಯಕರ್ತರು ಹಾಜರಿದ್ದರು,

# ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಜಯಬೇರಿ ; ವಿಜಯೋತ್ಸವ



ತಾಳಿಕೋಟೆ, ರಾಜ್ಯದ ಶಿಗಾಂವಿ, ಚನ್ನಪಟ್ಟಣ, ಸೊಂಡೂರ ಈ ಮೂರು ವಿಧಾನಸಭಾ ಕ್ಷೇತ್ರಗಳ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳೇ ಜಯಬೇರಿ ಭಾರಿಸಿದ್ದರಿಂದ ಪಟ್ಟಣದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪಟಾಕ್ಷೀ ಸಿಡಿಸಿ ವಿಜಯೋತ್ಸವ ಆಚರಿಸಿದರು.

ಮೂರು ಕ್ಷೇತ್ರಗಳ ಫಲಿತಾಂಶ ಹೊರಬಿಳ್ಳುತ್ತಿದ್ದಂತೆ ಪಟ್ಟಣದ ಶ್ರೀ ಬಸವೇಶ್ವರ ಸರ್ಕಲ್‌ನಲ್ಲಿ ಜಮಾವಣೆಗೊಂಡ ಕಾಂಗ್ರೆಸ್ ಕಾರ್ಯಕರ್ತರು ಪಟಾಕ್ಷೀಗಳನ್ನು ಸಿಡಿಸಿದರಲ್ಲದೇ ಸಿಹಿ ಹಂಚಿ ಸಂಭ್ರಮಿಸಿದರು.


ಈ ಸಮಯದಲ್ಲಿ ಪುರಸಭಾ ಮಾಜಿ ಸದಸ್ಯ ಕಾಂಗ್ರೆಸ್ ಮುಖಂಡ ಇಬ್ರಾಹಿಂ ಮನ್ಸೂರ ಅವರು ಮಾತನಾಡಿ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರ್ಕಾರವು ಕಳೆದ 18 ತಿಂಗಳಲ್ಲಿ ಕೈಗೊಂಡ ಅಭಿವೃದ್ದಿ ಕಾರ್ಯಗಳನ್ನು ಮೆಚ್ಚಿ ರಾಜ್ಯದ ಮೂರು ಕ್ಷೇತ್ರಗಳ ಮತದಾರರು ಕಾಂಗ್ರೆಸ್ ಅಭ್ಯರ್ಥಿಗಳನ್ನು ಗೆಲ್ಲಿಸಿದ್ದಾರೆ ಸಿದ್ದರಾಮಯ್ಯನವರು ಚುನಾವಣೆಯಲ್ಲಿ ಕೊಟ್ಟ ಬರವಸೆಯಂತೆ ಪಂಚ ಗ್ಯಾರೆಂಟಿ ಯೋಜನೆಗಳು ಜನರಿಗೆ ಸಮರ್ಪಕವಾಗಿ ಮುಟ್ಟಿವೆ ಎಂಬುದು ಇದೇ ಫಲಿತಾಂಶ ಸಾಕ್ಷೀಯಾಗಿದೆ ಆಯ್ಕೆಗೊಂಡ ಅಭ್ಯರ್ಥಿಗಳಿಗೆ ಮತ್ತು ಮತದಾರರಿಗೆ ಅಭಿನಂದಿಸುತ್ತೇನೆಂದರು.

ಈ ಸಮಯದಲ್ಲಿ ಅಖೀಲ ಭಾರತ ಮಜ್ದೂರು ಕಾಂಗ್ರೆಸ್ ತಾಲೂಕಾ ಅಧ್ಯಕ್ಷ ಸಂಗನಗೌಡ ಅಸ್ಕಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹಿಬೂಬ ಚೋರಗಸ್ತಿ, ಪುರಸಭಾ ಸದಸ್ಯ ಮಲ್ಲಿಕಾರ್ಜುನ ಪಟ್ಟಣಶೆಟ್ಟಿ, ಸಿದ್ದನಗೌಡ ಪಾಟೀಲ(ನಾವದಗಿ), ಅನೀಲ ಕಲಾಲ, ಲತೀಪ ಬೀಳಗಿ, ಸಂಗಮೇಶ ದೇಸಾಯಿ, ಜುಮ್ಮಣ್ಣ ನಾಲತವಾಡ, ಮಹಿಬೂಬ ಕೆಂಭಾವಿ, ಸದ್ದಾಮ್ ಹೊನ್ನಳ್ಳಿ, ಆಸೀಫ ಕೆಂಭಾವಿ, ಗೋಪಾಲ ಕಟ್ಟಿಮನಿ, ಖಾಜಾಪಟೇಲ, ಖಲೀಲ ಜಮಾದಾರ, ಮೊದಲಾದವರು ಪಾಲ್ಗೊಂಡಿದ್ದರು.

****

## ಜಿಲ್ಲೆಯಾದ್ಯಂತ ತೆರಿಗೆ ವಸೂಲಾತಿ ಅಭಿಯಾನ: ಸಿಇಓ ಕುರೇರ ಚಾಲನೆ

# ಒಂದೇ ದಿನದಲ್ಲಿ ೨.೧೨ ಕೋಟಿ ರೂ.ಗಳ ಕರ ವಸೂಲಾತಿ



ಬಾಗಲಕೋಟೆ: : ಜಿಲ್ಲೆಯಾದ್ಯಂತ ಎಲ್ಲ ತಾಲೂಕಾ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯತಿಗಳಲ್ಲಿ ಸೋಮವಾರ ಹಮ್ಮಿಕೊಂಡ ತೆ–ರಿಗೆ ವಸೂಲಾತಿ ಅಭಿಯಾನ ಕಾರ್ಯಕ್ರಮದಲ್ಲಿ ಒಟ್ಟು 2.12 ಕೋಟಿ ರೂ.ಗಳ ಕರ ಸಂಗ್ರಹವಾಗಿದೆ ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ತಿಳಿಸಿದರು.

ಬಾಗಲಕೋಟೆ ತಾಲೂಕಿನ ಮಲ್ಲಾಪೂರ, ಭಗವತಿ ಹಾಗೂ ಬೇವಿನಮಟ್ಟಿ ಗ್ರಾಮಗಳಲ್ಲಿ ಕರ ವಸೂಲಾತಿಗೆ ಚಾಲನೆ ನೀಡಿ ಮಾತನಾಡಿದ ಅವರು ವಿವಿಧ ಗ್ರಾಮ ಪಂಚಾಯತಗಳಲ್ಲಿ ಬಾಕಿ ಇರುವ ತೆರಿಗೆ ವಸೂಲಾತಿಗಾಗಿ ಬೆಳಿಗ್ಗೆ 7 ರಿಂದ ಸಂಜೆ 6 ಗಂಟೆವರೆಗೆ ಗ್ರಾ.ಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು, ಜನ ಪ್ರತಿನಿಧಿಗಳು ಮತ್ತು ಪಂಚಾಯತ ಅಭಿವೃದ್ದಿ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರ ಸಹಯೋಗದಲ್ಲಿ ಅಭಿಯಾನದ ರೂಪದಲ್ಲಿ ಕರ ವಸೂಲಾತಿಗೆ ಮುಂದಾಗಿದ್ದು, ಒಂದೇ ದಿನದಲ್ಲಿ ದಾಖಲೆಯ 2.12 ಕೋಟಿ ರೂ.ಗಳ ಕರ ಸಂಗ್ರಹವಾಗಿದೆ ಎಂದರು.

ಬೀಳಗಿ ತಾಲೂಕಿನ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯತಿಗಳಲ್ಲಿ ಒಟ್ಟು 41.99 ಲಕ್ಷ ರೂ, ಬಾಗಲಕೋಟೆ ತಾಲೂಕಿನ ವ್ಯಾಪ್ತಿಯಲ್ಲಿ 41.74 ಲಕ್ಷ ರೂ, ಮುಧೋಳ ತಾಲೂಕಿನ ವ್ಯಾಪ್ತಿಯಲ್ಲಿ 30.01 ಲಕ್ಷ ರೂ, ಬಾದಾಮಿ ತಾಲೂಕಿನ ವ್ಯಾಪ್ತಿಯಲ್ಲಿ 27.34 ಲಕ್ಷ ರೂ, ಹುನಗುಂದ ತಾಲೂಕಾ ವ್ಯಾಪ್ತಿಯಲ್ಲಿ 17.85 ಲಕ್ಷ ರೂ, ರಬಕವಿ–ಬನಹಟ್ಟಿ ತಾಲೂಕಾ ವ್ಯಾಪ್ತಿಯಲ್ಲಿ 17.30 ಲಕ್ಷ ರೂ, ಇಳಕಲ್ಲ ತಾಲೂಕಾ ವ್ಯಾಪ್ತಿಯಲ್ಲಿ 13.37 ಲಕ್ಷ ರೂ, ಗುಳೇದಗುಡ್ಡ ತಾಲೂಕಾ ವ್ಯಾಪ್ತಿಯಲ್ಲಿ 11.40 ಲಕ್ಷ ರೂ ಹಾಗೂ ಜಮಖಂಡಿ ತಾಲೂಕಾ ವ್ಯಾಪ್ತಿಯಲ್ಲಿ 11.94 ಲಕ್ಷ ರೂ.ಗಳ ಕರ ಸಂಗ್ರಹವಾಗಿದೆ. ತೆರಿಗೆ ಪಾವತಿಸಿ ಗ್ರಾಮಗಳ ಅಭಿವೃದ್ದಿಗೆ ಸಹಕರಿಸಿದ್ದಾರೆ ಎಂದು ತಿಳಿಸಿದ್ದಾರೆ.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಸುಭಾಷ ಸಂಪಗಾವಿ, ಪಂಚಾಯತ ರಾಜ್ ಇಲಾಖೆಯ ಸಹಾಯಕ ನಿರ್ದೇಶಕ ಪರಮೇಶ್ವರ ಚಲವಾದಿ, ಬೇವಿನಮಟ್ಟಿ ಪಂಚಾಯತ ಅಭಿವೃದ್ಧಿ ಅಧಿಕಾರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.



**ಗೋಕಾಕ: ನಗರದ ರೋಟರಿ ರಕ್ತ ಭಂಡಾರ ಕೇಂದ್ರದಲ್ಲಿ ರವಿವಾರದಂದು ಕೋಲ್ಹಾಪೂರ ವಲಯದ ಸ್ಮಾರ್ಟ್ ಕಿಡ್ ಅಬ್ಯಾಕಸ್ ಪ್ರೈವೇಟ್ ಲಿಮಿಟೆಡ್ ನವರು ಆಯೋಜಿಸಿದ ಅಬ್ಯಾಕಸ್ ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ವಿಜೇತರಿಗೆ ಇಲ್ಲಿನ ಜಿ.ಇ.ಎಸ್. ಮಾಡರ್ನ್ ಆಂಗ್ಲ ಮಾಧ್ಯಮ ಶಾಲೆಯ ಮುಖ್ಯೋಪಾಧ್ಯಾಯ ಎಸ್.ಕೆ.ಮಠದ ಬಹುಮಾನ ವಿತರಿದರು.**

**ಈ ಸಂದರ್ಭದಲ್ಲಿ ಸಂಯೋಜಕಿ ನೇಹಾ ಚುನಮರಿ, ರೋಟರಿ ಸಂಸ್ಥೆಯ ಜಗದೀಶ್ ಚುನಮರಿ , ಸಂಸ್ಥೆಯ ಯೋಗೇಶ ಇದ್ದರು.**

# ಒಳ ಮೀಸಲಾತಿ ಜಾರಿಗೆ ಆಗ್ರಹಿಸಿ ಮಾದಿಗ ಒಳ ಮೀಸಲಾತಿ ಹೋರಾಟ ಸಮಿತಿ - ವಿವಿಧ ದಲಿತಪರ ಸಂಘಗಳಗಳಿಂದ ಬೃಹತ್ ಪ್ರತಿಭಟನೆ



ಮುದ್ದೇಬಿಹಾಳ ; ಬೆಳಗಾವಿಯಲ್ಲಿ ನಡೆಯುವ ಚಳಿಗಾಲ ಅಧಿವೇಶನದಲ್ಲಿ ಒಳ ಮೀಸಲಾತಿ ಜಾರಿಗೆ ಕುರಿತು ಶಾಸಕ ಸಿ.ಎಸ್ ನಾಡಗೌಡರು ಧ್ವನಿ ಎತ್ತದೆ ಇದ್ದರೆ ಎಲ್ಲಿ ಶಾಸಕರು ಕಾಣಿಸ್ತರೋ ಅಲ್ಲಿ ಅವರ ವಿರುದ್ಧ ಕಪ್ಪು ಬಾವುಟ ಪ್ರದರ್ಶನ ಮಾಡುತ್ತೇವೆ ಎಂದು ಒಳ ಮೀಸಲಾತಿ ಹೋರಾಟಗಾರ ದಲಿತ ಮುಖಂಡ ಬಸವರಾಜ ಪೂಜಾರಿ( ಸಿದ್ದಾಪುರ) ಹೇಳಿದರು ಸೋಮವಾರ ಹುಡ್ಕೊ ಬಡಾವಣೆಯ ಹೇಮರೆಡ್ಡಿ ಮಲ್ಲಮ್ಮ ವೃತ್ತದಲ್ಲಿ ಮುದ್ದೇಬಿಹಾಳ ಮಾದಿಗ ಒಳ ಮೀಸಲಾತಿ ಹೋರಾಟ ಸಮಿತಿ ಹಾಗೂ ವಿವಿಧ ದಲಿತಪರ ಸಂಘಗಳ ಒಕ್ಕೂಟದ ನೇತೃತ್ವದಲ್ಲಿ ಶಾಸಕ ಅಪ್ಪಾಜಿ ನಾಡಗೌಡ ಮನೆ ಮುತ್ತಿಗೆ ಹೋರಾಟ ಉದ್ದೇಶಿಸಿ ಮಾತನಾಡಿದರು ಶಾಸಕರು ನಮ್ಮ ಹೋರಾಟವನ್ನು ಹತ್ತಿಕ್ಕಿವ ಕೆಲಸವನ್ನು ಪೂಲೀಸರ ಮೂಲಕ ಮಾಡಿದ್ದಾರೆ ಶಾಸಕರಿಗೆ ನಮ್ಮ ಬಗ್ಗೆ ಹೆದ–ರಿಕೆ ಇದೆ ಸಿಎಂ ಬಂದಾಗಲೂ ಇಷ್ಟೊಂದು ಪೂಲೀಸ್ ಬಂದೂಬಸ್ತ್ ಬ್ಯಾರಿಕೇಡ್ ಹಾಕುವುದಿಲ್ಲ ನಮಗೂ ಕಾನೂನಿನ ಅರಿವು ಇದೆ ಹೋರಾಟಕ್ಕೆ ಹಳ್ಳಿಗಳಿಂದ ಬಂದ ಜನರನ್ನು ದಿಕ್ಕು ತಪ್ಪಿಸುವ ಕೆಲಸ ಶಾಸಕರು ಮಾಡಿದ್ದಾರೆ ಎಂದು ವಾಗ್ದಾಳಿ ನಡೆಸಿದರು

ದಲಿತಪರ ಮುಖಂಡರಾದ ಹ–ರೀಶ ನಾಟಿಕಾರ ರಾಜ್ಯದಲ್ಲಿ ನಾವು 75 ಲಕ್ಷ ಜನರಿದ್ದೇವೆ ರಾಜಕಾರಣಿಗಳಿಗೆ ಒಳಮೀಸಲಾತಿ ನೀಡಿದರೆ ದಲಿತರು ರಾಜಕೀಯವಾಗಿ ಪ್ರಬಲರಾಗ್ತಾರೆಂದು ಹಿಂದೇಟು ಹಾಕುತ್ತಿದ್ದಾರೆ ಒಳ ಮೀಸಲಾತಿ ಸಿಕ್ಕರೆ ನಮ್ಮ ಮಕ್ಕಳು ಶೈಕ್ಷಣಿಕವಾಗಿ ಪ್ರಗತಿ ಹೊಂದಲು ಸಾಧ್ಯವಿದೆ ,ಹಿಂದೆ ಕೇಂದ್ರ ಬಿಜೆಪಿ ಸರಕಾರ ಮೇಲ್ವರ್ಗದ ಜನಾಂಗಕ್ಕೆ 10% ಮೀಸಲಾತಿಯನ್ನು ಕೆಲವೇ ದಿನಗಳಲ್ಲಿ ಜಾರಿಗೆ ಮಾಡಿತು ನಾವು 38% ಇದ್ದರು ಸಿಎಂ ಸಿದ್ದ ರಾಮಯ್ಯನವ–ರಿಗೆ ಒಳಮೀಸಲಾತಿ ಜಾರಿಗೆ ಮಾಡಲು ಆಗುತ್ತಿಲ್ಲ ,ಮುದ್ದೇಬಿಹಾಳ ಶಾಸಕರು ನಮ್ಮ ಕರೆಗೆ ಓಗೊಟ್ಟು ಬರಬೇಕಿತ್ತು ಅನಾರೋಗ್ಯವಿದ್ದರೆ ಅವರ ಪರವಾಗಿ ಯಾರನ್ನಾದರೂ ಕಳಿಸಬೇಕಿತ್ತು ಎಂದರು

ಸಿ.ಜಿ ವಿಜಯಕರ ಮಾತನಾಡಿ ಒಳಮೀಸಲಾತಿ ಜಾರಿಗೆ ಮಾಡುವಂತೆ ಸುಪ್ರೀಂ ಕೋರ್ಟ್ ಆದೇಶ ಮಾಡಿದರು ಆಳುವ ಸರಕಾರಗಳು ಜಾರಿಗೆ ತರಲು ಮೀನಾ ಮೇಷ ಎಣಿಸುತ್ತಿವೆ ಎಂದರು.

ನ್ಯಾಯವಾದಿ ಕೆ ಬಿ ದೂಡಮನಿ ಮಾತನಾಡಿ ಸಿಎಂ ಸಿದ್ದರಾಮಯ್ಯ ಚುನಾವಣೆಯಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದರೆ ಒಳಮೀಸಲಾತಿ ಜಾ–ರಿಗೆ ಮಾಡ್ತವೆಂದು ಹೇಳಿದ್ದರು ಅಂತಯೇ ಮುದ್ದೇಬಿಹಾಳ ಶಾಸಕ ನಾಡಗೌಡರು ಸಹ ನಮ್ಮ ಸರಕಾರ ಅಧಿಕಾರಕ್ಕೆ ಬಂದರೆ ಒಳಮೀಸಲಾತಿ ಕುರಿತು ಸದನದಲ್ಲಿ ಧ್ವನಿ ಎತ್ತುತ್ತೇನೆ ಎಂದು ಈಗ ಮರೆತಿದ್ದಾರೆ ನಮ್ಮ ಒಳಮೀಸಲಾತಿ ಮನವಿಯನ್ನು ಕೇಳಲು ಶಾಸಕರಿಗೆ ಆಗುತ್ತಿಲ್ಲ ಅಧಿಕಾರ ಮತ್ತು ಕಾನೂನಿನ ದುರುಪಯೋಗ ಮಾಡಿಕೊಂಡು ಮುತ್ತಿಗೆ ತಡಘು ಬ್ಯಾ–ರಿಕೇಡ್ ಹಾಕಿದ್ದಿರ ನಮ್ಮ ಸಮಾಜದ ಮನವಿ ಸ್ವೀಕರಿಸುವ ಯೋಗ್ಯತೆ ನಿಮಗಿಲ್ಲ ನಮ್ಮ ಸಮಾಜದಲ್ಲಿ ಒಡೆದಾಳುವ ನೀತಿ ಕೈ ಬಿಡಬೇಕು ಚಳಿಗಾಲ ಅಧಿವೇಶನದಲ್ಲಿ ಒಳಮೀಸಲಾತಿ ಕುರಿತು ಧ್ವನಿ ಎತ್ತದೆ ಇದ್ದರೆ ನಿಮ್ಮ ಮನೆಗೆ ಮುತ್ತಿಗೆ ಹಾಕಿತಿರುತ್ತೇವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಮುಖಂಡರಾದ ಡಿ.ಬಿ ಮುದೂರ, ನ್ಯಾಯವಾದಿ ಮುಸ್ಲಿಂ ಕೌನ್ಸಿಲ್ ಮುಖಂಡ ಕೆ ಎಂ ರಿಸಾಲದಾರ, ಆನಂದ ಮುದೂರ, ತಿಪ್ಪಣ್ಣ ವಂದಾಲ, ಧರ್ಮರೆಡ್ಡಿ ಇಳಕಲ್ ಮಾತನಾಡಿ ಒಳಮೀಸಲಾತಿ ಜಾರಿಗೆ ಕುರಿತು ಆಗ್ರಹಿಸಿದರು.

ಶಾಸಕ ಸಿ.ಎಸ್ ನಾಡಗೌಡರ ಮನೆ ಮುತ್ತಿಗೆ ಪೂಲೀಸರು ಅವಕಾಶ ನೀಡಿದ ಕಾರಣ ಶಾಸಕರ ಮನೆ ಮಾರ್ಗದ ಹುಡ್ಕೊ ಹೇಮರೆಡ್ಡಿ ಮಲ್ಲಮ್ಮ ವೃತ್ತದಲ್ಲಿ ಪೂಲೀಸರು ಬ್ಯಾರಿಕೇಡ್ ಹಾಕಿದ್ದರು ಒಳಮೀಸಲಾತಿ ಹೋರಾಟಗಾರರು ಅಲ್ಲಿಯೇ ಪ್ರತಿಭಟಿಸಿದರು ಸ್ಥಳಕ್ಕೆ ಆಗಮಿಸಿದ ತಹಶಿಲ್ದಾರ ಬಲರಾಮ ಕಟ್ಟಿಮನಿಯವ–ರಿಗೆ ಚಳಿಗಾಲದ ಅಧಿವೇಶನದಲ್ಲಿ ಒಳಮೀಸಲಾತಿ ಜಾರಿಗೆ ಆಗ್ರಹಿಸಿ ಶಾಸಕ ನಾಡಗೌಡರಿಗೆ ಹಾಗೂ ಮುಖ್ಯಮಂತ್ರಿಗಳಿಗೆ ಪ್ರತ್ಯೇಕ ಮನವಿಯನ್ನು ಸಲ್ಲಿಸಿದರು.

ಈ ವೇಳೆ ಭಗವಂತ ಕಬಾಡೆ, ಬಲಭೀಮ ನಾಯಕಮಕ್ಕಳ, ಪ್ರಶಾಂತ ಕಾಳೆ, ಪ್ರಕಾಶ ಚಲವಾದಿ, ದೇವರಾಜ ಹಂಗರಗಿ, ಶೇಖರ ಆಲೂರ, ಸಂಗಮೇಶ ಸರೂರ ಸುಭಾಸ ಕಟ್ಟಿಮನಿ ರಾಮು ತಂಬೂರಿ, ದಲಿತಪರ ಮುಖಂಡರು ಭಾಗವಹಿಸಿದ್ದರು,

ಅಂಬೇಡ್ಕರ್ ವೃತ್ತದಿಂದ ಹೇಮರೆಡ್ಡಿ ಮಲ್ಲಮ್ಮ ವೃತ್ತದವರಗೆ ತಮಟೆ ಬಾರಿಸುತ್ತಾ ಒಳಮೀಸಲಾತಿ ಜಾರಿಗೆ ಆಗ್ರಹಿಸಿ ಘೋಷಣೆ ಕೂಗಿದರು ಮಹಾಶರಣ ಹರಳಯ್ಯಾ ಬಸವಣ್ಣನವರಿಗೆ ಮಾಡಿದ ಪಾದುಕೆ ಪ್ರತಿಯಾಗಿ ಬೃಹತ್ ಪಾದುಕೆಗಳ ಮೆರವಣಿಗೆ ಮಾಡಿದರು.

ಶಾಸಕರಿಗೆ ಮನಗೆ ಪೂಲೀಸರ ಸರ್ಪಗಾವಲು ; ಒಳಮೀಸಲಾತಿ ಹೋರಾಟಗಾರರು ಶಾಸಕರ ಮನೆ ಮುತ್ತಿಗೆ ಹಾಕುತ್ತಾರೆಂದು ಪೂಲೀಸುರು ಮುಂಜಾಗ್ರತಾ ಕ್ರಮವಾಗಿ ಪೂಲೀಸರ ಅಭ್ಯೇದ ಕೋಟೆಯನ್ನು ಕಟ್ಟಿದ್ದರು ಶಾಸಕರ ಮನೆಯ ಮುಂದೆ ಪೂಲೀಸ್ ವ್ಯಾನ್ ಬ್ಯಾರಿಕೇಡ್ ವ್ಯವಸ್ಥೆ ಮತ್ತು ಹೇಮರೆಡ್ಡಿ ಮಲ್ಲಮ್ಮ ವೃತ್ತದಲ್ಲಿ ಬ್ಯಾರಿಕೇಡ್ ಹಾಕಿದ್ದರು ಶಾಸಕರ ಮನೆ ಮುತ್ತಿಗೆ ಹಾಕದಂತೆ ತಡೆಯಲು ಹೆಚ್ಚುವರಿ ಪೂಲೀಸ್ ಅಧಿಕ್ಷಕ ಶಂಕರ ಮಾರಿಹಾಳ ಆಗಮಿಸಿ ಶಾಸಕರ ಮನೆಗೆ ಮುತ್ತಿಗೆ ಅವಕಾಶ ನೀಡಿಲಿಲ್ಲ ಡಿವೈಎಸ್ಪಿ ಬಲ್ಲಪ್ಪ ನಂದಗಾವಿ ,ಸಿಪಿಐ ಮಲ್ಲಿಕಾರ್ಜುನ ತುಳಸಿಗೇರಿ ಪಿಎಸೈ ಸಂ–ಜಯ ತಿಪ್ಪರೆಡ್ಡಿ ಎಸ್ ಎಲ್ ಮನ್ನಾಬಾಯಿ ಸೇರಿದಂತೆ 5 ಪಿಎಸೈ ನೂರಕ್ಕೂ ಹೆಚ್ಚು ಪೂಲೀಸ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಅಗತ್ಯವಿರುವ ಶಾಲಾ ಕೋಣೆಗಳ ನಿರ್ಮಾಣಕ್ಕೆ ಭರವಸೆ




ಬಸವನಬಾಗೇವಾಡಿ, : ಪಟ್ಟಣದ ಸರ್ಕಾರಿ ಪ್ರಥಮ ಕಾಲೇಜಿನಲ್ಲಿ ಕಾಲೇಜು ಶಿಕ್ಷಣ ಇಲಾಖೆ, ಕರ್ನಾಟಕ ಗೃಹ ಮಂಡಳಿ ಸಹಯೋಗದಲ್ಲಿ ಶುಕ್ರವಾರ ಸಂಜೆ ಹಮ್ಮಿಕೊಂಡಿದ್ದ 2022–23 ನೇ ಸಾಲಿನ ಎಸ್.ಡಿ.ಪಿ ಯೋಜನೆಯಡಿ ಅಂದಾಜು ರೂ. 2.25 ಕೋಟಿ ವೆಚ್ಚದಲ್ಲಿ ಕಾಲೇಜಿನ ಹೆಚ್ಚುವರಿ ಕಟ್ಟಡದ ಕಾಮಗಾರಿ ಭೂಮಿ ಪೂಜೆಯನ್ನು ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶನಾಲಯ ಮತ್ತು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ನೆರವೇರಿಸಿದರು.

ನಂತರ ಸಚಿವರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಅಗತ್ಯವಿರುವ ತರಗತಿ ಕೋಣೆ, ಪ್ರಯೋಗಾಲಯ, ಸಭಾಂಗಣ ಯಾವ ರೀತಿಯಲ್ಲಿ ಕಟ್ಟಡ ನಿರ್ಮಾಣ ಮಾಡಬೇಕೆಂಬ ಕುರಿತು ಸಂಬಂಧಿಸಿದ ಅಧಿಕಾರಿಗಳೊಂದಿಗೆ, ಗುತ್ತಿಗೆದಾರರೊಂದಿಗೆ ಸಮಾಲೋಚನೆ ಮಾಡಿದರು. ನಾನು ಒಂದು ಕಟ್ಟಡ ಎಸ್ಟಿಮೇಟ್ ತಯಾರಿಸಲು ಹೇಳುವೆ,ನೀವು ಒಂದು ಎಸ್ಟಿಮೇಟ್ ಮಾಡಿ. ಎರಡನ್ನು ತುಲನೆ ಮಾಡಿ ಕಾಲೇಜಿಗೆ ಅಗತ್ಯವಿರುವ ಕೋಣೆಗಳನ್ನು ನಿರ್ಮಾಣ ಮಾಡೋಣ ಎಂದರು.

ಕಾಲೇಜಿನ ಒಂದು ಮೂಲೆಯಲ್ಲಿ ಮಳೆ ಬಂದಾಗ ಕಾಲೇಜಿನೊಳಗೆ ನೀರು ಬರುತ್ತದೆ. ಈ ಭಾಗದಲ್ಲಿ ಗುತ್ತಿಗೆದಾರರು ಶೀಟ್ ಹಾಕಿ ಮಳೆ ನೀರು ಬಾರದಂತೆ ಮಾಡಿಕೊಡಬೇಕು. ಅಗತ್ಯವಿರುವ ಕಡೆಗೆ ಸ್ಲ್ಯಾಬ್ ಹಾಕುವ ಮೂಲಕ ಕಾಲೇಜಿನೊಳಗೆ ಮಳೆ ನೀರು ಬಾರದಂತೆ ನೋಡಿಕೊಳ್ಳಬೇಕು. ಕಾಲೇಜಿನ ಮೆಟ್ಟಿಲುಗಳು ಸೀಳಿವೆ. ಕಾಲೇಜಿನ ಕಟ್ಟಡ ಅಲ್ಲಿಲ್ಲ ಬಿರುಕು ಬಿಟ್ಟಿದೆ. ಇದರ ಬಗ್ಗೆ ಗಮನ ಹರಿಸಬೇಕು. ಮುಂಬರುವ ಕಟ್ಟಡಗಳು ಕಳಪೆಯಾಗದಂತೆ ನಿರ್ಮಾಣ ಮಾಡಬೇಕು. ಕಾಲೇಜಿಗೆ ಇನ್ನೂ ತರಗತಿ ಕೋಣೆಗಳು ಅಗತ್ಯ ಬಿದ್ದರೆ ತರಗತಿ ಕೋಣೆ ನಿರ್ಮಾಣ ಮಾಡಿಕೊಡುವ ಭರವಸೆ ನೀಡಿದರು. ಸಚಿವರೊಂದಿಗೆ ಇದ್ದ ಮುಖಂಡರೊಬ್ಬರು ಕಾಲೇಜಿನಲ್ಲಿ ಕಸ–ದೂಳು ಬಹಳವಿದೆ ಎಂದು ಸಚಿವರ ಗಮನಕ್ಕೆ ತಂದಾಗ ಸಚಿವರು ನಾನು ಕಾಲೇಜಿನ ಕಸಗೂಡಿಸಬೇಕು ಅಂತಿಯಾ ಎಂದರು. ಆಗ ಮುಖಂಡ ನಾನು ಆ ರೀತಿ ಹೇಳಲಿಲ್ಲ ಸಾಹೇಬ್ರೆ ಕಾಲೇಜಿನ ಪ್ರಾಚಾರ್ಯರಿಗೆ ಕಾಲೇಜನ್ನು ಸ್ವಚ್ಛವಾಗಿಟ್ಟುಕೊಳ್ಳುವಂತೆ ಸೂಚಿಸಿರಿ ಎಂದು ಹೇಳಿದೆ ಎಂದರು.

ಕಾಲೇಜಿನ ಪ್ರಾಚಾರ್ಯ ಡಾ. ಎನ್.ಬಿ.ಹೊಸಮನಿ ಅವರು ಕಾಲೇಜಿನಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿದೆ. ತರಗತಿ ಕೋಣೆಗಳು ಅಗತ್ಯವಾಗಿವೆ ಎಂದು ಸಚಿವರ ಗಮನಕ್ಕೆ ತಂದರು. ಇದೇ ಸಂದರ್ಭದಲ್ಲಿ ಸಚಿವರನ್ನು ಕಾಲೇಜಿನ ಸಿಬ್ಬಂದಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಈರಣ್ಣ ಪಟ್ಟಣಶೆಟ್ಟಿ, ಸುರೇಶ ಹಾರಿವಾಳ, ಶೇಖರ ಗೊಳಸಂಗಿ, ಎಂ.ಜಿ.ಆದಿಗೊಂಡ, ಬಸವರಾಜ ಗೊಳಸಂಗಿ, ಪಂಚಾಕ್ಷರಿ ಕಾಳಹಸ್ತೇಶ್ವರಮಠ, ಜಟ್ಟಿಂಗರಾಯ ಮಾಲಗಾರ, ಶಂಕರಗೌಡ ಬಿರಾದಾರ, ಬಸವರಾಜ ಕೋಟಿ, ಪರುಶುರಾಮ ಜಮಖಂಡಿ, ಪ್ರವೀಣ ಪೂಜಾರಿ, ಸಂಗಯ್ಯ ಕಾಳಹಸ್ತೇಶ್ವರಮಠ, ರವಿ ರಾಠೋಡ, ಕಾಲೇಜಿನ ಸಿಬ್ಬಂದಿಗಳಾದ ಡಾ.ಎಸ್.ಎಂ.ನಾಟೀಕಾರ, ಆರ್.ಬಿ.ಅಂಬಲಿ, ಲೀಲಾವತಿ ಪಿ., ಪ್ರಶಾಂತ ನಾಯಕ, ಮಮತಾ ಎಂ.,ಶ್ರೀಶೈಲ ಬಳವಾಟ, ಅಮಿತ ಮಿರ್ಜಿ, ಡಾ.ಬಸೀರಾಬಾನು ನಿಡಗುಂದಿ, ಗುತ್ತಿಗೆದಾರ ವೆಂಕಟೇಶ, ಕರ್ನಾಟಕ ಗೃಹ ಮಂಡಳಿ ಅಭಿಯಂತರ ಸಾದಿಕಾ ಗಾಟವಾಲೆ, ಜಿಪಂ ಎಇಇ ವಿಲಾಸ ರಾಠೋಡ, ಲೋಕೋಪಯೋಗಿ ಇಲಾಖೆ ಎಇಇ ಜಿ.ವ್ಹಿ.ಕಿರಸೂರ, ಪುರಸಭೆ ಮುಖ್ಯಾಧಿಕಾರಿ ಅಫ್ರೋಜ್ ಪಟೇಲ ಇತರರು ಇದ್ದರು.



**ವಿಜಯಪುರ: ನಗರದ ಡಾ. ಬಿದ–ರಿಯವರ ಅಶ್ವಿನಿ ಆಸ್ಪತ್ರೆಯ ಡಾ.ಬಿದರಿ ಚೈಲ್ಡ್ ಅಕಾಡೆಮಿ ವತಿಯಿಂದ ಜರುಗಿದ "ಮಕ್ಕಳ ಮೇಲೆ ಅಂತರ್ಜಾಲ ಮೊಬೈಲ್ ಮತ್ತು ಟಿವಿಗಳ ಪ್ರಭಾವ" ಈ ವಿಷಯದ ಕುರಿತು ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದ ಕು.ವಿವೇಕ ಸಂತೋಷ ಚವ್ಹಾಣ ಇವರಿಗೆ ದಿ: 22–11–2024 ರಂದು ನಗರದ ಕಂದಗಲ್ ಹನುಮಂತರಾಯ ರಂಗಮಂದಿರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸನ್ಮಾನಿಸಿ ಪ್ರಶಸ್ತಿ ಪತ್ರ ಹಾಗೂ ರೂ. 5000=00 ನಗದು ಬಹುಮಾನವನ್ನು ನೀಡಿ ಗೌರವಿಸಲಾಯಿತು.**

# ಅರ್ಜಿ ಆಹ್ವಾನ

ಬೆಳಗಾವಿ : ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ ಗಿರಿಜನ ಉಪಯೋಜನೆಯಡಿ ಗ್ರಾಮೀಣ ಭಾಗದ ರೈತರಿಗೆ ಕುರಿ, ಮೇಕೆ ಘಟಕ ಪೂರೈಸಲು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದಲ್ಲಿ ನೋಂದಾಯಿತ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರಿ ಸಂಘಗಳ ಪರಿಶಿಷ್ಟ ಪಂಗಡಗಳ ವರ್ಗದ ಸದಸ್ಯರುಗಳಿಂದ ಶೇ.90ರಷ್ಟು ಸಹಾಯಧನದೊಂದಿಗೆ ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸದರಿ ಯೋಜನೆಯಲ್ಲಿ ಈ ಹಿಂದೆ ಸಹಾಯಧನ ಪಡೆದಿರುವ ಫಲಾನುಭವಿಗಳನ್ನು ಪರಿಗಣಿಸಲಾಗುವುದಿಲ್ಲ, ಜಿಲ್ಲೆಗೆ ಒಟ್ಟು 13 ಗು–ರಿಗಳನ್ನು ನೀಡಲಾಗಿದೆ. ಆಸಕ್ತರು ಡೀಸೆಂಬರ್ 10 ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ಉಪ ನಿರ್ದೇಶಕರ ಕಚೇರಿಗೆ ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳು ನೌಕರಿ ಶಿಕಾರಿಗಿಂತ ಉದ್ಯಮಿಯಾಗುವ ಕನಸು ಕಾಣಲಿ : ಶಿವಲಿಂಗ ಸಿದ್ನಾಳ





**ಮಹಾಲಿಂಗಪುರ:** ತಾಂತ್ರಿಕ ವಿಭಾಗದ ವಿದ್ಯಾರ್ಥಿಗಳು ಕೇವಲ ನೌಕರಿ ಹಿಡಿಯುವ ಹುನ್ನಾರಿಗಿಂತ ಉದ್ಯಮಿಯಾಗಿ ಉದ್ಯೋಗ ನೀಡುವ ಉತ್ಸಾಹ ತೋರಲಿ ಎಂದು ಉಪನ್ಯಾಸಕ ಶಿವಲಿಂಗ ಸಿದ್ನಾಳ ಹೇಳಿದರು.

ಸ್ಥಳೀಯ ಕೆಎಲ್‌ಇ ಸಂಸ್ಥೆಯ ಬಿಸಿಎ ಪದವಿ ವಿಭಾಗದಲ್ಲಿ ಹಮ್ಮಿಕೊಂಡಿದ್ದ ಅಧ್ಯಾಯ ಎಂಬ ಮೊದಲ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭದಲ್ಲಿ ಮಾತನಾಡಿದರು. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಕೀಳ–ರಿಮೆಯಿಂದ ಹೊರಬಂದು ಆತ್ಮವಿಶ್ವಾಸದಿಂದ ಗೆಲುವಿನ ಹಾದಿಯಲ್ಲಿ ಮೈಲುಗಲ್ಲಾಗಿ ನಿಲ್ಲಬೇಕು. ಕಾಲೇಜಿನಲ್ಲಿ ಪಡೆದ ತಾಂತ್ರಿಕ ವಿದ್ಯೆಯನ್ನು ನೌಕ–ರಿಗಾಗಿ ಮಾರಿಕೊಳ್ಳದೇ ಅದನ್ನೇ ಬಳಸಿಕೊಂಡು ಸ್ವಂತ ಉದ್ಯಮ ಸ್ಥಾಪಿಸಿದರೆ ನೂರಾರು ಜನ–ರಿಗೆ ಉದ್ಯೋಗ ಕೊಡುವ ಉದ್ಯೋಗದಾತ ಆಗಬಹುದು. ದೇಶದ ಆರ್ಥಿಕಗೆ ಆಸ್ತಿಯೂ ಆಗಬಹುದು ಎಂದರು.

ಇದಕ್ಕೂ ಮುನ್ನ ಸಸಿಗೆ ನೀರುಣಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಲಾಯಿತು. ಪ್ಯಾನ್ ಇಂಡಿಯಾ ಸಿನಿಮಾ ಟೈಟಲ್ ಮೀ–ರಿಸುವಂತೆ ತಮ್ಮ ಕಾರ್ಯಕ್ರಮದ ಬ್ಯಾನರ್ ಸಿದ್ದಪಡಿಸುವ ಮೂಲಕ ವಿದ್ಯಾರ್ಥಿಗಳು ತಮ್ಮ ಸೃಜನಶೀಲತೆ ಮೆರೆದಿದ್ದು ಗಮನ ಸೆಳೆಯಿತು. ನಿತ್ಯ ಸೂಟು, ಬೂಟು, ಕೋಟು ಧರಿಸಿ ಸಮವಸ್ತ್ರದಲ್ಲಿ ಬರುತ್ತಿದ್ದ ವಿದ್ಯಾರ್ಥಿಗಳು ಕಾರ್ಯಕ್ರಮದ ದಿನ ಟ್ರೆಡಿಶನಲ್ ಆಗಿ ಕೊಂಚ ಎಡಿಶನಲ್ ಆಗಿ ಮಿಂಚುತ್ತಿದ್ದರು. ನಂತರ ಹಾಡು, ನೃತ್ಯ ಸೇರಿದಂತೆ ನಾನಾ ಟಾಸ್ಕ್ ಆಯೋಜಿಸಿ ಸಂಭ್ರಮಿಸಿದರು. ನಂತರ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿವರ್ಗದವರು ಬಾಲೂಷಾ, ಮಸಾಲೆ ರೈಸ್ ಮತ್ತು ಮಸಾಲೆ ಮಜ್ಜಿಗೆ ಸವಿದರು. ಸಹಚರರೊಂದಿಗೆ ಸೆಲ್ಫಿಗೆ ಶರಣಾದರು.

ಬಿಸಿಎ ವಿಭಾಗದ ಸಂಯೋಜಕ ಪ್ರೋ. ಎಸ್.ಐ.ಪಾಟೀಲ, ಎ.ಆರ್.ಉರಬಿ, ವಿನಾಯಕ ಬಡಿಗೇರ, ಸುಮಾ ಕೆ, ಆರ್.ಎಸ್.ಪೂಜಾರಿ, ಐ.ಸಿ.ಶಿರೋಳ, ಪಿ.ಎಂ.ಗೌಳಿ, ಸಿ.ಎಂ.ಐಗಳಿ, ಪ್ರವೀಣ ಅಥಣಿ, ಅಶ್ವಿನಿ ಲಟ್ಟಿ, ಪಿ.ಎಸ್.ಹಿಪ್ಪರಗಿ ಇದ್ದರು.

# ದೇವಾಂಗ ದೇವಲ ಮಹರ್ಷಿಯ ಜಯಂತಿ ಆಚರಣೆ



ಬೆಳಗಾವಿ 25– ನಗರದ ತಾಳೂಕರ ಚಿತ್ರಕಲಾ ಮತ್ತು ದೇವಾಂಗ ಸಮಾಜ ಸೇವಾ ಪ್ರತಿಷ್ಠಾನ ವತಿಯಿಂದ. ದೇವಾಂಗ ದೇವಲ ಮಹರ್ಷಿಯ ಜಯಂತಿ ಆಚರಣೆಯನ್ನು ಆಚರಿಸಲಾಯಿತು.

ಜ್ಯೋತಿ ಬೆಳಗಿಸಿ ಕಾರ್ಯಕ್ರಮ ಉದ್ಘಾಟಿಸಿದ ಶ್ರೀಮತಿ ಪ್ರೀತಿ ಕಾಮಕರ ಅವರು ಮಾತನಾಡುತ್ತ , ದೇವಾಂಗ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಷ್ಠಾನದ ಪ್ರೋತ್ಸಾಹಿಸಿ ಗೌರವಿಸುತ್ತಿರುವ ಕಾರ್ಯ ಶ್ಲಾಘನೀಯವಾಗಿದೆ ಎಂದರು. ಅತಿಥಿಗಳಾಗಿ ಆಗಮಿಸಿದ್ದ ಶಿಕ್ಷಕಿ ಶ್ರೀಮತಿ ಕುಸುಮಾ ತಾಳೂಕರ್ ಅವರು ಗೌರವ ಸ್ವೀಕರಿಸಿ ಮಾತನಾಡುತ್ತ . ಇಂದಿನ ಹೆಣ್ಣು ಮಕ್ಕಳು ಮೊದಲಿಗಿಂತಲೂ ಶಿಕ್ಷಣದಲ್ಲಿ ಹೆಚ್ಚೆಚ್ಚು ಆಸಕ್ತಯನ್ನು ವಹಿಸಿ ಹೆಚ್ಚಿನ ಶಿಕ್ಷಣ ಪಡೆಯುತ್ತಿದ್ದಾರೆ. ಡಾಕ್ಟರ್ ಇಂಜಿನಿಯರ್ ಗಳಾಗುತ್ತಿದ್ದಾರೆ. ಇದು ಒಳ್ಳೆಯ ಬೆಳವಣಿಗೆಯಾಗಿದೆ. ಮಹಿಳೆಯರಿಗೆ ಇನ್ನೂ ಹೆಚ್ಚಿನ ಪ್ರೋತ್ಸಾಹ ನೀಡಿದರೆ ಸಮಾಜವು ಒಳ್ಳೆಯ ಬೆಳವಣಿಗೆ ಕಾಣಲು ಸಾಧ್ಯ ಎಂದು ಹೇಳಿದರು.

ಇನ್ನೋರ್ವ ಅತಿಥಿಗಳಾದ ಕೃಷ್ಣ ಗೋಂದಕರ ಸಂಶೋಧನೆ ಬಗ್ಗೆ ವಿವರಿಸಿ ಮಾತನಾಡುತ್ತ ಇಂಟ–ರ್ನ್ಯಾಷನಲ್ ಜನರಲ್ ಆಫ್ ಇನ್ ವೋಟಿವ ರಿಸರ್ಚ್ ಇನ್ ಟೆಕ್ನಾಲಜಿ.

ಡಿಸೈನ್ ಇಂಪ್ಲಿಮೆಂಟೇಶನ್ ಆಫ್ ಜಿಯೋ ಪೆನ್ಸಿಂಗ್ ಟೆಕ್ನಾಲಜಿ ಫಾರ್ ವೆಹಿಕಲ್ ಟ್ರ್ಯಾಕಿಂ–ಗ್ ಸಿಸ್ಟಮ್ , ವೆಹಿಕಲ್ ಆಕ್ಸಿಡೆಂಟ್ ಅಲರ್ಟ್ ಸಿಸ್ಟಮ್ ಯೂಸಿಂಗ್ ಜಿಪಿಎಸ್ ಅಂಡ್ ಜಿಎಸ್ಎಂ ವಿಷಯಗಳ ಮೇಲೆ ಸಮಗ್ರವಾಗಿ ವಿವರಿಸಿ ಲೆಪ್ಟಾಕ್ ನಲ್ಲಿ ಪ್ರತೀಕ್ಷತೆ ತೋರಿಸಿ ಮಾತನಾಡಿದರು.

ಇನ್ನೊರವ ಅತಿಥಿಗಳಾದ ಶ್ರೀ ರುದ್ರಪ್ಪ ಕಾಮಕರ ಸನ್ಮಾನ ಸ್ವೀಕರಿಸಿ ತಾವು ಕನ್ನಡಕ್ಕಾಗಿ ಹೋರಾಡಿದ ಹಳೆಯ ಘಟನೆಗಳನ್ನು ನೆನಪಿಸಿಕೊಂಡರು ತಮ್ಮನ್ನೂ ಗೌರವಿಸಿದ್ದಕ್ಕೆ ಪ್ರತಿಷ್ಠಾನದ ಸದಸ್ಯರಿಗೆ ಧನ್ಯವಾದಗಳನ್ನು ತಿಳಿಸಿದರು. ಕಾರ್ಯಕ್ರಮದಲ್ಲಿ ಎನ್ಎಂಎಂ–ಎಸ್ ಪರೀಕ್ಷೆಯಲ್ಲಿ ಪಾಸಾದ ವಿದ್ಯಾರ್ಥಿಗಳಿಗೆ, ರಂಗೋಲಿ ಸ್ಪರ್ಧೆಯಲ್ಲಿ ವಿಜೇತರಿಗೆ,ಬೆಳಗಾವಿ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಿಗೆ, ಎಸ್ ಎಸ್ ಎಲ್ ಸಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅತಿಥಿಗಳಿಂದ ಗೌರವಿಸಿ ಸನ್ಮಾನಿಸಲಾಯಿತು.

ಅಧ್ಯಕ್ಷತೆಯನ್ನು ಸುಭಾಷ್ ತಾಳೂಕರ ವಹಿಸಿದ್ದರು. ಪ್ರತಿಷ್ಠಾನದ ಸದಸ್ಯರುಗಳಾದ ಶ್ರೀಮತಿ ಅನ್ನಪೂರ್ಣ ಕೃಷ್ಣರಾಜೇಂದ್ರ ತಾಳೂಕರ, ರೇಖಾ ಮಂಜುನಾಥ ಮಕಾಟೆ, ಶ್ರೀನಿವಾಸ್ ಕಲ್ಯಾಣ್ ತಾಳೂಕರ, ಈರಣ್ಣ ಗರಗ, ರತ್ನಪ್ರಭಾ ಕಾಮಕರ, ಹರೀಶ್ ಢವಳಿ ಉಪಸ್ಥಿತರಿದ್ದರು ಮಂಜುನಾಥ್ ಉದಯ ಕಾಮಕರ ನಿರೂಪಿಸಿದರು. ಸುಭಾಷ್ ತಾಳೂಕರ ವಂದಿಸಿದರು.

### ರಾಮತೀರ್ಥ ನಗರ ಸರ್ಕಾರಿ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಪಾಲಕರ ಸಭೆ

# ಎಬಿಸಿ ಕಾರ್ಡ್ ಬಗ್ಗೆ ಮಾಹಿತಿ ನೀಡಿದ ಎನ್.ಆರ್.ಮೆಳವಂಕಿ...





**ಬೆಳಗಾವಿ:** ನಗರದ ರಾಮತೀರ್ಥ ನಗರದಲ್ಲಿರುವ ಪಿ.ಎಮ್. ಶ್ರೀ ಸರ್ಕಾರಿ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಶನಿವಾರದಂದು ಹಮ್ಮಿಕೊಂಡ ಪಾಲಕರ ಸಭೆ ಜರುಗಿತು.

ಈ ಸಭೆಯಲ್ಲಿ ಭಾಗವಹಿಸಿದ ಶಾಲೆಯ ಮುಖ್ಯ ಗುರುಗಳಾದ ಶ್ರೀಮತಿ ಎನ್. ಆರ್. ಮೆಳವಂಕಿ ಮಾತನಾಡಿ ಮಕ್ಕಳ ಕೈಯಲ್ಲಿ ಮೊಬೈಲ್ ಬದಲು ಪುಸ್ತಕ ಕೊಡಿ. ಜೊತೆಗೆ ಅಪರಿಚಿತರ ಜೊತೆ ದ್ವಿಚಕ್ರ ವಾಹನದಲ್ಲಿ ಸಂಚರಿಸುವ ಬಗ್ಗೆ ಮಕ್ಕಳಿಗೆ ತಿಳಿಹೇಳಿ. ಮಕ್ಕಳ ಸರಿ ತಪ್ಪುಗಳ ಬಗ್ಗೆ ಕಾಳಜಿವಹಿಸುವುದು ಪಾಲಕರ ಆದ್ಯ ಕರ್ತವ್ಯ ಎಂದರು.

ಮಕ್ಕಳಿಗೆ ಎಬಿಸಿ ಕಾರ್ಡ್ ಕಡ್ಡಾಯವಾಗಿದೆ ಅದರ ಮಹತ್ವ ಮುಂದಿನ ಶೈಕ್ಷಣಿಕ ಕ್ಷೇತ್ರದಲ್ಲಿ ಅವಶ್ಯವಾಗಿದೆ ಎಂದು ಕಾರ್ಡ ಬಗ್ಗೆ ಮಾಹಿತಿ ನಿಡಿದರು.

ಈ ಸಂದರ್ಭದಲ್ಲಿ ಮುಖ್ಯ ಗುರುಗಳು, ಸಿಬ್ಬಂದಿ ವರ್ಗ, ಎಸಡಿಎಂಸಿ ಅಧ್ಯಕ್ಷರು, ಉಪಾಧ್ಯಕ್ಷರು, ಎಲ್ಲ ಸದಸ್ಯರು ಹಾಗೂ ಪಾಲಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತ-ರಿದ್ದರು.

# ಮಹಿಳಾ ಉದ್ಯಮಿದಾರರಿಗೆ ಎನ್‌ಆರ್‌ಎಲ್‌ಎಮ್ ಯೋಜನೆ ಸ್ಪೂರ್ತಿಯ ಸೆಲೆಯಾಗಿದೆ : ಸಿಇಒ ಕುರೇರ್

**ಬಾಗಲಕೋಟೆ: :** ಸ್ವಾವಲಂಬನೆಯ ಜೀವನ ಕಟ್ಟಿಕೊಳ್ಳುತ್ತಿರುವ ಅನೇಕ ಮಹಿಳಾ ಉದ್ಯಮಿದಾರರಿಗೆ ಎನ್‌ಆರ್-ಎಲ್‌ಎಮ್ ಯೋಜನೆಯು ಸ್ಪೂರ್ತಿಯ ಸೆಲೆಯಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್ ಹೇಳಿದರು.

ಜಿಲ್ಲಾ ಪಂಚಾಯತ್ ನೂತನ ಸಭಾಂಗಣದಲ್ಲಿ ಸೋಮವಾರದಂದು ಹಮ್ಮಿಕೊಳ್ಳಲಾಗಿದ್ದ ಎನ್‌ಆರ್‌ಎಲ್‌ಎಮ್ ಯೋಜನೆಯಡಿ ಮಹಿಳಾ ಉದ್ಯಮಿದಾರರ ಜಿಲ್ಲಾ ಮಟ್ಟದ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು ಮಹಿಳೆಯರು ತಮ್ಮಲ್ಲಿರುವ ಶಕ್ತಿಯನ್ನು ಅರ್ಥಮಾಡಿಕೊಂಡು ಅದನ್ನು ಸೂಕ್ತ ರೀತಿಯಲ್ಲಿ ಸದ್ಬಳಕೆ ಮಾಡಿಕೊಂಡಲ್ಲಿ ದೇಶ, ರಾಜ್ಯ ಗ್ರಾಮ ಮತ್ತು ಕುಟುಂಬಗಳು ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ. ಮಹಿಳೆಯರು ಸ್ವಾವಲಂಬಿಗಳಾಗಲು ಎನ್‌ಆರ್ ಎಲ್ ಯೋಜನೆಯನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಜಿಲ್ಲೆಯಲ್ಲಿ ಮಹಿಳಾ ಸ್ವ ಸಹಾಯ ಗುಂಪುಗಳಿಂದ ಈಗಾಗಲೇ 5 ಮೊಬೈಲ್ ಕ್ಯಾಂಟೀನ್ ತೆಗೆಯಲಾಗಿದ್ದು ಎಲ್ಲವೂ ಚೆನ್ನಾಗಿ ನಡೆಯುತ್ತಿವೆ, ಜಮಖ-ಂಡಿಯಲ್ಲಿ ಸೂಪರ್ ಮಾರ್ಕೆಟ್ ತೆಗೆಯಾಗಿದ್ದು ಇತರ ಪ್ರಮುಖ ಸ್ಥಳಗಳಲ್ಲಿ ಸೂಪರ ಮಾರ್ಕೆಟ್ ತೆರೆಯಲು ಸ್ಥಳ ಗುರುತಿಸಲಾಗುತ್ತಿದೆ. ಶೀಘ್ರದಲ್ಲಿ ಪ್ರಾರಂಬಿಸಲಾಗುವುದು ಅಲ್ಲದೇ ಈ ಯೋಜನೆಯಡಿ ಅಕ್ಕಾ ಕೆಫೆ ತೆರೆಯುವ ಉದ್ದೇಶವಿದ್ದು ಮುಂದಿನ 15 ದಿನಗಳಲ್ಲಿ ಪ್ರಾರಂಬಿಸಲಾಗುವುದು. ಪ್ರತಿ ಗ್ರಾಮ ಪಂಚಾಯತಿಗೆ ಒಂದು ಕ್ಯಾಂಟೀನ್ ತೆರೆಯುಲು ಕ್ರಮ ಕೈಗೊಳ್ಳಲಾಗುತ್ತಿದ್ದು ಮಹಿಳೆಯರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಎನ್ ವಾಯ್ ಬಸರಿಗಿಡದ ಮಾತನಾಡಿ ಎನ್ ಆರ್ ಎಲ್ ಎಮ್ ಯೋಜನೆಯ ಉದ್ದೇಶ ಪ್ರತಿ ಕುಟುಂಬದ ಮಹಿಳೆ ಆರ್ಥಿಕ ಸಫಲತೆ ಸಾಧಿಸಿ ತನ್ನ ಕುಟುಂಬದ ನಿರ್ವಣೆ ಮಾಡಿಕೊಳ್ಳಬೇಕು ಎಂಬುದಾಗಿದ್ದು ಇದರ ಸದುಪಯೋಗ ಎಲ್ಲಡೆ ಆಗಬೇಕು ಎಂದು ಹೇಳಿದರು.

ಕಾರ್ಯಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿಸದ್ದ ಜಿಲ್ಲಾ ಕೈಗಾ-ರಿಕಾ ಕೇಂದ್ರದ ಜಂಟಿ ನಿರ್ದೇಶಕ ಪ್ರಶಾಂತ ಬಾರಿಗಿಡದ ಅವರು ಉದ್ಯಮಶೀಲತೆ ಅಭಿವೃದ್ಧಿ ಹಾಗೂ ಉದ್ಯಮಿ ನೊಂದಣಿ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ



ಪ್ರಾಧಿಕಾರದ ಅಂಕಿತ ಅಧಿಕಾರಿ ವಿಜಯ ಕಂಠಿ ಉದ್ಯಮ ನಿಯಮಬದ್ದಗೊಳಿಸುವಿಕೆ ಹಾಗೂ ಉತ್ಪನ್ನಗಳ ಗುಣಮಟ್ಟತೆ, ಅಗ್ರೋ ಮಾರ್ಕೆಟಿಂಗ್ ಸಮಾಲೋಚಕ ಅಮರ ಕಟ್ಟಿಮನಿ ಉತ್ಪನ್ನಗಳ ಮಾರುಕಟ್ಟೆ ಮತ್ತು ಬ್ರ್ಯಾಂಡಿಗ್ ಕುರಿತು ಉಪನ್ಯಾಸ ನೀಡಿದರು. ಮಹಿಳಾ ಉದ್ಯಮಿದಾರರಾದ ಗೀತಾ ಕರಬಸಯ್ಯ ಹಂಪಿಹೊಳಿಮಠ, ಶಿವಕ್ಕ ಗೌಡರ, ಸುಜಾತಾ ಪಾಟೀಲ, ಲಿಂಗತ್ವ ಅಲ್ಪಸಂಖ್ಯಾತ ಆನಂದ ಭಜಂತ್ರ, ಶೋಭಾ ಬಿಳ್ಳೂರು, ಮಲ್ಲಮ್ಮ ಮಠಪತಿ, ಕಸ್ತೂರಿ ರಾಠೋಡ, ಹಾಸಂಬಿ ಪಕಾಲಿ, ದಾನಮ್ಮ ಮಂಗಸೂಲಿ ತಮ್ಮ ಅನುಭವದ ಅನಿಸಿಕೆಗಳನ್ನು ಹಂಚಿಕೊಂಡರು.

ನಂತರ ಮಹಿಳಾ ಉದ್ಯಮಿದಾರರಿಗೆ ಪ್ರಮಣಾ ಪತ್ರಗಳನ್ನು ವಿತರಿಸಲಾಯಿತು. ಖ ಆರ್ ಡಿ ಎ ಯೋಜನಾ ನಿರ್ದೇಶಕ ಡಾ. ಪುನಿತ್ ಬಿ.ಆರ್ ಪ್ರಾಸ್ತಾವಿಕ ನುಡಿಗಳನ್ನು ಆಡಿದರು. ಜಿಲ್ಲಾ ಪಂಚಾಯತ್ ಸಹಾಯಕ ಯೋಜನಾಧಿಕಾರಿ ಭಿಮಪ್ಪ ತಳವಾರ ಸ್ವಾಗತಿಸಿದರು. ಜಿಲ್ಲಾ ವ್ಯವಸ್ಥಾಪಕ ಭಿಮಾನಂದ ಶೆಟ್ಟರ ವಂದನಾರ್ಪಣೆ ಸಲ್ಲಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ಸಿದ್ದರಾಮೇಶ್ವರ ಉಕ್ಕಲಿ ಸೇ-ರಿದಂತೆ ಇತರರು ಉಪಸ್ಥಿತರಿದ್ದರು. .

## ನಾಳೆ ಉದ್ಯೋಗ ಮೇಳ

ಬೆಳಗಾವಿ ನ.25 : ಬೆಳಗಾವಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ನ.27 ರಂದು ಬೆಳಗ್ಗೆ 10 ರಿಂದ ಮದ್ಯಾಹ್ನ 2 ಗಂಟೆಯವರೆಗೆ ನೆಹರು ನಗರದ ಡಾಲಮಿಯಾ ಭಾರತ ಪೌಂಡೇಶನ್ ದಿಕ್ಷಾ, ಮುಜಾವರ್ ಆರ್ಕೆಡ್‌ನ 3ನೇ ಮಹಡಿಯಲ್ಲಿ ಖಾಸಗಿ ಕಂಪನಿಗಳಿಂದ ಎಸ್-ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲೋಮಾ, ಯಾವುದೇ ಪದವಿ ಪಡೆದ ಅಭ್ಯರ್ಥಿಗಳಿಗಾಗಿ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು https://forms.gle/ZdiqZxrEtNJvb-cAC7 ವೆಬ್‌ಸೈಟ್‌ನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ಅಭ್ಯರ್ಥಿಗಳಿಗೆ ಉದ್ಯೋಗಾವಕಾಶವು ಉಚಿತವಾಗಿದ್ದು, ಇನ್ನುಳಿದ ಯಾವುದೇ ಸೌಲಭ್ಯಗಳು ಇರುವುದಿಲ್ಲ.

ಹೆಚ್ಚಿನ ಮಾಹಿತಿಗಳಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಸಹಾಯಕ ನಿರ್ದೇಶಕರು ಕಛೇ-ರಿಯ ದೂರವಾಣಿ:8880652225 ಸಂಖ್ಯೆಗೆ ಕಚೇರಿಯ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಲೂಕ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಉದ್ಘಾಟನೆ



**ಇಂಡಿ:** ಎಲ್ಲ ಮಕ್ಕಳಲ್ಲೂ ವಿಶೇಷವಾದ ಪ್ರತಿಭೆ ಅಡಗಿದ್ದು, ಅದನ್ನು ಪ್ರೋತ್ಸಾಹಿಸಿ ಬೆಳೆಸುವ ಕೆಲಸವನ್ನು ಪಾಲಕರು ಹಾಗೂ ಶಿಕ್ಷಕರು ಮಾಡಬೇಕು ಎಂದು ಇಂಡಿ ಶಾಸಕ ಯಶವಂತರಾಯಗೌಡ ಪಾಟೀಲ ಹೇಳಿದರು. ಅವರು ಸೋಮವಾರದಂದು ಪಟ್ಟಣದ ಕರ್ನಾಟಕ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ, ಕರ್ನಾಟಕ ಆಂಗ್ಲ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ಸಹಯೋಗದಲ್ಲಿ ಹಮ್ಮಿಕೊಂಡ ತಾಲೂಕ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳಲ್ಲಿನ ಪ್ರತಿಭೆಯನ್ನು ಬೆಳಕಿಗೆ ತರುವಲ್ಲಿ ಪ್ರತಿಭಾ ಕಾರಂಜಿಯಂಥ ಸ್ಪರ್ಧೆಗಳು ಅವಶ್ಯ. ಮಕ್ಕಳಲ್ಲಿನ ಪ್ರತಿಭೆ ಗುರುತಿಸಿ ಸೂಕ್ತ ಮಾರ್ಗದರ್ಶನ ನೀಡಿದರೆ, ಇನ್ನೂ ಉನ್ನತ ಸಾಧನೆ ಮಾಡಬಲ್ಲರು ಎಂದು ಹೇಳಿದರು.

ಕರ್ನಾಟಕ ವಿದ್ಯಾವರ್ಧಕ ಸಂಸ್ಥೆಯ ಕಾರ್ಯದರ್ಶಿ ಪಿ ಬಿ ಕತ್ತಿ ಮಾತನಾಡಿ, ಮಕ್ಕಳಿಗೆ ನಾಡಿನ ಸಂಸ್ಕೃತಿ ಹಾಗೂ ಸಂಸ್ಕಾರವನ್ನು ಕಲಿಸಿಕೊಡುವ ಮೂಲಕ ಅವರನ್ನು ದೇಶದ ಸತ್ಪ್ರಜೆಗಳನ್ನಾಗಿಸುವ ಗುರುತರ ಜವಾಬ್ದಾರಿ ಶಿಕ್ಷಕರ ಮೇಲಿದೆ ಎಂದು ಹೇಳಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಟಿ ಎಸ್ ಆಲಗೂರ ಪ್ರಾಸ್ತಾವಿಕವಾಗಿ ಮಾತನಾಡಿ, ಬೆಳೆಯುವ ಕುಡಿಯನ್ನು ಮೊಳಕೆಯಲ್ಲಿಯೇ ಚಿವುಟದೆ ಅದನ್ನು ಪ್ರೋತ್ಸಾಹಿಸಿ ಬೆಳೆಸುವ ಮೂಲಕ ದೇಶದ ಆಸ್ತಿಯನ್ನಾಗಿಸುವ ಗುರುತರ ಜವಾಬ್ದಾರಿ ತಮ್ಮೆಲ್ಲರ ಮೇಲಿದೆ ಎಂದರು.

ಇಂಡಿ ಪುರಸಭೆ ಅಧ್ಯಕ್ಷ ಅಂಬಾಜಿ ರಾಠೋಡ,ತಾಲೂಕ ಅಕ್ಷರ ದಾಸೋಹ ಅಧಿಕಾರಿ ಸುಜಾತಾ ಪೂಜಾರಿ,ಕರ್ನಾಟಕ ರಾಜ್ಯ ನೌಕರರ ಸಂಘದ ತಾಲೂಕಾಧ್ಯಕ್ಷ ಬಸವರಾಜ ರಾವೂರ, ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಎನ್ ಎಂ ಕಾಳೆ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ವೈ ಟಿ ಪಾಟೀಲ, ವಿಭಾಗೀಯ ಉಪಾಧ್ಯಕ್ಷ ಎಸ್ ವ್ಹಿ ಹರಳಯ್ಯ, ಶಿಕ್ಷಕರ ಸೊಸೈಟಿಯ ಅಧ್ಯಕ್ಷ ಪಿ ಎಸ್ ಚಾಂದಕವಟೆ, ಕರ್ನಾಟಕ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಬಸವರಾಜ ಕುಮಸಗಿ,ಕರ್ನಾಟಕ ರಾಜ್ಯ ಪ್ರೌಢ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಎ ಎಸ್ ಬಿರಾದಾರ, ತಾಲೂಕ ದೈಹಿಕ ಶಿಕ್ಷಣ ಪರಿವೀಕ್ಷಕ ಹಣಮಂತ ಮಾಳಗೊಂಡ,

ಜಿಪಿಟಿ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಶಂಕರ ಕೋಳೆಕರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಅಮರಸಿದ್ಧೇಶ್ವರ ಶ್ರೀಗಳು ಕೊಹಿನೂರ ವಜ್ರದಂತೆ -ಸಚಿವ ಸತೀಶ ಜಾರಕಿಹೊಳಿ



**ಗೋಕಾಕ:** ನಮ್ಮ ದೇಶದ ಕೋಹಿನೂರ ವಜ್ರ ಬ್ರೀಟಿಷರು ಹೊತ್ತೊಯ್ದಿರಬಹುದು ಕುಂದರನಾಡು ಸೇರಿ ಜಿಲ್ಲೆಗೆ ಅಮರಸಿದ್ಧೇಶ್ವರ ಶ್ರೀಗಳು ಕೊಹಿನೂರ ವಜ್ರದಂತೆ ಅವರಲ್ಲಿ ಹತ್ತು ಹಲವಾರು ಉಪಯುಕ್ತ ಯೋಜನೆಗಳಿದ್ದು ಅವರ ಯೋಜನೆಗಳು ಯಶಸ್ವಿಗೊಳಿಸಲು ಭಕ್ತರು ಸಹಕರಿಸುವಂತೆ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಅವರು, ರವಿವಾರದಂದು ಸಂಜೆ ತಾಲೂಕಿನ ಅಂಕಲಗಿ ಪಟ್ಟಣದ ಶ್ರೀ ಅಡವಿಸಿದ್ಧೇಶ್ವರ ಸಂಸ್ಥಾನ ಮಠದ ಆವರಣದಲ್ಲಿ ಶ್ರೀಮಠದ ಪೀಠಾಧಿಪತಿ ಶ್ರೀ ಅಮರಸಿದ್ಧೇಶ್ವರ ಶ್ರೀಗಳು ಗೌರವಾಭಿನಂಧನ ಕಾರ್ಯಕ್ರಮದಲ್ಲಿ ಮುಖ್ಯಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಅಂಕಲಗಿ-ಕುಂದರಗಿ ಶ್ರೀ ಅಡವಿಸಿದ್ಧೇಶ್ವರ ಮಠದ ಶ್ರೀ ಅಮರಸಿದ್ಧೇಶ್ವರ ಶ್ರೀಗಳು ಸತತ ಐದು ವರ್ಷಗಳ ಕಾಲ ಸಂಸ್ಕೃತದಲ್ಲಿ ಪಿಎಚ್‌ಡಿ ಪದವಿ ಪಡೆಯಲು ಶ್ರಮಿಸಿದ್ದಾರೆ. ತಮ್ಮ ವಿಚಾರಗಳನ್ನು ಗ್ರಂಥದ ಮೂಲಕ ನಮ್ಮ ನಾಡಿಗೆ ಸಮರ್ಪಣೆ ಮಾಡಬೇಕು ಎಂಬುದು ಅವರ ಆಶಯವಾಗಿ-ತ್ತು ಅವರ ಆಶಯದಂತೆ ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯ ಅವರ ಗ್ರಂಥಕ್ಕೆ ಪಿಎಚ್‌ಡಿ ಪದವಿ ನೀಡಿದೆ. ಶ್ರೀಗಳಲ್ಲಿರುವ ಜ್ಞಾನ, ಅನೇಕ ವಿಚಾರಗಳನ್ನು ಸಮಾಜ-ಕ್ಕೆ ತಲುಪಿಸಲು ಅವರು ಪ್ರಯತ್ನಿಸುತ್ತಿದ್ದು ಅವರ ಪ್ರಯತ್ನಕ್ಕೆ ನಾವೆಲ್ಲರೂ ಪ್ರೋತ್ಸಾಹಿಸುವ ಮೂಲಕ ಸಹಕರಿಸೋಣ ಎಂದರು.

ಅಮರಸಿದ್ಧೇಶ್ವರ ಶ್ರೀಗಳು ಬಡ ಮಕ್ಕಳಿಗೆ ಶಿಕ್ಷಣ, ಸಂಗೀತ ಹಾಗೂ ಅನ್ನ ದಾಸೋಹ ಪ್ರಾರಂಭಸುವ ವಿಚಾರ ಸೇರಿ ಅನೇಕ ಹತ್ತು ಹಲವು ವಿಚಾರಗಳನ್ನು ಹೊಂದಿದ್ದಾರೆ ಅವರಿಗೆ ಶ್ರೀಮಠದ ಭಕ್ತರಾದ ನಾವುಗಳು ಸಹಕರಿಸಬೇಕು ಎಂದು ಹೇಳಿದ ಅವರು ಶ್ರೀಗಳು ಕುಂದರನಾಡು ಹಾಗೂ ಜಿಲ್ಲೆಯ ವಜ್ರ ಅವರ ಜ್ಞಾನವನ್ನು ಜಿಲ್ಲೆ ಹಾಗೂ ನಾಡಿಗೆ ಉಪಯುಕ್ತವಾಗಿದೆ ಎಂದರು.

ಶ್ರೀ ಅಮರಸಿದ್ಧೇಶ್ವರ ಶ್ರೀಗಳು ಗೌರವಾಭಿನಂಧನ ಕಾರ್ಯಕ್ರಮದಲ್ಲಿ ಭಕ್ತ-ರಿಂದ ಅಭಿನಂಧನೆ ಸ್ವೀಕರಿಸಿ ಮಾತನಾಡಿ, ನಾನು ಅನೇಕ ವಿಚಾರಗಳನ್ನಿಟ್ಟುಕೊಂಡು ಶ್ರೀಮಠದ ಪೀಠಾಧಿಪತಿಯಾಗಿ ಬಂದಿದ್ದೇನೆ. ನಾನು ಪೀಠಕ್ಕೆ ಅಂಟಿಕೊಳ್ಳುವ ವ್ಯಾಮೋಹಹೊಂದಿವನಲ್ಲ. ಸ್ವಾಮೀಜಿಗಳು ಭಕ್ತರ ಒಡೆಯರಲ್ಲ ನಿಷ್ಠಾವಂತ ಸೇವಕ ಮಾತ್ರ. ಕೆಲವರು ಮಠದ ಶ್ರೀಗಳ ಬಗ್ಗೆ ರಾಜಕೀಯ ಮಾತುಗಳನ್ನಾಡುತ್ತಿದ್ದಾರೆ. ಅಂಕಲಗಿ-ಕುಂದರಗಿ ಮಠದಲ್ಲಿ ಕನ್ನಡಿ ಒರೆಸಲಾಗಿದೆ. ಅಂತವರು ಬಂದು ತಮ್ಮ ಮುಖಕ್ಕೆ ಏನನ್ನು ಬಳೆದುಕೊಂಡು ಬಂದಿದ್ದಾರೆ ಎಂಬುದು ನೋಡಬಹುದು. ಆದರೆ ನಾವು ರಾಜಕೀಯ ಮಾಡಲ್ಲ. ಅಡಿವಿಸಿದ್ಧೇಶ್ವರ ಶ್ರೀಮಠವು ಯಾವುದೇ ಜಾತಿ, ಜನಾಂಗಕ್ಕೆ ಸಮೀತವಾಗಿಲ್ಲ ಸರ್ವ ಧರ್ಮ, ಜನಾಂಗಳ ಮಠವಾಗಿದೆ ಎಂದರು.

ಶ್ರೀ ಅಡವಿಸಿದ್ಧೇಶ್ವರ ಅಜ್ಜನವರು 777ವರ್ಷಗಳ ತಮ್ಮ ಜೀವಿತಾವಧಿಯಲ್ಲಿ ದೇಶದ ಅನೇಕ ಭಾಗಗಳಲ್ಲಿ 777ಕ್ಕೂ ಹೆಚ್ಚು ಸ್ಥಳಗಳಲ್ಲಿ ತಪಸ್ಸನ್ನು ಗೈದು ಭಕ್ತರ ಉದ್ದಾರಕ್ಕೆ ಶ್ರಮಿಸಿದ್ದರು. ಅವರು ತಪಸ್ಸು ಮಾಡಿದ ಸ್ಥಳದಲ್ಲಿ ಗುಡಿ ಗೋಪುರಗಳು ನಿರ್ಮಾಣವಾಗಿವೆ. ಅವುಗಳಲ್ಲಿ 367 ಶಾಖಾ ಮಠಗಳಿದ್ದು ಅವುಗಳ ಬಗ್ಗೆ ಮಾಹಿತಯನ್ನು ಕಲೆಹಾಕಿದ್ದಿನಿ, 80ಕ್ಕೂ ಅಧಿಕ ಮಠಗಳಿಗೆ ಈಗಾಗಲೇ ಭೇಟಿ ನೀಡಿದ್ದೇನೆ. ಸ್ವತಂತ್ರ್ಯ ಪೂರ್ವದಲ್ಲಿ ಕೆಲವು ನಷಿಸಿಹೋಗಿರುವದಾಗಿ ಹೇಳಿದ ಅವರು, ಬೆಳಗಾವಿ ಜಿಲ್ಲೆಯ ಹಾಗೂ ಕುಂದರನಾಡು ಭಾಗದ ಮಕ್ಕಳಿಗಾಗಿ ಸುಕುಮಾರ ಶ್ರೀ ಹಾನಗಲ್ ಕುಮಾರಜ್ಜನವರ ಹೆಸರಿನಲ್ಲಿ ಸಂಗೀತ ಪಾಠಶಾಲೆಯನ್ನು ಪ್ರಾರಂಭಿಸಲಾಗಿದೆ ಇದರ ಸದುಪಯೋಗಪಡಿಸಿಕೊಳ್ಳುವಂತೆ ತಿಳಿಸಿದರು.

ವೇದಿಕೆಯ ಮೇಲೆ ಮುರಗೋಡದ ಶ್ರೀ ಮಹಾಂತ ದುರದುಂಡೇಶ್ವರ ಮಠದ ನೀಲಕಂಠ ಮಹಾಸ್ವಾಮಿಗಳು, ಮುನವಳ್ಳಿ ಸೋಮಶೇಖರ ಮಠದ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳು, ಕಮತಗಿ ಹೊಳೆಹುಚ್ಚೇಶ್ವರ ಸಂಸ್ಥಾನ ಮಠದ ಶ್ರೀ ಹುಚ್ಚೇಶ್ವರ ಮಹಾಸ್ವಾಮಿಗಳು, ಹುಕ್ಕೇರಿಯ ಶಿವಬಸವ ಮಹಾಸ್ವಾಮಿಗಳು, ಕಾರಂಜಿಮಠದ ಶ್ರೀ ಗುರುಸಿದ್ಧ ಮಹಾಸ್ವಾಮಿಗಳು, ಅರಳಿಕಟ್ಟಿ ತೊಂಟದಾರ್ಯ ವಿತರಕ್ತ ಮಠದ ಶ್ರೀ ಶಿವಮೂರ್ತಿ ಮಹಾಸ್ವಾಮಿಗಳು, ಕಮತೇನಟ್ಟಿ ಪ್ರಭುಲಿಂಗೇಶ್ವರ ಮಠದ ಶ್ರೀ ಗುರುದೇವ ದೇವರು, ಪಾಶ್ಚಾಪೂರದ ಶ್ರೀ ವಿಶ್ವರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು, ರಾಯಚೂರು ನವಲಕಲ್ ಮಠದ ಶ್ರೀ ಸೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳು, ಮಮದಾಪೂರದ ಶ್ರೀ ಚರಮೂರ್ತೇಶ್ವರ ಮಹಾಸ್ವಾಮಿಗಳು, ಬೈಲಹೊಂಗಲದ ಆರಾದ್ರಿಮಠದ ಡಾ.ಮಹಾಂತೇಶ ಶಾಸ್ತ್ರಿಗಳು, ಶಾಸಕರುಗಳಾದ ಬಾಬಾಸಾಹೇಬ ಪಾಟೀಲ, ವಿಶ್ವಾಶ ವೈದ್ಯ, ಪೃಥ್ವಿರಾಜ ಕತ್ತಿ, ಮಾಜಿ ವಿಧಾನ ಪರಿಷತ ಸದಸ್ಯ ಮಹಾಂತೇಶ ಕವಟಗಿಮಠ, ಮುಖಂಡರಾದ ಅಶೋಕ ಪೂಜೇರಿ, ಭರತ ಈಟಿ, ಬ್ರೀಜೇಷ ಪಾಟೀಲ ಉಪಸ್ಥಿತರಿದ್ದರು.

ಶ್ರೀ ಅಡವಿಸಿದ್ಧೇಶ್ವರ ಸಂಸ್ಥಾನ ಮಠದ ಪೀಠಾಧಿಪತಿ ಶ್ರೀ ಅಮರಸಿದ್ಧೇಶ್ವರ ಶ್ರೀಗಳಿಗೆ ವಿವಿಧ ಸಂಘ ಸಂಸ್ಥೆಗಳು, ಗಣ್ಯ ಮಾನ್ಯರು, ಕನ್ನಡಪರ ಸಂಘನೆಯವರು ಗೌರವಾಭಿನಂಧನೆ ಸಲ್ಲಿಸಿದರು.

# ಶ್ರೀ ಸತ್ಯಸಾಯಿ ಬಾಬಾರವರ 99 ನೇ ಜನ್ಮದಿನೋತ್ಸವ ಸಸಿ ನೆಡುವ ಮೂಲಕ ಚಾಲನೆ



**ಮೂಡಲಗಿ :** ತಾಲೂಕಿನ ಕಲ್ಲೋಳಿ ಪಟ್ಟಣದ ಪಿಜೆಎನ್ ಪ್ರೌಢ ಶಾಲೆಯಲ್ಲಿ ಶ್ರೀ ಸತ್ಯಸಾಯಿ ಬಾಬಾರವರ 99 ನೇ ಜನ್ಮದಿನೋತ್ಸವನ್ನು ಗೋಕಾಕ ತಹಶೀಲ್ದಾರ ಮೋಹನ ಭಸ್ಮೇ ಅವರು ಸಸಿ ನೆಡುವ ಮೂಲಕ ಚಾಲನೆ ನೀಡಿದರು.

ಶನಿವಾರ ಶ್ರೀ ಸಾಯಿನಿತ್ಯೋತ್ಸವ ಲೋಕಸೇವಾ ಟ್ರಸ್ಟ ವತಿಯಿಂದ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ಪ್ರತಿನಿತ್ಯ ಸೇವೆ ಮಾಡುವ ಮೂಲಕ ಸಾಧನೆ ಮಾಡಬೇಕು,ನಿರೀಕ್ಷೆ ಇಲ್ಲದೇ ಸೇವೆಯಲ್ಲಿ ತೊಡಗಿಕೊಳ್ಳಬೇಕು,ಯಾವುದೇ ಸಾಧನೆಗೆ ಗುರಿ ಮುಖ್ಯ ಗುರಿ ಇಟ್ಟುಕೋಳ್ಳುತ್ತೇವೆ ಆದರೆ ಆಲೋಚನೆ ಮಾಡುವುದಿಲ್ಲ ಆವಾಗ ಗುರಿ ಮುಟ್ಟುವಲ್ಲಿ ವಿಫಲವಾಗುತ್ತೇವೆ.ಸಾಧನೆಗೆ ಬಡವ,ಶ್ರೀಮಂತ ಮುಖ್ಯವಲ್ಲ,ಸಾಯಿಬಾಬಾರವರ ಮೌಲ್ಯಗಳನ್ನು ಯಾರು ಜೀವನದಲ್ಲಿ ಅಳವಡಿಸಿ ಕೊಳ್ಳುತ್ತಾರೆ ಅವರೇ ಶ್ರೀಮಂತರು ಎಂದರು.

ಉಪನ್ಯಾಸಕರಾಗಿ ಆಗಮಿಸಿದ ಶಿಕ್ಷಕಿ ಮಹಾದೇವಿ ಹುಕ್ಕೇರಿ ಮಾತನಾಡಿ ಶ್ರೀ ಸತ್ಯಸಾಯಿ ಬಾಬಾರವರ ಜೀವನ ಕುರಿತು ಹೇಳಿದ ಅವರು ಬಾಬಾರವರು ಮಾನವೀಯ ಮೌಲ್ಯಗಳನ್ನು ಜೀವನದಲ್ಲಿ ಅಳವ 'ಡಿಕೊಳ್ಳಬೇಕೆಂದರು.ಬಾಬಾರವರ ಪ್ರೇರಣೆಯಿಂದ ಲಕ್ಷಾಂತರ ಭಕ್ತರು ಪರಿವರ್ತನೆಯಾಗಿದ್ದಾರೆಂದರು. ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಸತ್ಯಸಾಯಿ ಬಾಬಾರವರ ಸಂದೇಶ ಹೊತ್ತ ಕಾರ್ಡಗಳನ್ನು ವಿತ-ರಿಸಿದರು.ಶ್ರೀ ಸಾಯಿನಿತ್ಯೋತ್ಸವ ಲೋಕಸೇವಾ ಟ್ರಸ್ಟ ಲೋಗೋವನ್ನು ಬಿಡುಗಡೆಗೊಳಿಸಿದರು.

ಅಧ್ಯಕ್ಷತೆಯನ್ನು ನಿಂಗಾಪುರ ಶ್ರೀ ಸಾಯಿನಿತ್ಯೋತ್ಸವ ಲೋಕಸೇವಾ ಟ್ರಸ್ಟ್ ಅಧ್ಯಕ್ಷರಾದ ಆರ್ ಆರ್ ನಾಡಗೌಡರ ವಹಿಸಿದ್ದರು. ಅತಿಥಿಗಳಾಗಿ ಆರ್ಯವೇದ ವೈದ್ಯರಾದ ತುಕಾರಾಮ ಉಮರಾಣಿ, ಶಿಕ್ಷಕ ಅರವಿಂದ ಚೌವಡನ್ನವರ,ಪ್ರಕಾಶ ಕುರಬೇಟ, ಶಿಕ್ಷಕಿ ಕೆ.ಎಂ.ಭರನಟ್ಟಿ,ಪರಪ್ಪ ಗಿರೆಣ್ಣವರ,ಮಲ್ಲಪ್ಪ ಉಳ್ಳಾಗಡ್ಡಿ

ಟ್ರಸ್ಟ ಸದಸ್ಯರಾದ ಸಚಿನ ಬಾಗೋಜಿ, ಭೀಮಶಿ ಹುಲಕುಂದ, ನಾಮದೇವ್ ಉಮರಾಣಿ, ಬಸವರಾಜ ಸಪ್ಪಡ್ಲ, ಸಿದ್ದು ಗದಾಡಿ ಸೇರಿದಂತೆ ಅನೇಕ ಸಾಯಿಬಾಬಾರವರ ಭಕ್ತರು,ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.ವಿನಾಯಕ ಪರವಿನಾಯ್ಕರ ಸ್ವಾಗತಿಸಿದರು, ಶಿಕ್ಷಕ ವಿ ವಾಯ್ ಕೋಳದೂರ ಪರಿಚಯಿಸಿದರು ,ದುಂಡಪ್ಪ ಬೀರಗೌಡರ ಕಾರ್ಯಕ್ರಮ ನಿರೂಪಿಸಿದರು.ರಮೇಶ ಲಂಗೋಟಿ ವಂದಿಸಿದರು.



**ಗೋಕಾಕ: ನಗರದ ಶ್ರೀ ಲಕ್ಷ್ಮೀ ದೇವಿ ಪಾದಗಟ್ಟಿ ಕಾರ್ತಿಕೋತ್ಸವದ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಅವರನ್ನು ಪಾದಗಟ್ಟಿ ಮಹಿಳಾ ಮಂಡಳಿ ವತಿಯಿಂದ ಇತ್ತೀಚೆಗೆ ಸತ್ಕರಿಸಲಾಯಿತು.**
**ಈ ಸಂದರ್ಭದಲ್ಲಿ ಜಯಾ ಕಮತ್, ಅನುಪಾ ಕೌಶಿಕ್, ಡಾ. ಪ್ರೀತಿ ವಣ್ಣೂರ, ಡಾ.ಪೂರ್ಣಿಮಾ ಜನ್ಮಟ್ಟಿ, ಡಾ.ಶೃತಿ ಹೊಸಮನಿ ಇದ್ದರು.**



**ಗೋಕಾಕ: ನಗರದ ಶ್ರೀ ಲಕ್ಷ್ಮೀ ದೇವಿ ಪಾದಗಟ್ಟಿ ಕಾರ್ತಿಕೋತ್ಸವದ ಮಹಾ ಪ್ರಸಾದಕ್ಕೆ ರವಿವಾರದಂದು ವಿಧಾನ ಪರಿಷತ್ ಸದಸ್ಯ ಲಖನ್ ಜಾರಕಿಹೊಳಿ ಚಾಲನೆ ನೀಡಿದರು.**
**ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷ ಪ್ರಕಾಶ ಮುರಾರಿ, ಸದಸ್ಯ ಜಯಾನಂದ ಹುಣ್ಣಾಚ್ಯಾಳಿ, ಕಮಿಟಿಯ ವೀರುಪಾಕ್ಷಿ ಮಿರ್ಜಿ, ಬಿ.ಬಿ.ರಾವುತ, ಸುರಜ ಪಾಟೀಲ್, ಲಖಮಣ್ಣಗೌಡಾ ಪಾಟೀಲ, ಮಹಾದೇವ ಕೌಜಲಗಿ, ದೊಡ್ಡಪ್ಪ ರಾವುತ ಇದ್ದಾರು.**

# ಬಿಜಾಪುರ: ಸಂವಿಧಾನ ದಿನಾಚರಣೆ ಇಂದು

**ವಿಜಯ**ಪುರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನವೆಂಬರ 26 ರಂದು ಸಂವಿಧಾನ ದಿನಾಚರಣೆ ಹಾಗೂ ವಿಚಾರ ಸಂಕಿರಣ -2024 ಕಾರ್ಯಕ್ರಮ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ರವರ ಜೀವನದ ಪ್ರಮುಖ ಘಟ್ಟಗಳ ಕುರಿತಾಗಿರುವ ಛಾಯಚಿತ್ರಗಳ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 9.30ಕ್ಕೆ ಸಂವಿಧಾನ ದಿನಾಚರಣೆ ಕಾರ್ಯಕ್ರಮದ ಅಂಗವಾಗಿ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದವರೆಗೆ ಭಾರತದ ಸಂವಿಧಾನ ಜಾಗೃತಿ ಜಾಥ ನಡೆಯಲಿದ್ದು, ಬೆಳಿಗ್ಗೆ 10.30ಕ್ಕೆ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಬೃಹತ್ ಮತ್ತು ಮಧ್ಯಮ ಕೈಗಾ-ರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಂ. ಬಿ. ಪಾಟೀಲ ಅವರು ಉದ್ಘಾಟಿಸಲಿದ್ದಾರೆ. ವಿಜಯಪುರ ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಎಸ್ ಪಾಟೀಲ, ಕರ್ನಾಟಕ ಸರ್ಕಾರದ ನವದೆಹಲಿಯ ವಿಶೇಷ ಪ್ರತಿನಿಧಿ ಹಾಗೂ ವಿಧಾನ ಪರಿಷತ್ತಿನ ಶಾಸಕರಾದ ಪ್ರಕಾಶ ಹುಕ್ಕೇರಿ, ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜೆಂಟ್ ನಿಯಮಿತದ ಅಧ್ಯಕ್ಷರು ಹಾಗೂ ಶಾಸಕರಾದ ಅಪ್ಪಾಜಿ ಸಿ.ಎಸ್. ನಾಡಗೌಡ, ಸಂಸದರಾದ ರಮೇಶ ಜಿಗಜಿಣಗಿ, ಶ್ರೀಮತಿ ಸುಧಾ ಮೂರ್ತಿ ಸೇರಿದಂತೆ ಜಿಲ್ಲೆಯ ವಿವಿಧ ಶಾಸಕರು, ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ.

ಈ ಕಾರ್ಯಕ್ರಮದ ಕುರಿತು ಬಿಜಾಪುರದ ಅಖಿಲ ಭಾರತ ದಲಿತ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರು ಹಾಗೂ ಹಿರಿಯ ಸಾಹಿತಿಗಳಾದ ಡಾ. ಎಚ್.ಟಿ. ಪೋತೆ ಆಶಯ ನುಡಿಗಳನ್ನಾಡಲಿದ್ದಾರೆ.

ವೇದಿಕೆ ಕಾರ್ಯಕ್ರಮದಲ್ಲಿ ಭಾರತ ಸಂವಿಧಾನ ಕುರಿತು ವಿಚಾರ ಸಂಕಿರಣ ಹಮ್ಮಿಕೊಂಡಿದ್ದು, ಭಾರತ ಸಂವಿಧಾನದ ಹೆಜ್ಜೆಗಳು ಕುರಿತಾಗಿ ಕೂಡಗಿ ಸರ್ಕಾರಿ ಪದವು ಪೂರ್ವ ಮಹಾವಿದ್ಯಾಲಯ ಉಪನ್ಯಾಸಕರಾದ ಬಸವರಾಜ ಜಾಲವಾದ ವಿಷಯ ಮಂಡನೆ ಮಾಡಲಿದ್ದಾರೆ. ಭಾರತದ ಸಂವಿಧಾನದ ಪ್ರಸ್ತಾವನೆ ಆಶಯಗಳ ಕುರಿತು ಲಚ್ಯಾಣದ ಸರಕಾರಿ ಪದವಿ ಪೂರ್ವ ಕಾಲೇಜಿನ ಭೀಮರಾವ ಗೊಣಸಗಿ ಅವರು ವಿಷಯ ಮಂಡನೆ ಮಾಡಲಿದ್ದಾರೆ. ಈ ಗೋಷ್ಠಿಗೆ ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ ಅಧ್ಯಕ್ಷತೆ ವಹಿಸಲಿದ್ದಾರೆ.

ಸಂವಿಧಾನದ ಮೂಲಭೂತ ಹಕ್ಕು ಮತ್ತು ಕರ್ತವ್ಯಗಳು ಹಾಗೂ ಕಲ್ಯಾಣ ರಾಜ್ಯದ ಪರಿಕಲ್ಪನೆ ವಿಷಯದ ಕುರಿತು ನ್ಯಾಯವಾದಿಗಳ ಸಂಘದ ಗೌರವ ಕಾರ್ಯದರ್ಶಿ ಸುರೇಶ ಚೂರಿ ವಿಷಯ ಮಂಡನೆ ಮಾಡಲಿದ್ದಾರೆ. ಸಂವಿಧಾನ ಅಂದು ಮತ್ತು ಮುಂದು ಎಂಬ ವಿಷಯದ ಕುರಿತು ತಾಳಿಕೋಟೆಯ ಎಸ್ ಕೆ ಕಲಾ ವಾಣಿಜ್ಯ ಮತ್ತು ವಿಜ್ಞಾನ ಮಹಾವಿದ್ಯಾಲಯದ ಕನ್ನಡ ಸಹಾಯಕ ಪ್ರಾಧ್ಯಾಪಕಿ ಡಾ.ಸುಜಾತ ಚಲವಾದಿ ವಿಷಯ ಮಂಡನೆ ಮಾಡಲಿದ್ದಾರೆ. ಈ ಗೋಷ್ಠಿಯ ಅಧ್ಯಕ್ಷತೆಯನ್ನು ವಿಜಯಪೂರದ ಸಹಕಾರಿ ಇಲಾಖೆಯ ನಿವೃತ್ತ ಉಪ ನಿರ್ದೇಶಕ ಬಿ. ಆರ್ ಬನಸೋಡೆ ಅಧ್ಯಕ್ಷತೆ ವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ.ಬಿ.ಆರ್ ಅಂಬೇಡ್ಕರ್ ಅವರ ಹಾಗೂ ಸಂವಿಧಾನದ ಕು-ರಿತು ಗಾಯನ ಕಾರ್ಯಕ್ರಮ, ಡಾ.ಬಿ. ಆರ್. ಅಂಬೇಡ್ಕರ್ ಅವರ ಹೋರಾಟದ ಹಾದಿಯ ಕುರಿತು ರಂಗನಾಥ್ ಬತ್ತಾಸಿ ಅವರ ತಂಡದಿಂದ ನೃತ್ಯರೂಪಕ ಪ್ರದರ್ಶನಗೊಳ್ಳಲಿದೆ ಎಂದು ಪ್ರಕಟಣೆ ತಿಳಿಸಿದೆ.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 06, Issue : 243, Postal Reg No. PMG/KA/NK/BM/135/22-24 / POST AT Vantamury Colony Post Office